ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು , ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 156

3–12–2025 ಬುಧವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 156

## ‘ಕೈ’ ಮಾಜಿ ಶಾಸಕ ದೇವರಾಜ್ ನಿಧನ

ಚಿಕ್ಕಪೇಟೆ ಮಾಜಿ ಶಾಸಕ ಆರ್ ವಿ ದೇವರಾಜ್ ತೀವ್ರ ಹೃದಯಾಘಾತದಿಂದ ನಿಧನರಾಗಿದ್ದಾರೆ. ಮೈಸೂರಿನ ಚಾಮುಂಡಿ ಬೆಟ್ಟಕ್ಕೆ ತೆರಳುತ್ತಿದ್ದಾಗ ಸೋಮವಾರ ಸಂಜೆ ಅವರಿಗೆ ಹೃದಯಾಘಾತವಾಗಿದೆ. 67 ವರ್ಷ ವಯಸ್ಸಿನ ಆರ್ ವಿ ದೇವರಾಜ್ ಅವರನ್ನು ಕೂಡಲೆ ಮೈಸೂರಿನ ಅಪೋಲೋ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಬಳಿಕ ಅವರನ್ನು ಜಯದೇವ ಆಸ್ಪತ್ರೆಗೆ ರವಾನಿಸಿ ದಾಖಲಿಸಲಾಗಿತ್ತು. ಆದರೆ ಚಿಕಿತ್ಸೆ ಫಲಿಸದೇ ಆರ್‌ವಿ ದೇವರಾಜ್ ಕೊನೆಯುಸಿರೆಳೆದಿದ್ದಾರೆ.



## ಡಿ. 3 ರಂದು ವಿಶ್ವ ವಿಕಲಚೇತನರ ದಿನಾಚರಣೆ

**ದಾವಣಗೆರೆ :** ಡಿಸೆಂಬರ್ 3 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿಗಳ ಕಾರ್ಯಾಲಯದ ತುಂಗಭದ್ರ ಸಭಾಂಗಣದಲ್ಲಿ ವಿಶ್ವ ವಿಕಲಚೇತನರ ದಿನಾಚರಣೆ ಕಾರ್ಯಕ್ರಮ ಆಯೋಜಿಸಲಾಗಿದೆ.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಜಿಲ್ಲಾ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ವಿಕಲಚೇತನರ ಶ್ರೇಯೋಭಿವೃದ್ಧಿಗಾಗಿ ಶ್ರಮಿಸುತ್ತಿರುವ ಸ್ವಯಂ ಸೇವಾ ಸಂಘ ಸಂಸ್ಥೆಗಳ ಸಹಯೋಗದಲ್ಲಿ ಆಯೋಜಿಸಲಾದ ಕಾರ್ಯಕ್ರಮವನ್ನು ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿ–ಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್. ಮಲ್ಲಿಕಾರ್ಜುನ್ ಉದ್ಘಾಟಿಸುವರು. ಶಾಸಕರಾದ ಡಾ.ಶಾಮನೂರು ಶಿವಶಂಕರಪ್ಪ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ್, ಮಾಯಕೊಂಡ ಶಾಸಕರಾದ ಕೆ.ಎಸ್.ಬಸವಂತಪ್ಪ, ಜಗಳೂರು ಶಾಸಕ ಬಿ.ದೇವೇಂದ್ರಪ್ಪ, ಹೊನ್ನಾಳಿ ಶಾಸಕ ಶಾಂತನಗೌಡ ಡಿ.ಜಿ, ಚನ್ನಗಿರಿ ಶಾಸಕ ಬಸವರಾಜು ವಿ.ಶಿವಗಂಗಾ, ಹರಿಹರ ಶಾಸಕ ಬಿ.ಪಿ ಹರೀಶ್, ವಿಧಾನ ಪರಿಷತ್ ಸದಸ್ಯರಾದ ಎಸ್.ಎಲ್.ಭೋಜೇಗೌಡ, ಚಿದಾನಂದ ಎಂ.ಗೌಡ, ಡಿ.ಎಸ್ ಅರುಣ್, ಕೆ.ಎಸ್.ನವೀನ್, ಕೆ.ಅಬ್ದುಲ್ ಜಬ್ಬಾರ್ ಮತ್ತಿತರರು ಭಾಗವಹಿಸುವರು.

### ಸಿದ್ದು, ಡಿಕೆಶಿ ಡಬಲ್ ಬ್ರೇಕ್ ಫಾಸ್ಟ್ । ನಾಟಿಕೋಳಿ, ಇಡ್ಲಿ ಜೊತೆ ಮಾತುಕತೆ

# ಹೈಕಮಾಂಡ್ ಹೇಳಿದ್ರೆ ಡಿಕೆಶಿ ಸಿಎಂ; ನನ್ನದೇನು ಅಭ್ಯಂತರವಿಲ್ಲ: ಸಿದ್ದು

**ಬೆಂಗಳೂರು:** ರಾಜ್ಯದಲ್ಲಿ ಮುಖ್ಯಮಂತ್ರಿ ಕುರ್ಚಿ ಕಿತ್ತಾಟಕ್ಕೆ ಸದ್ಯ ವಿರಾಮ ದೊರೆತ್ತಿರುವಂತೆಯೇ 2ನೇ ಬಾರಿಗೆ ನಡೆದ ‘ಬ್ರೇಕ್ ಪಾಸ್ಟ್ ‘ ರಾಜಕೀಯ ತೀವ್ರ ಕುತೂಹಲಕ್ಕೆ ಕಾರಣವಾಯಿತು.

ಸದಾಶಿವನಗರದಲ್ಲಿರುವ ಡಿಕೆ ಶಿವಕುಮಾರ್ ಅವರ ನಿವಾಸದಲ್ಲಿ ನಡೆದ ಉಪಹಾರ ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಹಾರ ಸಭೆಯಲ್ಲಿ ಪಕ್ಷ ಹಾಗೂ ಸರ್ಕಾರದ ವಿಚಾರ ಕುರಿತು ಚರ್ಚೆ ಮಾಡಿದ್ದೇವೆ. ಡಿಸೆಂಬರ್ 8 ರಿಂದ ಬೆಳಗಾವಿಯಲ್ಲಿ ಚಳಿಗಾಲದ ಅಧಿವೇಶನ ಪ್ರಾರಂಭವಾಗಲಿರುವ ಹಿನ್ನೆಲೆಯಲ್ಲಿ ಸಭೆ ನಡೆಸಿದ್ದು, ವಿಪಕ್ಷಗಳು ಯಾವುದೇ ವಿಚಾರ ಪ್ರಸ್ತಾಪಿಸಿದ್ರೂ ಎದುರಿಸುತ್ತೇವೆ ಎಂದರು.

ಒಗ್ಗಟ್ಟು ಪ್ರದರ್ಶನ: ನಾನು ಮತ್ತು ಡಿಸಿಎಂ ಡಿಕೆ ಶಿವಕುಮಾರ್ ಬ್ರದರ್ಸ್, ಇಬ್ಬರದು ಒಂದೇ ಪಕ್ಷ, ಒಂದೇ ಸಿದ್ಧಾಂತ. ನಾವು ಯಾವಾಗಲೂ ಒಟ್ಟಾಗಿ ಇದ್ದೇವೆ. ನಮ್ಮ ನಡುವೆ ಯಾವುದೇ ಭಿನ್ನಾಭಿಪ್ರಾಯವಿಲ್ಲ. ಉಪಹಾರಕ್ಕೆ ಕರೆದಾಗ ಹಳ್ಳಿಯಿಂದ ನಾಟಿ ಕೋಳಿ ತರುವಂತೆ ಹೇಳಿದ್ದಂತೆ ಅದರಂತೆ ನಾಟಿ ಕೋಳಿ ಸವಿದಿದ್ದೇನೆ. ನಾನು ನಾನ್ ವೆಜ್. ಅವರು ವೆಜ್.





ರಾಹುಲ್ ಗಾಂಧಿ ಹೇಳಿದಂತೆ ನಡೆದುಕೊಳ್ಳಬೇಕು. ಪಕ್ಷ ಹಾಗೂ ಸರ್ಕಾರದಲ್ಲಿ ಯಾವುದೇ ಭಿನ್ನಮತವಿಲ್ಲ. ಎಲ್ಲಾ ಶಾಸಕರು ಒಗ್ಗಟ್ಟಾಗಿದ್ದೇವೆ, ಭವಿಷ್ಯದಲ್ಲೂ ಒಗ್ಗಟ್ಟಾಗಿ ಇರ್ತೀವಿ. ಅಧಿವೇಶನದ ಸಂದರ್ಭದಲ್ಲಿ ಎಲ್ಲಾ ಶಾಸಕರು ಒಗ್ಗಟ್ಟಾಗಿ ವಿಪಕ್ಷವನ್ನು ಎದುರಿಸುತ್ತೇವೆ ಎಂದರು.

ರಾಹುಲ್ ಹೇಳಿದಂತೆ ಕೇಳಬೇಕು: ಹೈಕಮಾಂಡ್ ತೀರ್ಮಾನದಂತೆ ಸಂಪುಟ ವಿಸ್ತರಣೆ ಮಾಡುತ್ತೇವೆ. ಸಂಪುಟ ವಿಸ್ತರಣೆ ಬಗ್ಗೆ ಮೊನ್ನೆಯೇ ತೀರ್ಮಾನ ಆಗಿದೆ. ಹೈಕಮಾಂಡ್ ಹೇಳಿದಂತೆ ನಡೆದುಕೊಳ್ಳುತ್ತೇವೆ. ರಾಹುಲ್ ಗಾಂಧಿ ಹೇಳಿದಂತೆ ನಡೆದುಕೊಳ್ಳಬೇಕು. ನಾಳೆ ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ. ಸಿ. ವೇಣುಗೋಪಾಲ್ ಮಂಗಳೂರಿಗೆ ಭೇಟಿ ನೀಡುತ್ತಿದ್ದು, ಅವರನ್ನು ಭೇಟಿಯಾಗುತ್ತೆ. ಹೈಕಮಾಂಡ್ ಯಾವಾಗಲೂ ಕರೆದರೂ ಹೋಗುತ್ತೇವೆ ಎಂದರು.

ಹೈಕಮಾಂಡ್ ಹೇಳಿದಾಗ ಡಿಕೆ ಸಿಎಂ: ಈ ಮಧ್ಯೆ ಡಿಕೆ ಶಿವಕುಮಾರ್ ಯಾವಾಗ ಸಿಎಂ ಪ್ರಶ್ನೆಗೆ ಉತ್ತರಿಸಿದ ಮುಖ್ಯಮಂತ್ರಿ ಹೈಕಮಾಂಡ್ ಹೇಳಿದಾಗ ಎಂದರು.

ರೈತರ ಸಮಸ್ಯೆಗಳ ಬಗ್ಗೆಯೂ ಚರ್ಚೆ: ರಾಜ್ಯದಲ್ಲಿನ ರೈತರ ಬಗ್ಗೆಯೂ ಸಭೆಯಲ್ಲಿ ಚರ್ಚೆ ನಡೆದಿದೆ. ಸರ್ಕಾರ ಯಾವಾಗಲೂ ರೈತರ ಪರವಾಗಿದೆ. ಈ ಬಾರಿ ರೈತರು ಹೆಚ್ಚು ಮೆಕ್ಕೆಜೋಳ ಬೆಳೆದಿದ್ದಾರೆ. 54–55 ಲಕ್ಷ ಮೆಟ್ರಿಕ್ ಟನ್ ಮೆಕ್ಕೆಜೋಳ ಉತ್ಪಾದನೆ ಆಗಬಹುದು. ಮೆಕ್ಕೆ ಜೋಳಕ್ಕೆ ಕೇಂದ್ರ ಸರ್ಕಾರ–ಕ್ಕೆ 2400 ರೂ. ಕನಿಷ್ಠ ಬೆಂಬಲ ಬೆಲೆ ನಿಗದಿಮಾಡಿದೆ. ಆದರೆ ಮಾರುಕಟ್ಟೆ ಬೇರೆ ಬೇರೆ ಬೆಲೆ ಇದೆ. ಕನಿಷ್ಠ ಬೆಂಬಲ ಬೆಲೆ ಹಾಗೂ ಒಖಕ ನಿಗದಿ ಮಾಡುವುದು ಕೇಂದ್ರ ಸರ್ಕಾರ. ಅದನ್ನು ನ್ಯಾಯ ಬೆಲೆ ಅಂಗಡಿ ಮೂಲಕ ವಿತರಣೆ ಮಾಡಲು ಕೇಂದ್ರ ಸರ್ಕಾರ ಹೇಳಿದೆ. ಆದರೆ, ಹಾಗೆ ಮಾಡಲು ಸಾಧ್ಯವಿಲ್ಲ ಎಂದು ಮುಖ್ಯಮಂತ್ರಿ ಹೇಳಿದರು. ಕಬ್ಬಿಗೆ ಬೆಲೆ ನಿಗದಿ ವಿಚಾರವಾಗಿ ಚರ್ಚೆ ನಡೆದಿದೆ ಎಂದು ಮುಖ್ಯಮಂತ್ರಿ ತಿಳಿಸಿದರು.

ಡಿ.8 ಕ್ಕೆ ದೆಹಲಿ ಭೇಟಿ: ಇನ್ನೂ ಡಿಸಿಎಂ ಡಿಕೆ ಶಿವಕುಮಾರ್ ಮಾತನಾಡಿ, ಉಪಹಾರ ಸಭೆಗೆ ಮೊದಲು ನಾನೇ ಸಿಎಂ ಅವರನ್ನು ಆಹ್ವಾನಿಸಿದೆ. ಆದರೆ, ಅವರ ಮನೆಯಲ್ಲಿ ಮೊದಲ ಉಪಹಾರ ಸಭೆ ನಡೆಯಿತು. ಇಂದಿನ ಸಭೆಯಲ್ಲಿ ಪಕ್ಷ, ಸರ್ಕಾರ ಹಾಗೂ ಅಧಿವೇಶನದ ಬಗ್ಗೆ ಚರ್ಚೆ ನಡೆದಿದೆ. ಉತ್ತಮ ಆಡಳಿತ ನೀಡಲು ಹಾಗೂ ನಮ್ಮ ರಾಜ್ಯದ ನಿರಂತರ ಅಭಿವೃದ್ಧಿಗೆ ಬದ್ಧರಾಗಿದ್ದೇವೆ ಎಂದು ಪುನರುಚ್ಚರಿಸುತ್ತೇವೆ. ಡಿಸೆಂಬರ್ 8 ರಂದು ದೆಹಲಿಗೆ ಹೋಗುತ್ತೇವೆ ಎಂದು ತಿಳಿಸಿದರು.

# ಉಳಿಕೆ ಸರ್ಕಾರಿ ನಿವೇಶನ ಇಲಾಖೆಗಳ ವಿವಿಧ ಉದ್ದೇಶಿತ ಕಟ್ಟಡಗಳಿಗೆ ಹಂಚಿಕೆ: ಜಿಲ್ಲಾಧಿಕಾರಿ ಗಂಗಾಧರಸ್ವಾಮಿ

**ದಾವಣಗೆರೆ :** ದಾವಣಗೆರೆಯಲ್ಲಿ ಸರ್ಕಾರಿ ನಿವೇಶನಗಳು ಖಾಲಿ ಇದ್ದರೆ ಅವುಗಳನ್ನು ಕೂಡಲೇ ಸರ್ಕಾರಿ ಕಚೇರಿಗಳ ಉಪಯೋಗಕ್ಕೆ ನೀಡಬೇಕೆಂದು ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ ಸೂಚಿಸಿದರು.

ಮಂಗಳವಾರ(ಡಿ.2) ರಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪ್ರಧಾನ ಮಂತ್ರಿಗಳ 15 ಅಂಶಗಳ ಕಾರ್ಯಕ್ರಮದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ವಿದ್ಯಾರ್ಥಿಗಳಿಗೆ ಹಾಸ್ಟೆಲ್ ಕೊರತೆಯಾಗಬಾರದು. 100 ವಿದ್ಯಾರ್ಥಿಗಳು ವಾಸಿಸುವ ಕಟ್ಟಡಕ್ಕೆ ಬದಲಾಗಿ 400 ವಿದ್ಯಾರ್ಥಿಗಳು ವಾಸ ಮಾಡುವ ಕಟ್ಟಡವನ್ನು



ನಿರ್ಮಿಸಬೇಕು ಎಂದರು. ಖಬರಸ್ಥಾನಕ್ಕೆ ಮತ್ತು ಸ್ಮಶಾನಕ್ಕೆ ಜಾಗದ ಅವಶ್ಯಕತೆ ಇದ್ದರೆ ನೀಡಲಾಗುತ್ತದೆ ಎಂದು ಭರವಸೆ ನೀಡಿದರು. ಅಂಗನವಾಡಿ ಕೇಂದ್ರಗಳನ್ನು ಅಲ್ಪಸಂಖ್ಯಾತರ ಸಮುದಾಯದ ಜನರು ಅಧಿಕವಾಗಿ ವಾಸಿಸುತ್ತಿರುವ ತಾಲ್ಲೂಕುಗಳು ಮತ್ತು ಗ್ರಾಮಗಳಲ್ಲಿ ತೆರೆಯುವುದು, ಇದರಿಂದಾಗಿ ಯೋಜನೆಯ ಪ್ರಯೋಜನೆಗಳು ಅವರುಗಳಿಗೆ ನೇರವಾಗಿ ಸಿಗುತ್ತವೆ.

ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿರುವ ಶಾಲೆ, ಕಾಲೇಜು ಹಾಗೂ ಅಂಗನವಾಡಿಗಳಿಗೆ ವಕ್ಫ್ ಬೋರ್ಡ್ ಅಥವಾ ಯಾವುದೇ ಇಲಾಖೆಯ ಅಧೀನದಲ್ಲಿನ ನಿವೇಶನವಿದ್ದರೂ ಗುರುತಿಸಿ ಶಾಲೆ, ಕಾಲೇಜುಗಳ ಕಟ್ಟಡ ನಿರ್ಮಿಸಬೇಕು. ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಹೆಚ್ಚಾಗಿ ವಾಸಿಸುತ್ತಿರುವ ಅಲ್ಪಸಂಖ್ಯಾತ ಸಮುದಾಯಗಳಿಗೆ ಇಲಾಖೆಗಳಲ್ಲಿನ ಯೋಜನೆಗಳನ್ನು ಸಮರ್ಪಕವಾಗಿ ಒದಗಿಸುವ ಮೂಲಕ ಶಿಕ್ಷಣ ಮತ್ತು ಆರೋಗ್ಯಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು. ವಿವಿಧ ಇಲಾಖೆಯ ಅನುಪಾಲನಾ ವರದಿಯನ್ನು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕಾರಿ ಭಕ್ತಮಾರ್ಕಂಡೇಶ್ವರ ಜಿಲ್ಲಾಧಿಕಾರಿಯವರಿಗೆ ಸಲ್ಲಿಸಿದರು.

ಸಮಾಜದ ಧಾರ್ಮಿಕ ಮುಖಂಡರು ಅಲ್ಪಸಂಖ್ಯಾತ ವಿದ್ಯಾರ್ಥಿಗಳನ್ನು ವಸತಿ ಶಾಲೆಗೆ ಸೇರಿಸುವಂತಾಗಲು ಪ್ರೇರೇಪಿಸಬೇಕು. ವಸತಿ ಶಾಲೆಯಲ್ಲಿ ಗುಣಮಟ್ಟದ ಶಿಕ್ಷಣ ದೊರೆಯುವುದರ ಜೊತೆಗೆ ಅಗತ್ಯ ಸೌಲಭ್ಯ ಇರುವ ಬಗ್ಗೆ ತಿಳಿಸಬೇಕು ಎಂದರು.

ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಮಮತ ಹೊಸಗೌಡ್ರು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ರಾಜಾನಾಯ್ಕ, ಡಿಡಿಪಿಐ ಕೊಟ್ರೇಶ್, ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿರುವರು.

# ಆದಿಚುಂಚನಗಿರಿ ಮಹಾಸಂಸ್ಥಾನ ಮಠದಲ್ಲಿ ಅದ್ದೂರಿಯಾಗಿ ಹನುಮ ಜಯಂತಿ ಆಚರಣೆ

**ಚಿಕ್ಕಬಳ್ಳಾಪುರ:** ಜಿಲ್ಲೆಯಾದ್ಯಂತ ಹನುಮ ಜಯಂತಿ ಪ್ರಯುಕ್ತ ಇಂದು ಬೆಳಗ್ಗೆಯಿಂದಲೇ ಶ್ರೀರಾಮ ಭಕ್ತ ಶ್ರೀ ಹನುಮನಿಗೆ ವಿವಿಧ ದೇಗುಲಗಳಲ್ಲಿ ವಿಶೇಷ ಪೂಜೆ ಭಕ್ತರಿಂದ ಹನುಮಂತನ ನಾಮಜಪ ಮಾಡುತ್ತಾ ಭಕ್ತಿಯಲ್ಲಿ ಮಿಂದೆದ್ದರು.

ನಗರದ ಹೊರವಲಯದಲ್ಲಿನ ಶ್ರೀ ಆದಿಚುಂಚನಗಿರಿ ಮಹಾಸಂಸ್ಥಾನಮಠದ ಆವರಣದಲ್ಲಿನ ವೀರಾಂಜನೇಯ ಸ್ವಾಮಿ ದೇಗುಲದಲ್ಲಿ ಶ್ರೀ ಆದಿಚುಂಚನಗಿರಿ ಮಹಾಸಂಸ್ಥಾನ ಮಠದಿಂದ ಶ್ರೀ ವೀರಾಂಜನೇಯ ಸ್ವಾಮಿಗೆ ಹಾಗೂ ದೇವಾಲಯಕ್ಕೆ ವಿವಿಧ ಬಗೆಯ ಹೂಗಳಿಂದ ಶೃಂಗರಿಸಲಾಗಿದ್ದು ಬೆಳಗ್ಗೆಯಿಂದಲೇ ಸಹಸ್ರಾರು ಭಕ್ತರು ದೇವರ ದರ್ಶನ ಪಡೆದರು.





ಇದಕ್ಕೂ ಮುನ್ನ ಶ್ರೀ ಆದಿಚುಂಚನಗಿರಿ ಮಹಾ ಸಂಸ್ಥಾನ ಮಠದ ಪೀಠಾಧ್ಯಕ್ಷರಾದ ಶ್ರೀ ನಿರ್ಮಲಾನಂದನಾಥ ಮಹಾಸ್ವಾಮಿಜಿವರು ಶ್ರೀ ವೀರಾಂಜನೇಯನಿಗೆ ವಿಶೇಷ ಪೂಜೆ ಸಲ್ಲಿಸಿದರು.

ದೇಗುಲದಲ್ಲಿ ಹನುಮ ಜಯಂತಿ ಪ್ರಯುಕ್ತ ಪ್ರಾತಃಕಾಲ ಪುಣ್ಯಾಹ, ಹನುಮ ಮೂರ್ತಿಗೆ ನವಗ್ರಹ ಆರಾಧನೆ, ನವ ಕಳಸ ಸ್ಥಾಪನೆ, ಪಂಚಾಮೃತ ಅಭಿಷೇಕ ನಡೆಯಿತು. ದೇವಾಲಯಕ್ಕೆ ವಿಶೇಷ ಹೂವಿನ ಅಲಂಕಾರ ಮಾಡಲಾಗಿತ್ತು. ಇದೇ ವೇಳೆ ಶ್ರೀಗಳು ಅನ್ನದಾನ ಪ್ರಸಾದ ವಿನಿಯೋಗ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಹನುಮಾನ್ ಜಯಂತಿಯು ಮಾರುತಿ ನಂದನ ಎಂದೂ ಕರೆಯಲ್ಪಡುವ ಆಂಜನೇಯಸ್ವಾಮಿಯ ಜನ ದಿನವಾದ ಹಿನ್ನಲೆ ಹಾಗೂ ಆಂಜನೇಯನು ಅಂಜನಿ ಮತ್ತು ಕೇಸರಿಯ ಪುತ್ರ. ಹನುಮಂತನು ಅಮರತ್ವದ ವರವನ್ನು ಪಡೆದುಕೊಂಡವರಲ್ಲಿ ಒಬ್ಬನಾಗಿ. ಆಂಜನೇಯ ಸ್ವಾಮಿಯನ್ನು ಹನುಮಂತ, ಬಜರಂಗಬಲಿ, ಪವನ ಪುತ್ರ, ಸಂಕಟಮೋಚನ, ಕೇಸರಿ ನಂದನ, ಅಂಜನೀ ಪುತ್ರ ಹೀಗೆ ನಾನಾ ಹೆಸರುಗಳಿಂದ ಕರೆಯಲಾಗುತ್ತದೆ ಇದರಿಂದ ಶ್ರೀ ಹನುಮನಿಗೆ ವಿಶೇಷ ಪೂಜೆ ಮಾಡಲಾಗಿತ್ತು ಅದರಂತೆ ಡಾಕ್ಟರ್ ಶ್ರೀ ನಿರ್ಮಲಾನಂದನಾಥ ಮಹಾಸ್ವಾಮೀಜಿಗಳ ನೇತೃತ್ವದಲ್ಲಿ ಬೆಳಗ್ಗೆ ಎಂದರೆ ವಿಶೇಷ ಪೂಜೆ ಹೋಮ ಅತ್ಯಂತ ಶ್ರದ್ಧಾ ಭಕ್ತಿಯಿಂದ ನಡೆದವು.

ವಿಶೇಷ ಅಲಂಕಾರ ಮಾಡಿದ್ದ ಶ್ರೀ ವೀರಾಂಜನೇಯ ಸ್ವಾಮಿಯ ದರ್ಶನ ಪಡೆಯಲು ಸಹಸ್ರಾರು ಮಂದಿ ಭಕ್ತರು ದರ್ಶನ ಪಡೆದು ಪುನೀತರಾದರು.

## ಡಿ.4ರಿಂದ ಜಿ.ಎಂ ವಿಶ್ವವಿದ್ಯಾಲಯದಲ್ಲಿ ಇಗ್ನೈಟ್ರಾನ್–2025

**ದಾವಣಗೆರೆ.ಡಿ.2:** ನಗರದ ಜಿ.ಎಂ ವಿಶ್ವವಿದ್ಯಾಲಯದಲ್ಲಿ ತಂತ್ರಜ್ಞಾನ ಮತ್ತು ನವೀನತೆಯ ರಾಷ್ಟ್ರಮಟ್ಟದ ಮಹೋತ್ಸವ– ಇಗ್ನೈಟ್ರಾನ್–2025 ಡಿ.4ರಿಂದ 6ರವರೆಗೆ ನಡೆಯಲಿದೆ ಎಂದು ವಿದ್ಯಾರ್ಥಿ ವ್ಯವಹಾರಗಳ ನಿರ್ದೇಶಕ ಡಾ.ಹೆಚ್.ಎಸ್.ಕಿರಣ್ ಕುಮಾರ್ ತಿಳಿಸಿದರು.

ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸೃಜನಶೀಲ ಮನಸ್ಸುಗಳಿಗೆ ಅವಕಾಶ ಒದಗಿಸುವ ಉದ್ದೇಶದಿಂದ ಆಯೋಜಿಸಿರುವ ಮೂರು ದಿನಗಳ ಕಾರ್ಯಕ್ರಮದಲ್ಲಿ 23 ಸ್ಪರ್ಧೆಗಳು, 3 ಲಕ್ಷ ರೂ.ಗಳ ಪ್ರಶಸ್ತಿ ನಿಧಿ ಇದ್ದು, ದೇಶಾದ್ಯಂತ 2,000ಕ್ಕೂ ಹೆಚ್ಚು ಜನ ನೋಂದಣಿ ಮಾಡಿಕೊಂಡಿದ್ದಾರೆ. ಡಿ.4ರಂದು ಬೆಳಗ್ಗೆ 10.30ಕ್ಕೆ ಹ್ಯೂಮನಟಿಕ್ಸ್ ಸಂಸ್ಥೆಯ ಲೀಡ್ ಸಿಎಇ ಇಂಜಿನಿಯರ್ ಜಿ.ಎಂ.ರೇಣುಕ ಪ್ರಸಾದ್ ಕಾರ್ಯಕ್ರಮ ಉದ್ಘಾಟಿಸುವರು. ವಿಶ್ವವಿದ್ಯಾಲಯದ ಕುಲಪತಿ ಡಾ.ಎಸ್.ಆರ್.ಶಂಕಪಾಲ್, ಉಪಕುಲಪತಿ ಡಾ.ಹೆಚ್.ಡಿ.ಮಹೇಶಪ್ಪ, ಕುಲಸಚಿವ ಡಾ.ಸುನೀಲ್ ಕುಮಾರ್ ಮತ್ತಿತರರು ಉಪಸ್ಥಿತರಿರುವರು ಎಂದರು.

ಮೊದಲ ದಿನ ಆಟೋ ಎಕ್ಸಪೋ, ಬ್ಯಾನರ್ ಡ್ರಾಪ್, ಫ್ಲ್ಯಾಶ್ ಮೊಬ್ ಕಾರ್ಯಕ್ರಮಗಳು ಜರುಗಲಿದ್ದು, ವಿಶೇಷವಾಗಿ ಪ್ರೀಮಿಯಂ ಕಾರು ಮತ್ತು ಆಧುನಿಕ ಆಟೋಮೋಟಿವ್ ತಂತ್ರಜ್ಞಾನಗಳ ಪ್ರದರ್ಶನ ಇರುತ್ತದೆ. 24 ಗಂಟೆಗಳ ಕೋಡ್ ರಶ್ ಹ್ಯಾಕಥಾನ್ ಗೆ 300ಕ್ಕೂ ಹೆಚ್ಚು ಐಡಿಯಾಗಳು ಸಲ್ಲಿಕೆಯಾಗಿವೆ. 80 ತಂಡಗಳು ಆಫಲೈನ್ ಸುತ್ತಿಗೆ ಆಯ್ಕೆಯಾಗಿವೆ. ಸಂಜೆ ಗೇಮಿಂಗ್ ಇ–ಸ್ಪೋರ್ಟ್ಸ್ ನೈಟ್ ನಡೆಯಲಿದೆ. ಎರಡನೇ ದಿನ ವಿವಿಧ ತಾಂತ್ರಿಕ ಸ್ಪರ್ಧೆಗಳು ಸಂಪನ್ನಗೊಳ್ಳಲಿವೆ ಎಂದರು.

## ಬಾಂಗ್ಲಾದೇಶ ರಾಷ್ಟ್ರೀಯವಾದಿ ಪಕ್ಷದ ಬಿಎನ್‌ಪಿ ಅಧ್ಯಕ್ಷೆಯ ಹದಗೆಟ್ಟ ಆರೋಗ್ಯ ಖಲೀದಾ ಜಿಯಾ ಬಗ್ಗೆ ಮೋದಿ ಕಳವಳ

**ನವದೆಹಲಿ:** ಬಾಂಗ್ಲಾದೇಶ ರಾಷ್ಟ್ರೀಯವಾದಿ ಪಕ್ಷದ–ಬಿಎನ್‌ಪಿ ಅಧ್ಯಕ್ಷೆಯಾಗಿರುವ 80 ವರ್ಷದ ಖಲೀದಾ ಜಿಯಾ ಅವರ ಶ್ವಾಸಕೋಶ ಮತ್ತು ಹೃದಯದ ಮೇಲೆ ಪರಿಣಾಮ ಬೀರಿದ ಎದೆಯ ಸೋಂಕಿನ ನಂತರ ಢಾಕಾದ ಖಾಸಗಿ ಆಸ್ಪತ್ರೆಗೆ ದಾಖಲಾಗಿದ್ದು ಅವರ ಆರೋಗ್ಯ ಕ್ಷೀಣಿಸುತ್ತಿರುವ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ಕಳವಳ ವ್ಯಕ್ತಪಡಿಸಿದ್ದಾರೆ

ಬಾಂಗ್ಲಾದೇಶಕ್ಕೆ ಅಗತ್ಯವಿರುವ ಎಲ್ಲಾ ಸಹಾಯವನ್ನು ಒದಗಿಸಲು ಭಾರತ ಸಿದ್ಧವಾಗಿದೆ. ಹಲವು ವರ್ಷಗಳಿಂದ ಬಾಂಗ್ಲಾದೇಶದ ಸಾರ್ವಜನಿಕ ಜೀವನಕ್ಕೆ ಕೊಡುಗೆ ನೀಡಿರುವ ಬೇಗಂ ಖಲೀದಾ ಜಿಯಾ ಅವರ ಆರೋಗ್ಯದ ಹದಗೆಟ್ಟಿರುವುದು ತೀವ್ರ ಕಳವಳಕಾರಿ ಸಂಗತಿ ಎಂದು ಹೇಳಿದ್ದಾರೆ.

ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡಿರುವ ಪ್ರಧಾನಿ



ನರೇಂದ್ರ ಮೋದಿ ಅವರು ಪ್ರಧಾನಿ ಖಲೀದಾ ಜಿಯಾ ಅವರ ಆರೋಗ್ಯ ಕ್ಷೀಣಿಸುತ್ತಿರುವು ಕಳವಳಕಾರಿ ಸಂಗತಿ, ಅವರು ಶೀಘ್ರ ಚೇತರಿಸಿಕೊಳ್ಳಲಿ ಎಂದು ಪ್ರಾರ್ಥಿಸಿದ್ದಾರೆ.

ಬಿಎನ್‌ಪಿ ನಾಯಕರು ಪ್ರತಿಕ್ರಿಯಿಸಿ, ಶ್ವಾಸಕೋಶ ಮತ್ತು ಹೃದಯದ ಮೇಲೆ ಪರಿಣಾಮ ಬೀರಿದ ಎದೆಯ ಸೋಂಕಿನ ನಂತರ ಢಾಕಾದ ಖಾಸಗಿ ಆಸ್ಪತ್ರೆಗೆ ದಾಖಲಾಗಿದ್ದಾರೆ. ಅವರ ಸ್ಥಿತಿ ?ಅತ್ಯಂತ ಗಂಭೀರ?ವಾಗಿದೆ ಮತ್ತು ಅವರನ್ನು ವೆಂಟಿಲೇಟರ್‌ನಲ್ಲಿ ಇರಿಸಲಾಗಿದೆ ಎಂದು ಹೇಳಿದ್ದಾರೆ.

ಬಿಎನ್‌ಪಿ ಉಪಾಧ್ಯಕ್ಷ ವಕೀಲ ಅಹ್ಮದ್ ಆಜಂ ಖಾನ್ ಮಾತನಾಡಿ ಆರೋಗ್ಯ ಸ್ಥಿತಿ ತುಂಬಾ ಗಂಭೀರವಾಗಿದೆ. ಇಡೀ ರಾಷ್ಟ್ರದಿಂದ ಪ್ರಾರ್ಥನೆ ಕೋರುವುದನ್ನು ಬಿಟ್ಟು ಇನ್ನೇನೂ ಮಾಡಲು ಸಾಧ್ಯವಿಲ್ಲ? ಎಂದು ತಿಳಿಸಿದ್ದಾರೆ

ಬಿಎನ್‌ಪಿ ಪ್ರಧಾನ ಕಾರ್ಯದರ್ಶಿ ಮಿರ್ಜಾ ಫಕ್ರುಲ್ ಇಸ್ಲಾಂ ಅಲಮ್‌ಗಿರ್ ಕೂಡ ಜಿಯಾ ಅವರ ಆರೋಗ್ಯ ಕ್ಷೀಣಿಸುತ್ತಿದೆ ಎಂದು ದೃಢಪಡಿಸಿದ್ದು ಬಾಂಗ್ಲಾದೇಶದ ಪ್ರಜೆಗಳು ಅವರ ಚೇತರಿಕೆಗಾಗಿ ಪ್ರಾರ್ಥಿಸುವಂತೆ ಮನವಿ ಮಾಡಿದ್ದಾರೆ.

ತೀವ್ರ ಅನಾರೋಗ್ಯದಿಂದ ಬಳಲುತ್ತಿರುವ ಜಿಯಾ ಅವರ ಆರೋಗ್ಯಕ್ಕಾಗಿ ವೈದ್ಯರು ಸಾಧ್ಯವಿರುವ ಎಲ್ಲ ಪ್ರಯತ್ನಗಳನ್ನು ಮಾಡುತ್ತಿದ್ದಾರೆ. ಸ್ಥಳೀಯ ಮತ್ತು ವಿದೇಶಿ ತಜ್ಞರು ಅವರ ಚಿಕಿತ್ಸೆಯಲ್ಲಿ ಭಾಗಿಯಾಗಿದ್ದಾರೆ ಎಂದಿದ್ದಾರೆ

## ಪೋಕ್ಸೋ ಪ್ರಕರಣ ಕುರಿತ ಬಿಎಸ್ ಯಡಿಯೂರಪ್ಪಗೆ ಬಿಗ್ ರಿಲೀಫ್

**ಬೆಂಗಳೂರು:** ಪೋಕ್ಸೊ ಪ್ರಕರಣ ಕುರಿತಂತೆ ಮಾಜಿ ಮುಖ್ಯಮಂತ್ರಿ ಬಿ. ಎಸ್. ಯಡಿಯೂರಪ್ಪರವರಿಗೆ ಸುಪ್ರೀಂಕೋರ್ಟ್‌ನಿಂದ ಬಿಗ್ ರಿಲೀಫ್ ಸಿಕ್ಕಿದೆ.



ಹೈಕೋರ್ಟ್ ಆದೇಶವನ್ನು ಪ್ರಶ್ನಿಸಿ ಯಡಿಯೂರಪ್ಪ ಮತ್ತು ನಾಲ್ವರು ಸುಪ್ರೀಂಕೋರ್ಟ್‌ಗೆ ಇಂದು ಅರ್ಜಿ ಸಲ್ಲಿಸಿದರು. ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ನೇತೃತ್ವದ ತ್ರಿಸದಸ್ಯ ಪೀಠ ವಿಚಾರಣೆ ನಡೆಸಿ, ಹೈಕೋರ್ಟ್ ಆದೇಶಕ್ಕೆ ತಡೆ ನೀಡಿತು.

ಯಡಿಯೂರಪ್ಪ ಪರ ವಕೀಲ ಸಿದ್ದಾರ್ಥ ಲೂತ್ರಾ ಅವರು ವಾದ ಮಂಡಿಸಿ ಹೈಕೋರ್ಟ್ ಆದೇಶದಲ್ಲಿರುವ ಕೆಲವು ದೋಷಾಗಳನ್ನು ಉಲ್ಲಂಖಿಸಿದರು. ವಾದ ಆಲಿಸಿದ ನ್ಯಾಯಪೀಠ ವಿಚಾರಣೆಗೆ ತಡೆ ನೀಡಿ ಸಿಐಡಿಗೆ ನೋಟಿಸ್ ಜಾರಿ ಮಾಡಿದೆ.

ಪೋಕ್ಸೊ ಪ್ರಕರಣಕ್ಕೆ ಸಂಬಂಧಿಸಿದಂತೆ ಕೆಳಹಂತದ ನ್ಯಾಯಾಲಯ ಆರೋಪ, ನಿಗದಿ ಸಂಬಂಧ ಯಡಿಯೂರಪ್ಪರವರಿಗೆ ಸಮನ್ಸ್ ಜಾರಿ ಮಾಡಿತ್ತು. ಈ ಕ್ರಮ ಪ್ರಶ್ನಿಸಿ, ಯಡಿಯೂರಪ್ಪ ಹೈಕೋರ್ಟ್ ಮೆಟ್ಟಿಲೇರಿದ್ದರು. ಈ ಅರ್ಜಿಯ ವಿಚಾರಣೆ ನಡೆಸಿದ್ದ ಹೈಕೋರ್ಟ್ ಅರ್ಜಿಯನ್ನು ವಜಾಗೊಳಿಸಿ ಟ್ರಯಲ್‌ಗೆ ಅನುಮತಿ ನೀಡಿತ್ತು. ಬಳಿಕ ಒಂದನೇ ತ್ವರಿತ ನ್ಯಾಯಾಲಯ ಬಿ.ಎಸ್. ಯಡಿಯೂರಪ್ಪ ಸೇರಿದಂತೆ ನಾಲ್ವರು ಆರೋಪಿಗಳ ವಿರುದ್ಧ ದೋಷಾರೋಪ ನಿಗದಿಗೆ ಸಮನ್ಸ್ ಜಾರಿ ಮಾಡಿತ್ತು.

ಪ್ರಕರಣದ ಆರೋಪಿಗಳಾದ ಯಡಿಯೂರಪ್ಪ, ವೈ.ಎಂ. ಅರುಣ್, ಎಂ. ರುದ್ರೇಶ್ ಹಾಗೂ ಜಿ. ಮರಿಸ್ವಾಮಿ ಅವರಿಗೆ ಸಮನ್ಸ್ ಜಾರಿಗೊಳಿಸಿದ್ದ ವಿಶೇಷ ಸೆಷನ್ಸ್ ನ್ಯಾಯಾಲಯ ಇಂದು ಕೋರ್ಟ್‌ಗೆ ಖುದ್ದು ಹಾಜರಾಗುವಂತೆ ಆದೇಶಿಸಿತ್ತು.

ಬೆಂಗಳೂರಿನ ಡಾಲರ್ಸ್ ಕಾಲೋನಿಯ ತಮ್ಮ ನಿವಾಸದಲ್ಲಿ

### ಚಾಮರಾಜನಗರ ಆಕ್ಸಿಜನ್ ದುರಂತ । ಮುಂದಿನ ಸಚಿವ ಸಂಪುಟದಲ್ಲಿ ಚರ್ಚೆ

# ಕುನ್ಹಾ ನೇತೃತ್ವದ ಆಯೋಗದಿಂದ ಸಿಎಂಗೆ ವರದಿ ಸಲ್ಲಿಕೆ

**ಬೆಂಗಳೂರು:** ಕೋವಿಡ್ ಅವಧಿಯಲ್ಲಿ ಚಾಮರಾಜನಗರ ಜಿಲ್ಲಾಸ್ಪತ್ರೆಯಲ್ಲಿ ನಡೆದ ಆಕ್ಸಿಜನ್ ದುರಂತದ ಅಂತಿಮ ತನಿಖಾ ವರದಿಯನ್ನು ನ್ಯಾ. ಮೈಕಲ್ ಡಿ. ಕುನ್ಹಾ ಸಮಿತಿಯು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಸಲ್ಲಿಸಿದ್ದು, ವರದಿ ಕುರಿತು ಮುಂದಿನ ಸಚಿವ ಸಂಪುಟ ಸಭೆಯಲ್ಲಿ ಚರ್ಚೆ ನಡೆಯುವ ಸಾಧ್ಯತೆಗಳಿವೆ.

ಮುಖ್ಯಮಂತ್ರಿಗಳ ಸರ್ಕಾರಿ ನಿವಾಸಕ್ಕೆ ಆಗಮಿಸಿದ ನಿವೃತ್ತ ನ್ಯಾಯಮೂರ್ತಿ ಮೈಕೆಲ್ ಡಿ ಕುನ್ಹಾ ಅವರು 165 ಪುಟಗಳ ಪರಿಷ್ಕೃತ ವರದಿಯನ್ನು ಸಲ್ಲಿಕೆ ಮಾಡಿದರು. ವರದಿಯಲ್ಲಿ ಆಸ್ಪತ್ರೆಯಲ್ಲಿ ಕರ್ತವ್ಯಲೋಪ ಎಸಗಿದ ಸಿಬ್ಬಂದಿ



ವಿರುದ್ಧ ಕ್ರಮ ಕೈಗೊಳ್ಳಲು ಶಿಫಾರಸು ಮಾಡಲಾಗಿದೆ.

ಮೇ 2, 2021 ರ ಮಧ್ಯರಾತ್ರಿ ಹಾಗೂ ಮೇ 3, 2021 ರ ಬೆಳಗಿನ ಜಾವದ ನಡುವೆ ಚಾಮರಾಜನಗರ ಜಿಲ್ಲಾಸ್ಪತ್ರೆಯಲ್ಲಿ ಆಕ್ಸಿಜನ್ ಕೊರತೆ ಉಂಟಾಗಿ 36 ಮಂದಿ ಮೃತಪಟ್ಟಿದ್ದರು. ಆಕ್ಸಿಜನ್ ಕೊರತೆ ಕಾರಣದಿಂದಾಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದುಕೊಳ್ಳುತ್ತಿದ್ದ ರೋಗಿಗಳು ಮೃತಪಟ್ಟಿದ್ದರು.

ಜಿಲ್ಲಾಡಳಿತ ಮತ್ತು ಆಸ್ಪತ್ರೆ ಅಧಿಕಾರಿಗಳ ನಿರ್ಲಕ್ಷ್ಯವೇ ದುರಂತಕ್ಕೆ ಕಾರಣ ಎಂದು ಆರೋಪ ಕೇಳಿಬಂದಿದೆ. ಈ ಘಟನೆಯ ಕುರಿತು ನ್ಯಾಯಾಂಗ ಆಯೋಗದ ತನಿಖೆಗಾಗಿ ನ್ಯಾ. ಬಿ.ಎ. ಪಾಟೀಲ್ ಆಯೋಗ ರಚನೆ ಮಾಡಲಾಗಿತ್ತು.

ಕಾಂಗ್ರೆಸ್ ಸರ್ಕಾರ ಈ ಆಯೋಗದ ವರದಿಯನ್ನು ತಿರಸ್ಕರಿಸಿತ್ತು. ಮರು ತನಿಖೆಯ ಜವಾಬ್ದಾರಿಯನ್ನು ನ್ಯಾ. ಜಾನ್ ಮೈಕೆಲ್ ಡಿ'ಕುನ್ಹಾ ಆಯೋಗಕ್ಕೆ ವಹಿಸಲಾಗಿತ್ತು. ಈ ಪ್ರಕರಣ ರಾಜಕೀಯ ತಿರುವು ಪಡೆದುಕೊಂಡಿತ್ತು. ಡಾ. ಕೆ ಸುಧಾಕರ್ ವಿರುದ್ಧ ರಾಜಕೀಯ ದ್ವೇಷ ಸಾಧಿಸಲಾಗಿತ್ತಿದೆ ಎಂಬ ಆರೋಪ ಮಾಡಲಾಗಿತ್ತು. ಆದರೆ ಇದೀಗ ಅಂತಿಮ ವರದಿಯನ್ನು ಏನೆಲ್ಲಾ ವಿಚಾರಗಳನ್ನು ಉಲ್ಲೇಖಿಸಲಾಗಿದೆ ಎಂಬುವುದು ಸಾಕಷ್ಟು ಕುತೂಹಲ ಕೆರಳಿಸಿದೆ.

## ರಾಶಿ ಭವಿಷ್ಯ

### ಮೇಷ ರಾಶಿ

ನೀವು ವಿಶ್ರಾಂತಿ ಪಡೆಯಲು ಸಾಧ್ಯವಾಗುವ ಒಂದು ದಿನ. ನಿಮ್ಮ ಸ್ನಾಯುಗಳಿಗೆ ವಿಶ್ರಾಂತಿ ನೀಡಲು ತೈಲದಿಂದ ನಿಮ್ಮ ದೇಹಕ್ಕೆ ಮಸಾಜ್ ಮಾಡಿ. ಸ್ವಲ್ಪ ಹೆಚ್ಚು ಹಣ ಮಾಡಲು ನಿಮ್ಮ ನವೀನ ಕಲ್ಪನೆಯನ್ನು ಬಳಸಿ. ನಿಮ್ಮ ಸಂಗಾತಿ ಬೆಂಬಲ ನೀಡುತ್ತಾರೆ ಹಾಗೂ ಸಹಾಯ ಮಾಡುತ್ತಾರೆ. ನಿಮ್ಮ ಸಂಗಾತಿಯ ಚಿತ್ತ ಚೆನ್ನಾಗಿರುವಂತೆ ಕಾಣದಿದ್ದರಿಂದ ವಿಷಯಗಳನ್ನು ಸರಿಯಾಗಿ ನಿರ್ವಹಿಸಿ. ಇಂದು ವಿಶ್ರಾಂತಿ ಪಡೆಯಲು ಸಮಯವಿಲ್ಲ ಬಾಕಿಯಿರುವ ಕೆಲಸಗಳು ನಿಮ್ಮನ್ನು ವ್ಯಸ್ತವಾಗಿಡುತ್ತವೆ

### ವೃಷಭ ರಾಶಿ

ಸಾಮಾಜಿಕ ಜೀವನಕ್ಕಿಂತ ಆರೋಗ್ಯಕ್ಕೆ ಆದ್ಯತೆ ನೀಡಬೇಕು. ನಿಮ್ಮ ಹೆಚ್ಚುವರಿ ಹಣವನ್ನು ಒಂದು ಸುರಕ್ಷಿತ ಸ್ಥಳದಲ್ಲಿರಿಸಿ ಹಾಗೂ ಇದು ಮುಂದಿನ ಕಾಲದಲ್ಲಿ ನಿಮಗೆ ಒಳ್ಳೆಯ ಆದಾಯ ತರುತ್ತದೆ. ನಿಮ್ಮ ಹೆಂಡತಿಯ ಜಜೊತೆ ಪ್ರವಾಸಕ್ಕೆ ಹೋಗಲು ಒಳ್ಳೆಯ ದಿನ. ಇದು ನಿಮ್ಮ ಮನಸ್ಥಿತಿಯನ್ನು ಬದಲಾಯಿಸುವುದಷ್ಟೇ ಅಲ್ಲದೇ ನಿಮ್ಮ ತಪ್ಪು ತಿಳುವಳಿಕೆಗಳನ್ನೂ ಹೋಗಲಾಡಿಸುತ್ತದೆ.

### ಮಿಥುನ ರಾಶಿ

ರಕ್ತದೊತ್ತಡವಿರುವ ರೋಗಿಗಳು ತಮ್ಮ ರಕ್ತದೊತ್ತಡ ಕಡಿಮೆ ಮಾಡಲು ಮತ್ತು ಕೊಲೆಸ್ಟರಾಲ್ ನಿಯಂತ್ರಣದಲ್ಲಿರಿಸಲು ಕೆಂಪು ವೈನ್ ತೆಗೆದುಕೊಳ್ಳಬಹುದು. ಇದು ಅವರಿಗೆ ಮತ್ತಷ್ಟು ವಿಶ್ರಾಂತಿ ತರುತ್ತದೆ. ಇಂದು ನೀವು ಸ್ನೇಹಿತರೊಂದಿಗೆ ಪಾರ್ಟಿಯಲ್ಲಿ ಸಾಕಷ್ಟು ಹಣವನ್ನು ಖರ್ಚು ಮಾಡಬಹುದು ಆದರೆ ಇದರ ಹೊರೆತಾಗಿಯೂ ನಿಮ್ಮ ಆರ್ಥಿಕ ಭಾಗವು ಬಲವಾಗಿರುತ್ತದೆ ಸ್ನೇಹಿತರು ಮತ್ತು ಅಪರಿಚಿತರಿಬ್ಬರ ಬಗೆಗೂ ಎಚ್ಚರದಿಂದಿರಿ.

### ಕರ್ಕ ರಾಶಿ

ನೀವು ಸಾಮಾನ್ಯವಾಗಿ ಇರುವುದಕ್ಕಿಂತ ಕಡಿಮೆ ಚೈತನ್ಯವನ್ನು ಇಂದು ಕಾಣುತ್ತೀರಿ ನಿಮ್ಮ ಮೇಲೆ ನೀವೇ ಹೆಚ್ಚುವರಿ ಕೆಲಸಕ್ಕೆ ಒತ್ತಡ ಹೇರಬೇಡಿ – ಸ್ವಲ್ಪ ವಿಶ್ರಾಂತಿ ತೆಗೆದುಕೊಳ್ಳಿ ಮತ್ತು ನಿಮ್ಮ ಕೆಲಸಗಳನ್ನು ಇನ್ನೊಂದು ದಿನಕ್ಕೆ ವರ್ಗಾಯಿಸಿ. ಇಂದು ನಿಮ್ಮ ಆಪ್ತರೊಂದಿಗೆ ಜಗಳವಾಗಬಹುದು ಮತ್ತು ವಿಷಯ ನ್ಯಾಯಾಲಯ ಕಚೇರಿಯ ವರೆಗೂ ಹೋಗಬಹುದು.ಇದರ ಕಾರಣದಿಂದ ನಿಮ್ಮ ವಿಶೇಷ ಹಣ ಖರ್ಚಾಗಬಹುದು. ನೆರೆಮನೆಯವರ ಜೊತಗಿನ ಜಗಳ ನಿಮ್ಮ ಮನಸ್ಸು ಕೆಡಿಸುತ್ತದೆ. ಆದರೆ ನಿಮ್ಮ ಸಹನೆ ಕಳೆದುಕೊಳ್ಳಬೇಡಿ, ಏಕೆಂದರೆ ಇದು ಬೆಂಕಿಗೆ ತುಪ್ಪ ಸುರಿಯುತ್ತದೆ.

### ಸಿಂಹ ರಾಶಿ

ನೀವು ಇಂದು ಆರಾಮವಾಗಿ ವಿಶ್ರಾಂತಿ ಪಡೆಯಬೇಕು ನೀವು ಆನಂದಿಸುವ ಮತ್ತು ಆಸಕ್ತಿಗಳು ಮತ್ತು ವಿಷಯಗಳಲ್ಲಿ ತೊಡಗಿಕೊಳ್ಳಿ. ಇಂದು ಯಾವುದೇ ವಿರುದ್ಧ ಲಿಂಗದ ಸಹಾಯದಿಂದ ನೀವು ವ್ಯಾಪರ ಅಥವಾ ಉದ್ಯೋಗದಲ್ಲಿ ಆರ್ಥಿಕ ಲಾಭವನ್ನು ಪಡೆಯುವ ಸಾಧ್ಯತೆ ಇದೆ. ನಿಮ್ಮ ಅತಿಯಾದ ಜೀವನಶೈಲಿ ಮನೆಯಲ್ಲಿ ಆತಂಕ ಸೃಷ್ಟಿಸಬಹುದು ಆದ್ದರಿಂದ ತಡರಾತ್ರಿಯನ್ನು ಹಾಗೂ ಇತರರ ಮೇಲೆ ಬಹಳ ಖರ್ಚು ಮಾಡುವುದನ್ನು ತಪ್ಪಿಸಿ.

### ಕನ್ಯಾ ರಾಶಿ

ನೀವು ವ್ಯಾಯಾಮದ ಮೂಲಕ ನಿಮ್ಮ ತೂಕವನ್ನು ನಿಯಂತ್ರಿಸಬಹುದು. ಮನರಂಜನೆ ಅಥವಾ ಹೊರನೋಟದ ಸುಧಾರಣೆಗಾಗಿ ಹೆಚ್ಚು ಖರ್ಚು ಮಾಡಬೇಡಿ. ಯುವಕರನ್ನು ಹೊಂದಿರುವ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಲು ಒಳ್ಳೆಯ ಸಮಯ. ಪ್ರಣಯ ನಿಮ್ಮ ಹೃದಯ ಮತ್ತು ಮನಸ್ಸನ್ನು ಆಳುತ್ತದೆ. ಸ್ಪರ್ಧಾತ್ಮಕ ಪರೀಕ್ಷೆಗೆ ಹೋಗುತ್ತಿರುವವರು ಶಾಂತವಾಗಿರಬೇಕು.

### ತುಲಾ ರಾಶಿ

ಕೆಲವು ಅನಿವಾರ್ಯ ಸಂದರ್ಭಗಳು ನಿಮಗೆ ಅಹಿತಕರವೆನಿಸಬಹುದು. ಆದರೆ ನೀವು ನಿಮ್ಮ ಸಮತೋಲನ ಕಾಯ್ದುಕೊಳ್ಳಬೇಕು ಮತ್ತು ಪರಿಸ್ಥಿತಿಯನ್ನು ನಿಭಾಯಿಸಲು ತಕ್ಷಣವೇ ಪ್ರತಿಕ್ರಿಯಿಸಬಾರದು. ಹೊಸ ಹಣಗಳಿಕೆಯ ಅವಕಾಶಗಳು ಲಾಭದಾಯಕವಾಗಿರುತ್ತವೆ. ನಿಮ್ಮ ಆಕರ್ಷಣೆ ಹಾಗೂ ವ್ಯಕ್ತಿತ್ವ ನೀವು ಹೊಸ ಸ್ನೇಹಿತರನ್ನು ಗಳಿಸಲು ಸಹಾಯ ಮಾಡುತ್ತದೆ. ಪ್ರೇಮಿಗಳು ಕುಟುಂಬದ ಭಾವನೆಗಳ ಬಗ್ಗೆ ತುಂಬ ಕಾಳಜಿ ಹೊಂದಿರುತ್ತಾರೆ.

### ವೃಶ್ಚಿಕ ರಾಶಿ

ನಿಮ್ಮ ಕಚೇರಿಯನ್ನು ಬೇಗನೆ ಬಿಡಲು ಮತ್ತು ನೀವು ನಿಜವಾಗಿಯೂ ಆನಂದಿಸುವದನ್ನು ಮಾಡಲು ಪ್ರಯತ್ನಿಸಿ. ವಿದೇಶದಲ್ಲಿ ಮಲಗಿರುವ ನಿಮ್ಮ ಭೂಮಿಯನ್ನು ಇಂದು ಉತ್ತಮ ಬೆಲೆಗೆ ಮಾರಾಟ ಮಾಡಬಹುದು, ಅದು ನಿಮಗೆ ಲಾಭದಾಯಕವಾಗಲಿದೆ. ನಿಮ್ಮ ಕುಟುಂಬದ ಕಲ್ಯಾಣಕ್ಕಾಗಿ ಕೆಲಸ ಮಾಡಿ. ನಿಮ್ಮ ಕಾರ್ಯಗಳು ದುರಾಶೆಯಿಂದಲ್ಲದೇ ಪ್ರೀತಿ ಮತ್ತು ಸಕಾರಾತ್ಮಕ ದೃಷ್ಟಿಯಿಂದ ನಡೆಯಬೇಕು. ನಿಮ್ಮ ಪ್ರೀತಿಯನ್ನು ಅಮೂಲ್ಯ ವಸ್ತುಗಳಂತೆ ಹೊಸತನದಿಂದಿಡಿ.

### ಧನು ರಾಶಿ

ಇಂದು ನೀವು ಆರಾಮವಾಗಿರಬೇಕು ಹಾಗೂ ನಿಕಟ ಸ್ನೇಹಿತರು ಮತ್ತು ಕುಟುಂಬದ ಎಲ್ಲಾ ಸದಸ್ಯರನ್ನು ಸಂತೋಷವಾಗಿರಿಸಲು ಪ್ರಯತ್ನಿಸಬೇಕು. ಬಹಳ ಪ್ರಯೋಜನಕಾರಿ ದಿನವಲ್ಲ– ಆದ್ದರಿಂದ ನಿಮ್ಮ ಹಣದ ಪರಿಸ್ಥಿತಿಯನ್ನು ಪರಿಶೀಲಿಸಿ ಮತ್ತು ನಿಮ್ಮ ವೆಚ್ಚಗಳ ಮೇಲೆ ಮಿತಿ ಹೇರಿ. ಶಿಶುವಿನ ಅನಾರೋಗ್ಯ ನಿಮ್ಮನ್ನು ವ್ಯಸ್ತವಾಗಿಡುತ್ತದೆ. ನೀವು ತಕ್ಷಣ ಗಮನ ನೀಡುವ ಅಗತ್ಯವಿರುತ್ತದೆ. ನಿಮ್ಮಿಂದ ಸ್ವಲ್ಪ ಉದಾಸೀನತೆಯೂ ಸಮಸ್ಯೆಯನ್ನು ಉಲ್ಬಣಗೊಳಿಸುವುದರಿಂದ ಸರಿಯಾದ ಸಲಹೆ ತೆಗೆದುಕೊಳ್ಳಿ.

### ಮಕರ ರಾಶಿ

ವಿಶೇಷವಾಗಿ ಹೊರಗಿಟ್ಟ ಆಹಾರ ತಿನ್ನುವಾಗ ವಿಶೇಷ ಮುನ್ನೆಚ್ಚರಿಕೆ ತೆಗೆದುಕೊಳಬೇಕು. ಆದರೆ ಅನಗತ್ಯ ಒತ್ತಡ ಕೇವಲ ನಿಮಗೆ ಮಾನಸಿಕ ಉದ್ವೇಗ ಉಂಟುಮಾಡುತ್ತದೆ. ಹಣಕಾಸಿನಲ್ಲಿ ಸುಧಾರಣೆ ದೀರ್ಘಕಾಲದಿಂದ ಬಾಕಿಯಿರುವ ನಿಮ್ಮ ಬಾಕಿಗಳು ಮತ್ತು ಬಿಲ್ಲುಗಳನ್ನು ಪಾವತಿಸುವುದನ್ನು ಅನುಕೂಲಕರವಾಗಿಸುತ್ತದೆ. ಸಾಮಾಜಿಕ ಕೂಟಗಳಲ್ಲಿ ನಿಮ್ಮ ಹಾಸ್ಯದ ಪ್ರಕೃತಿ ನಿಮ್ಮನ್ನು ಜನಪ್ರಿಯಗೊಳಿಸುತ್ತದೆ. ನಿಮ್ಮ ಪ್ರೇಮಿಯ ಜೊತೆ ಹೊರಹೋದಾಗ ನಿಮ್ಮ ರೂಪ ಮತ್ತು ವರ್ತನೆಯಲ್ಲಿ ನೈಜತೆಯಿರಲಿ.

### ಕುಂಭ ರಾಶಿ

ಇಂದು ನೀವು ನಿಮ್ಮ ಆರೋಗ್ಯ ಮತ್ತು ನೋಟವನ್ನು ಸುಧಾರಿಸಲು ಕೆಲಸ ಮಾಡಲು ಸಾಕಷ್ಟು ಸಮಯ ಹೊಂದಿರುತ್ತೀರಿ ನೀವು ನಿಮ್ಮ ಇಂದಿನ ದಿನವನ್ನು ಉತ್ತಮಗೊಳಿಸಲು ಕಳೆದ ದಿನಗಳಲ್ಲಿ ಹಣವನ್ನು ಹೂಡಿಕೆ ಮಾಡಿದ್ದರೆ, ಅದರ ಪ್ರಯೋಜನವನ್ನು ಇಂದು ನೀವು ಪಡೆಯಬಹುದು. ಮನೆಯಲ್ಲಿನ ಕೆಲವು ಬದಲಾವಣೆಗಳು ನಿಮ್ಮನ್ನು ಭಾವುಕರನ್ನಾಗಿಸಬಹುದು– ಆದರೆ ನಿಮಗೆ ಮುಖ್ಯವಾದವರಿಗೆ ನೀವು ನಿಮ್ಮ ಭಾವನೆಗಳನ್ನು ಪರಿಣಾಮಕಾರಿಯಾಗಿ ಹೇಳಲು ಸಾಧ್ಯವಾಗುತ್ತದೆ.

### ಮೀನ ರಾಶಿ

ನಿಮಗೇನು ಒಳ್ಳೆಯದೆಂದು ನಿಮಗೆ ಮಾತ್ರ ಗೊತ್ತು – ಆದ್ದರಿಂದ ಧೃಢವಾಗಿರಿ ಮತ್ತು ಧೈರ್ಯಶಾಲಿಗಳಾಗಿರಿ ಮತ್ತು ತಕ್ಷಣದ ನಿರ್ಧಾರಗಳನ್ನು ತೆಗೆದುಕೊಳ್ಳಿ ಹಾಗೂ ಫಲಿತಾಂಶಗಳಿಗೆ ಸಿದ್ಧವಾಗಿರಿ. ಆರ್ಥಿಕ ಜೀವನದ ಸ್ಥಿತಿ ಇಂದು ಉತ್ತಮವಾಗಿದೆ ಎಂದು ಹೇಳಲಾಗುವುದಿಲ್ಲ, ಇಂದು ನಿಮ್ಮನ್ನು ಉಳಿಸಲು ನಿಮಗೆ ಕಷ್ಟವಾಗಬಹುದು.

## ಡಾ. ವಾಸುದೇವ ಅವರಿಗೆ ಅಂತರರಾಷ್ಟ್ರೀಯ 'ಎಕ್ಸಲೆನ್ಸ್ ಎಡಿಟರ್ ಅವಾರ್ಡ್'



**ದಾವಣಗೆರೆ :** ಪ್ರಾದೇಶಿಕ ಪತ್ರಿಕೋದ್ಯಮದ ಶ್ರೇಷ್ಠತೆಗೆ ಏಷ್ಯಾ ಇಂಟರ್‌ನ್ಯಾಷನಲ್ ಕಲ್ಚರ್ ಅಕಾಡೆಮಿಯಿಂದ ವಿಸ್ಮಯವಾಣಿ ಸಂಪಾದಕ ಡಾ. ವಾಸುದೇವ ಅವರಿಗೆ ಅಂತರರಾಷ್ಟ್ರೀಯ 'ಎಕ್ಸಲೆನ್ಸ್ ಎಡಿಟರ್ ಅವಾರ್ಡ್' ಗೌರವ ದೊರೆತಿದೆ.

ತಮಿಳುನಾಡಿನ ಹೊಸೂರ ಟಿಜಿಐ ಗ್ರ್ಯಾಂಡ್ ಫ್ರಾಚೂನ್ ಹೋಟೆನಲ್ಲಿ ಅಮೇರಿಕನ್ ವಿಸಡಂ ಪೀಸ್ ಯೂನಿವರ್ಸಿಟಿಯಿಂದ ಏರ್ಪಡಿಸಿದ್ದ ಕಾರ್ಯಕ್ರಮದಲ್ಲಿ ಗೌರವಿಸಿ ಸನ್ಮಾನಿಸಲಾಯಿತು.

ಪ್ರಭಾವಿ ತೀರ್ಪುಗಾರ ಮಂಡಳಿಯನ್ನು ಹೊಂದಿರುವ ಏಷ್ಯಾ ಇಂಟರ್‌ನ್ಯಾಷನಲ್ ಕಲ್ಚರ್ ಅಕಾಡೆಮಿ,

ಪ್ರಾದೇಶಿಕ ಪತ್ರಿಕಾ ಕ್ಷೇತ್ರದಲ್ಲಿ ನೀಡಿದ ಅಸಾಧಾರಣ ಸೇವೆಯನ್ನು ಪರಿಗಣಿಸಿ ಈ ವರ್ಷದ 'ಎಕ್ಸಲೆನ್ಸ್ ಎಡಿಟರ್ ಅವಾರ್ಡ್' ಅನ್ನು ಘೋಷಿಸಿದೆ.

ದಾವಣಗೆರೆ ಮೂಲದ ಪ್ರಾದೇಶಿಕ ಪತ್ರಕರ್ತ ಹಾಗೂ ವಿಸ್ಮಯವಾಣಿ ದಿನಪತ್ರಿಕೆಯ ಸಂಪಾದಕ ಡಾ. ವಾಸುದೇವ ದಾವಣಗೆರೆ ಅವರಿಗೆ ಅಂತರರಾಷ್ಟ್ರೀಯ ಮಟ್ಟದ ಪ್ರತಿಷ್ಠಿತ ಪ್ರಶಸ್ತಿ ದೊರೆತಿದೆ.

ಇದು ಏಷ್ಯಾದ ಹಲವು ದೇಶಗಳಿಂದ ನಾಮನಿರ್ದೇಶನಗೊಂಡ ಸಂಪಾದಕರ ಪೈಕಿ ಆಯ್ಕೆಯಾಗುವ ಅಪರೂಪದ ಗೌರವವಾಗಿದ್ದು, ಕನ್ನಡ ಮಾಧ್ಯಮದ ವಿಶೇಷ ಸಾಧನೆಯಾಗಿ ಗುರುತಿಸಲಾಗಿದೆ.

ಸುಮಾರು 28 ವರ್ಷಗಳ ಪತ್ರಿಕೋದ್ಯಮ ಪಯಣವನ್ನು ಹೊಂದಿರುವ ಡಾ. ವಾಸುದೇವವರು, ಪ್ರಾರಂಭದಲ್ಲಿ ವರದಿಗಾರರಾಗಿ ಕೆಲಸಮಾಡಿ, ಪ್ರಾದೇಶಿಕ ಮಟ್ಟದ ಅನೇಕ ಪತ್ರಿಕೆಗಳಲ್ಲಿ ತಾವು ರಚಿಸಿದ ನೈಜ ವರದಿಗಳ ಮೂಲಕ ಜನರನ್ನು, ಅಧಿಕಾರಿಗಳನ್ನು, ಮತ್ತು ನೀತಿ ರಚನೆಗಾರರನ್ನು ತಲುಪಿದರು.

ಪ್ರಶಸ್ತಿ ಘೋಷಣೆಯ ನಂತರ ಮಾತನಾಡಿದ ಡಾ. ವಾಸುದೇವ ದಾವಣಗೆರೆ ಅವರು, ಈ ಗೌರವ ವಿಸ್ಮಯವಾಣಿ ನಂಬಿಕೊಂಡಿರುವ ಲಕ್ಷಾಂತರ ಓದುಗರಿಗೂ, ನಮ್ಮ ವರದಿಗಾರರಿಗೂ, ಶ್ರಮಿಸುತ್ತಿರುವ ನಮ್ಮ ಪುಟ್ಟ ತಂಡಕ್ಕೂ ಸಿಗುವ ಮಾನ್ಯತೆ. ಪತ್ರಿಕೋದ್ಯಮ ನನ್ನ ಉದ್ಯೋಗವಲ್ಲ▯ ಅದು ನನ್ನ ಜೀವನದ ಉದ್ದೇಶ ಎಂದರು

## ರೈತರ ಸಮಸ್ಯೆಗಳ ಈಡೇರಿಕೆಗೆ ಅಧಿವೇಶನ ಒಳಗೆ ಮತ್ತು ಹೊರಗೆ ಪ್ರತಿಭಟನೆ: ಎಂಪಿಆರ್

**ದಾವಣಗೆರೆ:** ರೈತರ ಸಮಸ್ಯೆಗಳನ್ನು ಮುಂದಿಟ್ಟುಕೊಂಡು ಬೆಳಗಾವಿ ಅಧಿವೇಶನದ ಒಳಗೆ ಮತ್ತು ಹೊರಗೆ ಹೋರಾಟ ಮಾಡಲಾಗುವುದು ಎಂದು ಬಿಜೆಪಿ ಮುಖಂಡ, ಮಾಜಿ ಸಚಿವ ಎಂ.ಪಿ.ರೇಣುಕಾಚಾರ್ಯ ಸರ್ಕಾರಕ್ಕೆ ಎಚ್ಚರಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಿದ್ಧರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರವು ರೈತವಿರೋಧಿಯಾಗಿದೆ. ಹೊನ್ನಾಳಿ–ನ್ಯಾಮತಿ ಬಂದ್ ನಂತರ ರಾಜ್ಯದಲ್ಲಿ ಮೆಕ್ಕೆಜೋಳ, ಭತ್ತ ಖರೀದಿ ಕೇಂದ್ರ ತೆರೆಯುವುದೂ ಸೇರಿದಂತೆ ಹಲವು ಬೇಡಿಕೆಗಳ ಈಡೇರಿಕೆಗೆ ಹೋರಾಟ ಆರಂಭವಾಗಿದೆ. ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ನೇತೃತ್ವದಲ್ಲಿ ಹೋರಾಟವನ್ನು ಇನ್ನಷ್ಟು ತಿವ್ರಗೊಳಿಸಲು ನಿರ್ಧರಿಸಲಾಗಿದೆ ಎಂದರು.

ಹಿಂದೆ ಬಿ.ಎಸ್.ಯಡಿಯೂರಪ್ಪನವರು ಮುಖ್ಯಮಂತ್ರಿಯಾಗಿದ್ದಾಗ ರಾಜ್ಯ ಸರ್ಕಾರದ ಬೊಕ್ಕಸದಿಂದ ಹಣ ಬಿಡುಗಡೆ ಮಾಡಿ ಖರೀದಿ ಕೇಂದ್ರ ತೆರೆಯಲಾಗಿತ್ತು. ಆದರೆ ಪ್ರಸ್ತುತ ಅಧಿಕಾರದಲ್ಲಿರುವ ಸಿದ್ದರಾಮಯ್ಯನವರು ಕೇಂದ್ರಕ್ಕೆ ಪತ್ರ ಬರೆದು ಮೆಕ್ಕೆಜೋಳ ತೆಗೆದುಕೊಳ್ಳುವಂತೆ ಹೇಳುತ್ತಿದ್ದಾರೆ. ರೈತರಿಗೆ ಇದರಿಂದ ಉಪಯೋಗಕ್ಕಿಂತಲೂ ಅನಾನುಕೂಲತೆ ಹೆಚ್ಚು. ಖರೀದಿ ಕೇಂದ್ರಕ್ಕೆ ಸಿಎಂ ಸಿದ್ದರಾಮಯ್ಯ ಪತ್ರ ಬರೆದಿದ್ದಾರೆ. ಎಲ್ಲವನ್ನೂ ಕೇಂದ್ರ ಸರ್ಕಾರ ಮಾಡುವುದಾದರೆ ನೀವು ಇರುವುದು ಯಾಕೆ? ಕೇಂದ್ರ ಸರ್ಕಾರ ಮೆಕ್ಕೆಜೋಳಕ್ಕೆ 2,400 ರೂ. ಬೆಂಬಲ ಬೆಲೆ ನಿಗಧಿ ಪಡಿಸಿದ್ದು, ಇದಕ್ಕೆ ರಾಜ್ಯ ಸರ್ಕಾರ 600 ಪ್ರೋತ್ಸಾಹಧನ ಸೇರಿಸಿ ಕೊಡಬೇಕು. ತಕ್ಷಣ ಮೆಕ್ಕೆಜೋಳ ಖರೀದಿ ಕೇಂದ್ರ ತೆರೆಯಬೇಕು ಎಂದು ಅವರು ತಾಕೀತು ಮಾಡಿದರು.

ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿ ತಮ್ಮ ದೆಹಲಿ ಭೇಟಿಯನ್ನು ಬಿಜೆಪಿ ಸೃಷ್ಟಿ ಅಂತಾ ಜಂಟಿ ಸುದ್ದಿಗೋಷ್ಠಿ ನಡೆಸಿದ್ದಾರೆ. ಆದರೆ ಕಾಂಗ್ರೆಸ್ ಒಳಗೆ ಕಚ್ಚಾಟ ಇರುವುದು ಇಡೀ ನಾಡಿಗೆ ಗೊತ್ತಿರುವ ವಿಚಾರ. ನಿಮ್ಮ ಕಚ್ಚಾಟದಲ್ಲಿ ರೈತರು ಬೀದಿಗೆ ಬೀಳುವಂತಾಗಿದೆ. ಈಗ ಬಂದು ತೇಪೆ ಹಚ್ಚಿದರೆ ಆಗುವುದಿಲ್ಲ. ದಲ್ಲಾಳಿಗಳಿಗೆ ಅನುಕೂಲವಾಗುವಂತೆ ಮೆಕ್ಕೆಜೋಳ ಖರೀದಿ ಕೇಂದ್ರ ತೆರೆಯಲು ಸರ್ಕಾರ ಮೀನಮೇಷ ನೋಡುತ್ತಿದೆ. ಸರ್ಕಾರದ ವಿಳಂಬನೀತಿ ಖಂಡಿಸಿ ಡಿಸೆಂಬರ್ 8ರಂದು ಬೆಳಗಾವಿ ಸುವರ್ಣಸೌಧಕ್ಕೆ ಮುತ್ತಿಗೆ ಹಾಕಲಿದ್ದು, ರೈತ ಬಾಂಧವರು ಪಕ್ಷಾತೀತವಾಗಿ ಹೋರಾಟದಲ್ಲಿ ಭಾಗವಹಿಸಬೇಕು ಎಂದು ಅವರು ಮನವಿ ಮಾಡಿದರು.

ಸಚಿವ ದಿನೇಶ್ ಗುಂಡೂರಾವ್ ಕಾರ್ಪೊರೇಟ್ ಸಂಸ್ಕೃತಿ ಮನುಷ್ಯ. ರೈತರ ಬಗ್ಗೆ ಏನೂ ಗೊತ್ತಿಲ್ಲ. ಯಾವ ಬೆಳೆ ಎಲ್ಲಿ ಬೆಳೆಯಲಾಗುತ್ತದೆ ಎಂಬ ತಿಳವಳಿಕೆಯೂ ಇಲ್ಲ. ಮೆಕ್ಕೆಜೋಳ ಹೇಗೆ ಬೆಳೆಯುತ್ತಾರೆ? ಅಂತಾ ಅವರಿಗೆ ಗೊತ್ತಾ? ನಾವು ಅಧಿಕಾರಕ್ಕೆ ಬಂದಿರುವುದು ಕುರ್ಚಿ ಕಿತ್ತಾಟಕ್ಕೆ ಅಂತಾ ಬಹಿರಂಗವಾಗಿ ಹೇಳಿಬಿಡಿ. ಮುಂಬರುವ ಚುನಾವಣೆಯಲ್ಲಿ ಜನ ಇದಕ್ಕೆ ಉತ್ತರ ಕೊಡುತ್ತಾರೆ ಎಂದು ಅವರು ಇದೇ ವೇಳೆ ವಾಗ್ದಾಳಿ ನಡೆಸಿದರು.

ಕನ್ನೇರಿ ಶ್ರೀಗಳ ಹೇಳಿಕೆ ಬಗ್ಗೆ ಪ್ರತಿಕ್ರಿಯಿಸಲು ನಿರಾಕರಿಸಿದ ರೇಣುಕಾಚಾರ್ಯ, ಸ್ವಾಮೀಜಿಗಳ ಹೇಳಿಕೆ ಬಗ್ಗೆ ನಾನು ತಲೆಕೆಡಿಸಿಕೊಳ್ಳುವುದಿಲ್ಲ. ಅಂತಹ ಹೇಳಿಕೆಗಳ ಕುರಿತು ಯಾವುದೇ ಪ್ರತಿಕ್ರಿಯೆ ಕೊಡುವುದಿಲ್ಲ. ನಮಗೆ ರೈತರ ಸಮಸ್ಯೆ ಮುಖ್ಯ ಎಂದಷ್ಟೇ ಹೇಳಿದರು.

ವಿರೋಧಿ ಗುಂಪಿನವರ ದೆಹಲಿ ಭೇಟಿ ವಿಚಾರವಾಗಿ ಪ್ರತಿಕ್ರಿಯಿಸಿದ ಅವರು, ಯಾರಿಂದಲೂ ಬಿ.ವೈ.ವಿಜಯೇಂದ್ರ ಬದಲಾವಣೆ ಮಾಡಲು ಆಗುವುದಿಲ್ಲ. ರಾಜ್ಯಾಧ್ಯಕ್ಷರು ಉತ್ತಮವಾಗಿ ಕೆಲಸ ಮಾಡುತ್ತಿದ್ದಾರೆ. ನಾಳೆ ದೆಹಲಿಗೆ ಹೋಗುವವರ ಬಳಿಯೇ ಏನು ವಿಚಾರ ಅಂತಾ ಕೇಳಿ. ನನಗೆ ಪ್ರಧಾನಿ ನರೇಂದ್ರ ಮೋದಿ, ಅಮಿತ್ ಷಾ, ಬಿ.ಎಸ್. ಯಡಿಯೂರಪ್ಪ ನಾಯಕರು. ಜಿ.ಎಂ.ಸಿದ್ದೇಶ್ವರ್ ನನಗೆ ನಾಯಕರಲ್ಲ. ದೆಹಲಿಯಲ್ಲಿ ಚಳಿ ಹೆಚ್ಚಿದ್ದು, ಆರೋಗ್ಯದ ಬಗ್ಗೆ ಕಾಳಜಿ ವಹಿಸಬೇಕು ಎಂದು ವ್ಯಂಗ್ಯವಾಡಿದರು.

ಬಿಜೆಪಿ ರೈತ ಮೋರ್ಚಾ ರಾಜ್ಯ ಉಪಾಧ್ಯಕ್ಷ ಲೋಕಿಕೆರೆ ನಾಗರಾಜ, ಮುಖಂಡರಾದ ಧನಂಜಯ ಕಡ್ಲೇಬಾಳು, ರಾಜು ವೀರಣ್ಣ, ಪ್ರವೀಣ ಜಾಧವ್ ಮತ್ತಿತರರು ಸುದ್ದಿಗೋಷ್ಠಿಯಲ್ಲಿ ಹಾಜರಿದ್ದರು.

## ಪ್ರಿಂಟಿಂಗ್‌ನಲ್ಲಿ ಕಂಪ್ಯೂಟರಿಕರಣ ನಶಿಸಿ ಹೋಗುತ್ತಿರುವ ಹಳೆಯ ಉದ್ಯೋಗಗಳು

ಚಿತ್ರದುರ್ಗ: 85 ವರ್ಷದ ಹಿರಿಯ ಜೀವಿ ಸೋಮಶೇಖರಪ್ಪ ನಾರಾ, ಬಾಗಲಕೋಟೆಯ ನಿವಾಸಿ, ಚಿತ್ರದುರ್ಗಕ್ಕೆ ಬಂದು 65 ವರ್ಷದಿಂದ ಪುಸ್ತಕದ ಬೈಂಡಿಂಗ್ ಮಾಡಿ ಜೀವನ ನಿರ್ವಹಿಸುತ್ತಿರುವ ಇಂಥ ಹಿರಿಯರು, ಯುವ ಜನಾಂಗಕ್ಕೆ ಮಾದರಿಯಾಗಬೇಕು, ಕೆಲಸವಿಲ್ಲ, ನಿರುದ್ಯೋಗ ಸಮಸ್ಯೆ ಹೆಚ್ಚಾಗುತ್ತಿದೆ, ಬದುಕು ದುಸ್ತರವಾಗಿದೆ ಎಂದು ಕೊರಗುವಂತಹ ಯುವ ಜನಾಂಗಕ್ಕೆ ಮಾದರಿಯಾಗಿ ನಿಂತು, ಇಳಿಯ ವಯಸ್ಸಿನಲ್ಲೂ ಸಹ ಯುವಕರಂತೆ ಬೈಂಡಿಂಗ್ ಕೆಲಸ ಮಾಡಿಕೊಂಡು ಜೀವನ ನಿರ್ವಹಿಸುತ್ತಿರುವ ಸೋಮಶೇಖರಪ್ಪನಂತವರು ಸಮಾಜಕ್ಕೆ ಮಾದರಿಯಾಗಿದ್ದಾರೆ ಎಂದು ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿ ರಾಜ್ಯ ಉಪಾಧ್ಯಕ್ಷ ಮತ್ತು ಕರ್ನಾಟಕ ಸರ್ವೋದಯ ಮಂಡಳಿಯ ಜಿಲ್ಲಾಧ್ಯಕ್ಷ ಡಾ ಎಚ್ ಕೆ ಎಸ್ ಸ್ವಾಮಿಯವರು ಕರೆ ನೀಡಿದರು.



ಅವರು ಚಿತ್ರದುರ್ಗ ನಗರದ ಕೇಂದ್ರ ಭಾಗದಲ್ಲಿರುವ ದೊಡ್ಡಪೇಟೆಯ ಬಳಿ ಮುದ್ರಣಾಲಯಗಳ ಸಮಸ್ಯೆಗಳು ಮತ್ತು ಪರಿಹಾರ ಎಂಬ ವಿಚಾರವಾಗಿ ಮಾತನಾಡುತ್ತಾ, ಜನರಲ್ಲಿ ಜಾಗೃತಿ ಮೂಡಿಸುತ್ತಿದ್ದರು.

ಕಂಪ್ಯೂಟರ್, ಮೊಬೈಲ್ ಮತ್ತು ಹೆಚ್ಚಿನ ತಾಂತ್ರಿಕತೆ ಬಂದಾಗಿನಿಂದ ಪುಸ್ತಕಗಳಲ್ಲಿ ಮಾರಾಟ ಮತ್ತು ಮುದ್ರಣ ಕಡಿಮೆಯಾಗುತ್ತಿದ್ದು, ಮುದ್ರಣಾಲಯದಲ್ಲಿ ಕೆಲಸ ಮಾಡುವ ನೌಕರರಿಗೆ ಆತಂಕಕಾರಿಯಾಗಿದೆ,

ಬಹಳಷ್ಟು ಹಿರಿಯರು, ಹಿಂದಿನ ಕಾಲದ ಜನರು, ಬೈಂಡಿಂಗ್ ಮಾಡಿ ಜೀವನ ಮಾಡುತ್ತಿದ್ದವರಿಗೆ ಈಗ ದುಡಿಮೆ ಇಲ್ಲದೆ ಮುದ್ರಣಾಲಯಗಳನ್ನ ದಿನಸಿ ಮಾರುವ ಅಂಗಡಿಗಳನ್ನಾಗಿ ಪರಿವರ್ತಿಸಿದ್ದಾರೆ ಎಂದರು.

ಬಾಗಲಕೋಟೆಯ ಹಿರಿಯ ವ್ಯಕ್ತಿ, ಈ ವಯಸ್ಸಿನಲ್ಲೂ ಸಹ ದುಡಿಮೆ ಮಾಡಿ ಜೀವನ ಮಾಡಿಕೊಳ್ಳಬೇಕು ಎಂಬ ಭಾವನೆಯಿಂದ ಹಗಲಿರುಳು ದುಡಿಯುತ್ತಿರುವ ಇಂತಹ ಹಿರಿಯ ಜೀವಿಗಳಿಗೆ, ಸರ್ಕಾರ ಅಥವಾ ಸಂಘ–ಸಂಸ್ಥೆಗಳು ಗುರುತಿಸಿ, ಅವರಿಗೆ ಉತ್ತಮ ಮೂಲಭೂತ ಸೌಕರ್ಯಗಳನ್ನ ಹಾಗೂ ಜೀವನ ನಿರ್ವಹಣೆಗೆ ಬೇಕಾದಂತ ವ್ಯವಸ್ಥೆ ಮಾಡಿಕೊಡಬೇಕಾದದ್ದು ಕರ್ತವ್ಯವಾಗಿದೆ ಎಂದರು.

## ಸಾಮೂಹಿಕ ಶ್ರೀ ಗಾಯತ್ರಿ ಪೂಜೆ ಹಾಗೂ ಉಪಾಸನೆ ಕಾರ್ಯಕ್ರಮ

**ದಾವಣಗೆರೆ:** ನಗರದ ಶ್ರೀ ಗಾಯತ್ರಿ ದೇವಿಯ ಉಪಾಸಕರ ಕ್ರಿಯಾತ್ಮಕ ಆಧ್ಯಾತ್ಮ ಸಂಸ್ಥೆ ಶ್ರೀ ಗಾಯತ್ರಿ ಪರಿವಾರದಿಂದ ಪ್ರತೀ ತಿಂಗಳ ಹುಣ್ಣಿಮೆಯಂದು ನಡೆಸುವ ಸಾಮೂಹಿಕ ಶ್ರೀ ಗಾಯತ್ರಿ ಪೂಜೆ, ಉಪಾಸನೆ, ಹೊಸ್ತಿಲ ಹುಣ್ಣಿಮೆ ಅಂಗವಾಗಿ ದಿನಾಂಕ 04–12–2025 ರಂದು ಗುರುವಾರ ಬೆಳಿಗ್ಗೆ 7–00ಕ್ಕೆ ನಡೆಯಲಿದೆ ಎಂದು ಶ್ರೀ ಗಾಯಿತ್ರಿ ಪರಿವಾರದ ಅಧ್ಯಕ್ಷರಾದ ಡಾ॥ ರಮೇಶ್ ಪಟೇಲ್ ಪಟೇಲ್ ತಿಳಿಸಿದ್ದಾರೆ

ನಗರದ ಜಯದೇವ ವೃತ್ತದಲ್ಲಿರುವ ಶ್ರೀ ಶಂಕರಮಠದಲ್ಲಿ ನಡೆಯಲಿರುವ ಈ ಅಪ್ಪಟ ಆಧ್ಯಾತ್ಮ ಸಮಾರಂಭದ ಈ ಬಾರಿಯ ಪೂಜಾ ಸೇವಾಕರ್ತರಾದ ಸಂಚಾಲಕರಾದ ಭಾವನ್ನಾರಾಯಣ ಕುಟುಂಬದವರು ಕಳೆದ ಇಪ್ಪತ್ತೈದು ವರ್ಷಗಳಿಂದಲೂ ನಿರಂತರವಾಗಿ ಪ್ರತೀ ಪೂರ್ಣಿಮೆ ಯಂದು ನಡೆಯುವ ಈ ಧಾರ್ಮಿಕ ಪ್ರಕ್ರಿಯೆಯಲ್ಲಿ ಆಸಕ್ತ ಸಾರ್ವಜನಿಕರು ಯಾವುದೇ ಜಾತಿ, ಮತ, ವರ್ಣ, ಲಿಂಗ ಬೇಧವಿಲ್ಲದೇ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ, ಕಾರ್ಯಕ್ರಮ ಯಶಸ್ವಿಗೊಳಿಸಬೇಕಾಗಿ ಪರಿವಾರದ ಪ್ರಧಾನ ಕಾರ್ಯದರ್ಶಿ ಸಾಲಿಗ್ರಾಮ ಗಣೇಶ್ ಶೆಣೈ ವಿನಂತಿಸಿದ್ದಾರೆ.

## ಬಿಡಾಡಿ ದನಗಳ ನಿಯಂತ್ರಣಕ್ಕೆ ನಗರಸಭೆ ಸೂಚನೆ

**ಚಿಕ್ಕಮಗಳೂರು:** ಬಿಡಾಡಿ ದನಗಳ ಉಪದ್ರವ ಉಂಟಾಗುತ್ತಿರುವ ಬಗ್ಗೆ ಮಾನ್ಯ ಸರ್ವೋಚ್ಚ ನ್ಯಾಯಾಲಯವು ನೀಡಿರುವ ಅಂಶಗಳ ಆದೇಶದಂತೆ ಸಾರ್ವಜನಿಕರಿಂದ ಸಾಕಷ್ಟು ದೂರುಗಳು ಬರುತ್ತಿದ್ದು, ಬಿಡಾಡಿ ದನಗಳಿಂದ ರಸ್ತೆ ಅಪಘಾತಗಳು ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ನಗರಸಭೆ ವ್ಯಾಪ್ತಿಯಲ್ಲಿ ದನಗಳ ಮಾಲೀಕರು ಯಾರಾದರೂ ಇದ್ದಲ್ಲಿ ತಮ್ಮ ದನಗಳನ್ನು 3 ದಿನದ ಒಳಗಾಗಿ ಹಿಡಿದು ರಸ್ತೆಗೆ ಬಿಡದೇ ತಮ್ಮ ಮನೆಯಲ್ಲೇ ಸಾಕಿಕೊಳ್ಳಬೇಕು. ತಪ್ಪಿದ್ದಲ್ಲಿ ಸಾರ್ವಜನಿಕರ ಆರೋಗ್ಯ ಮತ್ತು ಸುರಕ್ಷತೆ ಹಿತ ದೃಷ್ಟಿಯಿಂದ ನಗರಸಭಾ ವತಿಯಿಂದ ದನಗಳನ್ನು ಹಿಡಿದು ಗೋಶಾಲೆಗೆ ಸಾಗಿಸಲು ಕ್ರಮ ಕೈಗೊಳ್ಳಲಾಗುವುದು. ದನಗಳ ಮಾಲೀಕರು ಈ ಸಮಯದಲ್ಲಿ ದನ ಹಿಡಿಯುವವರಿಗೆ ಅಡ್ಡಿ ಆತಂಕ ಉಂಟು ಮಾಡಿದಲ್ಲಿ ದನಗಳ ಮಾಲೀಕರುಗಳಿಗೆ ರೂ. 5000 ದವರೆಗೆ ದಂಡ ವಿಧಿಸುವುದಲ್ಲದೇ ಅಂತಹವರ ವಿರುದ್ಧ ನಿಯಮಾನುಸಾರ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುವುದೆಂದು ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಯನಗರ ಕನ್ನಡ ಜಾತ್ರೆ ಕಾರ್ಯಕ್ರಮ ಆಚರಣೆ



**ದಾವಣಗೆರೆ:** ಜಯನಗರ ಗೆಳೆಯರ ಬಳಗದಿಂದ ಈಚೆಗೆ ದ್ವಿತೀಯ ವರ್ಷದ ಜಯನಗರ ಕನ್ನಡ ಜಾತ್ರೆ ಕಾರ್ಯಕ್ರಮ ಆಚರಿಸಲಾಯಿತು.

ಕಣಸಾಳ್ ಭೀಮೇಶ್ ಅಧ್ಯಕ್ಷತೆಯಲ್ಲಿ ನಡೆದ ಕಾರ್ಯಕ್ರಮವನ್ನು ಜಿಲ್ಲಾ ಕಸಾಪ ಮಾಜಿ ಅಧ್ಯಕ್ಷ ಡಾ. ಹೆಚ್.ಎಸ್. ಮಂಜುನಾಥ್ ಕುರ್ಕಿ ಉದ್ಘಾಟಿಸಿದರು. ಮುಖ್ಯ ಅತಿಥಿಗಳಾಗಿ ಕರ್ನಾಟಕ ರಕ್ಷಣಾ ವೇದಿಕೆಯ ಜಿಲ್ಲಾಧ್ಯಕ್ಷ ಎಂ.ಎಸ್ ರಾಮೇಗೌಡ, ನಗರಪಾಲಿಕೆ ನಾಮ ನಿರ್ದೇಶಿತ ಮಾಜಿ ಸದಸ್ಯ ಗಣೇಶ್ ಹುಲ್ಲುಮನೆ,

ಎಚ್. ಗುರುರಾಜ್, ನಾಗರಾಜ್ ಪಾಮೇನಳ್ಳಿ, ದಾವಣಗೆರೆ ಜಿಲ್ಲಾ ಬೋವಿ ಸಮಾಜದ ಅಧ್ಯಕ್ಷ ಎಚ್. ಜಯಣ್ಣ, ಕರ್ನಾಟಕ ರಾಜ್ಯ ಅರಣ್ಯ ಗುತ್ತಿಗೆದಾರರ ಸಂಘದ ರಾಜ್ಯಾಧ್ಯಕ್ಷ ಚಂದ್ರನಾಯ್ಕ, ಉದ್ಯಮಿಗಳಾದ ಎ.ಸಿ ಬಸವರಾಜ್, ಓ.ಮಹೇಶ್ವರಪ್ಪ, ಮಂಜುನಾಥ್, ಪವಾಡಪ್ಪ ಮತ್ತಿತರರು ಪಾಲ್ಗೊಂಡಿದ್ದರು.


ಸೇಂಟ್ ಜಾನ್ಸ್ ಶಾಲೆಯ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಸಾಂಸ್ಕೃತಿಕ ಕಾರ್ಯಕ್ರಮ ನಡೆಸಿದರು. ಖಾಸಿಂ ಇವೆಂಟ್ಸ್ ಬೆಂಗಳೂರಿನಿಂದ ರಸಮಂಜರಿ ನಡೆಯಿತು.

## ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಚುನಾವಣೆ

**ನ್ಯಾಮತಿ :** ನ್ಯಾಮತಿ ತಾಲೂಕಿನ ಗೋವಿನಕೋವಿ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಐದು ವರ್ಷದ ಅವದಿಗೆ ಭಾನುವಾರ ನಡೆದ ಚುನಾವಣೆಯ ಫಲಿಂತಾಶ ಘೋಷಣೆ ಆಯಿತು.

ಸಾಮಾನ್ಯ ಮೀಸಲು ಕ್ಷೇತ್ರದಿಂದ ಬಸವನಹಳ್ಳಿ ಪಿ.ಬಿ.ನಾಗರಾಜಪ್ಪ , ಅರಬಗಟ್ಟೆ ವೈ.ಡಿ. ಮಂಜಪ್ಪ , ಬಸವನಹಳ್ಳಿ ಧನಂಜಯ .ಜಿ. , ಅರಬಗಟ್ಟೆ ಶಿವಕುಮಾರ್ ಎಂ.ಜಿ. ಕುರುವ ಕೆ.ಎಸ್.ಕುಮಾರಸ್ವಾಮಿ , ಹಿಂದುಳಿದ ಅ ವರ್ಗ ಮೀಸಲು ಕ್ಷೇತ್ರದಿಂದ ಬಸವನಹಳ್ಳಿ ಎಸ್.ಸಿದ್ದಪ್ಪ , ಹಿಂದುಳಿದ ಬ ವರ್ಗ ಮೀಸಲು ಕ್ಷೇತ್ರದಿಂದ ಗೋವಿನಕೋವಿ ಚಂದ್ರಶೇಖರ ಎ.ಎಸ್ , ಭಾನುವಾರ ನಡೆದ 7 ಸ್ಥಾನಕ್ಕೆ ಚುನಾವಣೆಯಲ್ಲಿ 16 ಮಂದಿ ಕಣದಲ್ಲಿದ್ದರೂ.

ಈಗಾಗಲೇ 5 ಸ್ಥಾನಗಳಿಗೆ ಅವಿರೋಧವಾಗಿ ಆಯ್ಕೆಯಾಗಿದ್ದು ಮಹಿಳಾ ಮೀಸಲು ಕ್ಷೇತ್ರದಿಂದ ರತ್ನಮ್ಮ ಬಸಪ್ಪ , ಲಲಿತ ಜಿ.ಎಸ್.ಬಸವಣ್ಯಪ್ಪ , ಪರಿಶಿಷ್ಟ ಜಾತಿ ಮೀಸಲು ಕ್ಷೇತ್ರದಿಂದ ಎ.ಕೆ.ಲಿತಮ್ಮ ನಿಂಪ್ಪ , ಪರಿಶಿಷ್ಟ ಪಂಗಡ ಮೀಸಲು ಕ್ಷೇತ್ರದಿಂದ ಕೇಶವ ಮೂರ್ತಿ ಬಿ.ವಿ , ಸಾಲಗಾರರಲ್ಲದ ಕ್ಷೇತ್ರದಿಂದ ಜಿ.ಮಹೇಶ್ವರಪ್ಪ ಈಗಾಗಲೇ ಅವಿರೋಧವಾಗಿ ಆಯ್ಕೆಯಾಗಿದ್ದರು.



ನ್ಯಾಮತಿ ತಾಲೂಕಿನ ಗೋವಿನಕೋವಿ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಐದು ವರ್ಷದ ಅವದಿಗೆ ಭಾನುವಾರ ನಡೆದ ಚುನಾವಣೆಯ ವಿಜೇತ ಅಭ್ಯರ್ಥಿಗಳು ಚುನಾವಣಾಧಿಕಾರಿಯಿಂದ ಪ್ರಮಾಣ ಪತ್ರ ಪಡೆಯುತ್ತಿರುವುದು.

ಭಾನುವಾರ ನಡೆದ ಚುನಾವಣೆಯಲ್ಲಿ 801 ಮತಗಳ ಪೈಕಿ 676 ಮತಗಳು ಚಲಾವಣೆಯಾಗಿದ್ದವು ಚುನಾವಣಪ್ರಕ್ರಿಯೆಯಲ್ಲಿ ಸಹಕಾರ ಸಂಘಗಳ ಅಧಿಕಾರಿ ಚುನಾವಣಾಧಿಕಾರಿ ನವೀನಕುಮಾರ್ , ಸಿಬ್ಬಂದಿಗಳಾದ ಮಹೇಂದ್ರ , ಅವಿನಾಶ ಕೆ.ಜಿ. , ಆಶೋಕ ಪಾಟೀಲ್ , ದೂಕ್ಲೇನಾಯ್ಕ , ಬೀರೇಶ್ , ಪ್ರವೀಣ ಎಚ್.ಸಿ. , ಯೋಗೇಶ್ ಎಂ, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಕಾರ್ಯದರ್ಶಿ ಜಗದೀಶ್ ಸೇರಿದಂತೆ ಇತರರು ಇದ್ದರು.

ಚುನಾವಣೆಯ ಬಂದೋಬಸ್ತನ್ನು ನ್ಯಾಮತಿ ಠಾಣೆಯ ಪಿಎಸ್ಐ ಹೊಳೆಬಸಪ್ಪ ಹೊಳೆ , ಎಎಸ್ಐ ಮಲ್ಲೇಶಪ್ಪ , ಸಿಬ್ಬಂದಿ ಮಂಜಪ್ಪ ಕೆ ಸೇರಿದಂತೆ ಇತರರು ಭಾಗವಹಿಸಿದ್ದರು.

## ನಿಧನ ಸುದ್ಧಿಗಳು

### ಸುಜಾತಾ ಮಾಸಣಗಿ ನಿಧನ

**ದಾವಣಗೆರೆ:** ತಾಲ್ಲೂಕಿನ ಬಾಡ ಗ್ರಾಮದ ಅಣಬೇರು ಕೆಂಚಪ್ಪ ಪ್ರೌಢಶಾಲೆಯ ಶಿಕ್ಷಕಿ ಸುಜಾತಾ ಮಾಸಣಗಿ (47) ಅನಾರೋಗ್ಯದಿಂದ ಸೋಮವಾರ ನಿಧನರಾದರು.

ಇವರಿಗೆ ಪತಿ, ಪುತ್ರ ಇದ್ದಾರೆ. ಎಸ್. ಎಸ್. ಬಡಾವಣೆಯ 4ನೇ ಮುಖ್ಯ ರಸ್ತೆ–ಯಲ್ಲಿರುವ ಮನೆಯಲ್ಲಿ ಮಂಗಳವಾರ ಬೆಳಿಗ್ಗೆ 8 ಗಂಟೆಯವರೆಗೆ ಮೃತದೇಹದ ದರ್ಶನಕ್ಕೆ ವ್ಯವಸ್ಥೆ ಕಲ್ಪಿಸಲಾಗಿದೆ. ರಾಣೆಬೆನ್ನೂರು ನಗರದ ರುದ್ರಭೂಮಿ–ಯಲ್ಲಿ ಅಂತ್ಯಕ್ರಿಯೆ ನಡೆಯಲಿದೆ.

### ಶ್ರೀಮತಿ ಭರಮಮ್ಮ ನಿಧನ

**ದಾವಣಗೆರೆ :** ತಾಲ್ಲೂಕು ನಾಗನೂರು ಗ್ರಾಮದ ವಾಸಿ, ದಿ. ಡಿ.ಬಸಪ್ಪನವರ ಧರ್ಮಪತ್ನಿ ಶ್ರೀಮತಿ ಭರಮಮ್ಮ (85) ಅವರು ದಿನಾಂಕ 01–12–2025 ರ ಸೋಮವಾರ ಮಧ್ಯಾಹ್ನ 12.30 ಕ್ಕೆ ನಿಧನರಾದರು. ಮೂವರು ಪುತ್ರರು, ಮೂವರು ಪುತ್ರಿಯರು, ಸೊಸೆಯಂದಿರು, ಅಳಿಯಂದಿರು, ಮೊಮ್ಮಕ್ಕಳು ಹಾಗೂ ಅಪಾರ ಬಂಧು–ಬಳಗವನ್ನು ಅಗಲಿರುವ ಮೃತರ ಅಂತ್ಯಕ್ರಿಯೆಯನ್ನು ದಿನಾಂಕ 02–12–2025 ರ ಮಂಗಳವಾರ ಮಧ್ಯಾಹ್ನ 1 ಗಂಟೆಗೆ ನಾಗನೂರು ಗ್ರಾಮದ ಸ್ವಂತ ಜಮೀನಿನಲ್ಲಿ ನೆರವೇರಿಸಲಾಯಿತು.

### ಶ್ರೀ ಬಸವರಾಜಪ್ಪ ನಿಧನ

**ದಾವಣಗೆರೆ:** ತಾಲ್ಲೂಕು ಕರಿಲಕ್ಕೇನಹಳ್ಳಿ ಗ್ರಾಮದ ವಾಸಿ, ಶ್ರೀ ದೇವಿ ಕ್ಯಾಟರಿಂಗ್ ಮಾಲೀಕರಾದ ಶ್ರೀ ಮಂಜುನಾಥ್ ಕೆ.ಬಿ. ಅವರ ತಂದೆ ಶ್ರೀ ಬಸವರಾಜಪ್ಪ (76) ದಿನಾಂಕ: 01–12–2025 ರಂದು ಮಧ್ಯಾಹ್ನ 12 ಗಂಟೆಗೆ ನಿಧನರಾದರು. ಪತ್ನಿ, ಇಬ್ಬರು ಪುತ್ರರು, ಓರ್ವ ಪುತ್ರಿ, ಮೊಮ್ಮಕ್ಕಳು ಹಾಗೂ ಅಪಾರ ಬಂಧು–ಬಳಗವನ್ನು ಅಗಲಿರುವ ಮೃತರ ಅಂತ್ಯಕ್ರಿಯೆಯನ್ನು ದಿನಾಂಕ : 02–12–2025 ರಂದು ಮಧ್ಯಾಹ್ನ 12.30ಕ್ಕೆ ಕರಿಲಕ್ಕೇನಹಳ್ಳಿ ಗ್ರಾಮದ ಸ್ವಂತ ಜಮೀನಿನಲ್ಲಿ ನೆರವೇರಿಸಲಾಯಿತು.

## ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆ ಯುವನಿಧಿ

**ಗದಗ** : ಕರ್ನಾಟಕ ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ 05 ಗ್ಯಾರೆಂಟಿ ಯೋಜನೆಗಳಲ್ಲಿ 05ನೇ ಗ್ಯಾರೆಂಟಿ ಯೋಜನೆ ಯುವನಿಧಿ ಈ ಯೋಜನೆಯಲ್ಲಿ ಪದವಿದರರಿಗೆ 3000/- ರೂ. ಮತ್ತು ಡಿಪ್ಲೋಮದರರಿಗೆ 1500/- ರೂ. ಗಳನ್ನು ನಿರುದ್ಯೋಗಿ ಭತ್ಯೆಯಾಗಿ ನಿಡುತ್ತಿದ್ದು ಜನೇವರಿ-2023 ರ ನಂತರ ತೇರ್ಗಡೆಯಾಗಿ ಅರ್ಹತೆ ಹೊಂದಿದ ಅಭ್ಯರ್ಥಿಗಳು ಸೇವಾ ಸಿಂಧು ಪೋರ್ಟಲ್‌ನಲ್ಲಿ ನೋಂದಣಿ ಮಾಡಿಕೊಳ್ಳಬಹುದಾಗಿದ್ದು ಹಾಗೂ ಪಲಿತಾಂಶದ ನಂತರ ನಿರುದ್ಯೋಗಿಯಾಗಿ 180 ದಿನಗಳನ್ನು ಪೂರೈಸಿದ ಅರ್ಹ ಅಭ್ಯರ್ಥಿಗಳಿಗೆ ನೇರ ನಗದು ವರ್ಗಾವಣೆ ಮಾಡಲಾಗಿರುತ್ತದೆ, ಅಭ್ಯರ್ಥಿಗಳು ಈ ಪ್ರಯೋಜನ ಪ್ರತಿ ತಿಂಗಳು ಪಡೆಯಲು, ತಾನು ನಿರುದ್ಯೋಗಿಯೆಂದು, ವ್ಯಾಸಂಗ ಮುಂದುವರೆಸು ತ್ತಿಲ್ಲವೆಂದು ಹಾಗೂ ಸ್ವಯಂ ಉದ್ಯೋಗಿಯಾಗಿಲ್ಲವೆಂದು ಸ್ವಯಂ ಘೋಷಣೆಯನ್ನು ಪ್ರತಿ ಮಾಹೆ ದಿನಾಂಕಃ 25 ರೊಳಗಾಗಿ ಮಾಡಬೇಕು. ಸೇವಾ ಸಿಂದು ಪೋರ್ಟಲ್ ಲಾಗಿನ್‌ನಲ್ಲಿ ಅರ್ಜಿ ಸ್ಥಿತಿಯನ್ನು ಪರಿಶೀಲಿಸಿ ದಾಖಲೆ ಪರಿಶೀಲನೆ ಬಾಕಿ ಉಳಿದಿರುವ ಅಭ್ಯರ್ಥಿಗಳು ಎಲ್ಲ ಮೂಲ ದಾಖಲೆಗಳೊಂದಿಗೆ ಜಿಲ್ಲಾ ಉದ್ಯೋಗ ವಿನಿಮಯ ಕಛೇರಿಗೆ ಖುದ್ದಾಗಿ ಸಂಪರ್ಕಿಸಿ ತಮ್ಮ ದಾಖಲೆಗಳನ್ನು ಪರಿಶೀಲಿಸಿ ದೃಢೀಕರಿಸಿಕೊಳ್ಳಲು ಸೂಚಿಸಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆಃ 08372-220609. ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

## ಇಂದು ರಫ್ತು ಉತ್ತೇಜನ ಕುರಿತು ಒಂದು ದಿನದ ಕಾರ್ಯಾಗಾರ

**ಬಳ್ಳಾರಿ:** ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಜಿಲ್ಲಾ ಕೈಗಾರಿಕಾ ಕೇಂದ್ರ ವತಿಯಿಂದ ಆರ್‌ಎಎಂಪಿ ಯೋಜನೆಯಡಿ ಉದ್ಯಮಶೀಲತಾ ಚಟುವಟಿಕೆಗಳನ್ನು ಬೆಂಬಲಿಸಲು, ಪೋಷಿಸಲು ಹಾಗೂ ಸ್ಥಳೀಯ ಮಟ್ಟದ ಎಂಎಸ್‌ಎಂಇ ಕಾರ್ಯಕ್ಷಮತೆಯನ್ನು ಹೆಚ್ಚಿಸಲು ರಫ್ತು ಉತ್ತೇಜನ ಕುರಿತು ಡಿ.03 ರಂದು ಬೆಳಿಗ್ಗೆ 10.30 ಗಂಟೆಗೆ ನಗರದ ಹೊರವಲಯದ ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ಸಭಾಂಗಣದಲ್ಲಿ ಒಂದು ದಿನದ ಜಾಗೃತಿ ಕಾರ್ಯಾಗಾರ ಹಮ್ಮಿಕೊಳ್ಳಲಾಗಿದೆ.

ಕಾರ್ಯಾಗಾರದಲ್ಲಿ ವಿದ್ಯಾರ್ಥಿಗಳಿಗೆ, ಉದ್ಯಮಿದಾರರಿಗೆ ವ್ಯಾಪಾರ ಅವಕಾಶಗಳ ಕುರಿತು ಮಾರ್ಗದರ್ಶನ ವ್ಯವಹಾರ ಹಾಗೂ ರಫ್ತು ಪ್ರಚಾರ, ತಂತ್ರಜ್ಞಾನದ ಉನ್ನತೀಕರಣ, ಗುಣಮಟ್ಟದ ಪ್ರಮಾಣೀಕರಣಕ್ಕೆ ಬೆಂಬಲ, ಬ್ರಾಂಡಿಂಗ್ ಕುರಿತು ಜಾಗೃತಿ ಮೂಡಿಸಲಾಗುತ್ತದೆ.

## ನಾವೀನ್ಯತೆ / ಆವಿಷ್ಕಾರ ಪುರಸ್ಕಾರಕ್ಕಾಗಿ ಅರ್ಜಿ ಆಹ್ವಾನ

**ಗದಗ** : ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯ ವತಿಯಿಂದ ವಿಜ್ಞಾನ ಮತ್ತು ತಂತ್ರಜ್ಞಾನ ಅಥವಾ ಆರ್ಥಿಕತೆಯ ಯಾವುದೇ ವಿಭಾಗದಿಂದ ಮೂಡಿದ ಜನಸಾಮಾನ್ಯರ ಅದರಲ್ಲೂ ಗ್ರಾಮೀಣ ಪ್ರದೇಶದ ಜನಜೀವನವನ್ನು ಪರಿವರ್ತಿಸಲು ಸಹಾಯಕವಾದ ಅಥವಾ ಉದ್ಯಮಗಳು ಹಾಗೂ ಉದ್ಯೋಗ ಸೃಷ್ಟಿಗೆ ಕಾರಣವಾದ ಅನುಕರಣೀಯ ಆವಿಷ್ಕಾರಗಳು/ ಪರಿಹಾರಗಳನ್ನು ಪ್ರತಿ ವರ್ಷ ಗುರುತಿಸಿ ಪದವಿ, ಸ್ನಾತಕೋತ್ತರ ವಿದ್ಯಾರ್ಥಿಗಳ ಹಾಗೂ ಬೋಧಕರಿಗೆ ಮತ್ತು ಜನಸಾಮಾನ್ಯರಿಗೆ ಆವಿಷ್ಕಾರ , ನಾವೀನ್ಯತೆ ಪುರಸ್ಕಾರಕ್ಕೆ ಅರ್ಜಿ ಆಹ್ವಾನಿಸಲಾಗಿದೆ.ಸ್ನಾತಕೋತ್ತರ ವಿದ್ಯಾರ್ಥಿಗಳ ಅತ್ಯುತ್ತಮ ಆವಿಷ್ಕಾರ/ ನಾವೀನ್ಯತೆಗೆ ಪ್ರೊ. ಯು. ಆರ್. ರಾವ್ ಪುರಸ್ಕಾರ, ಪದವಿ ವಿದ್ಯಾರ್ಥಿಗಳ ಅತ್ಯುತ್ತಮ ಆವಿಷ್ಕಾರ / ನಾವೀನ್ಯತೆಗೆ ಡಾ.ಎಸ್.ಕೆ.ಶಿವಕುಮಾರ್ ಪುರಸ್ಕಾರ , ಬೋಧಕರು ಹಾಗೂ ಜನಸಾಮಾನ್ಯರ ಅತ್ಯುತ್ತಮ ಆವಿಷ್ಕಾರ / ನಾವೀನ್ಯತೆಗೆ ಪ್ರೊ. ಎಸ್. ಅಯ್ಯಪ್ಪನ್ ಪುರಸ್ಕಾರಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ.ಮೇಲ್ಕಂಡ ಪುರಸ್ಕಾರಕ್ಕೆ ರೂ,10,000/ಗಳ ನಗದು ಬಹುಮಾನ ಹಾಗೂ ಪ್ರಶಸ್ತಿ ಪತ್ರವನ್ನು ನೀಡಲಾಗುವುದು. ಆಸಕ್ತರು ಡಿಸೆಂಬರ್ 31 ರೊಳಗಾಗಿ ಅಕಾಡೆಮಿಯ ವೆಬ್‌ಸೈಟ್‌ನಲ್ಲಿ ( https:kstacademy.in ) ನೀಡಿರುವ ಮಾರ್ಗಸೂಚಿಯನ್ವಯ ಆನ್‌ಲೈನ್ ಮೂಲಕ ಅಗತ್ಯ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಬಹುದಾಗಿರುತ್ತದೆ.ಹೆಚ್ಚಿನ ಮಾಹಿತಿಗಾಗಿ ಶ್ರೀನಿವಾಸು ( ಮೊ. ಸಂ. 9620767819 ) ಹಾಗೂ ಚಂದ್ರಶೇಖರ ಮೂರ್ತಿ ( ಮೊ.9686449019/080-29721550 ) ಸಂಪರ್ಕಿಸಬಹುದಾಗಿದೆ.

## ಉದ್ಯೋಗ ಆಕಾಂಕ್ಷಿ ಯುವಜನರ ಮೇಲೆ ಪೋಲೀಸರ ಲಾಠಿ ಚಾರ್ಜ್, ಬಂಧನ ಖಂಡಿಸಿ ಪ್ರತಿಭಟನೆ

**ದಾವಣಗೆರೆ:** ಧಾರವಾಡದಲ್ಲಿ ಶಾಂತಿಯುತವಾಗಿ ಪ್ರತಿಭಟನಾ ಮೆರವಣಿಗೆ ನಡೆಸುತ್ತಿದ್ದ ಉದ್ಯೋಗ ಆಕಾಂಕ್ಷಿ ಯುವಜನರ ಮೇಲೆ ಪೋಲೀಸರು ಲಾಠಿ ಚಾರ್ಜ್ ನಡೆಸಿ ಅವರನ್ನು ಬಂಧಿಸಿರುವ ಸರ್ಕಾರದ ಕ್ರಮವನ್ನು ಖಂಡಿಸಿ ನಗರದಲ್ಲಿ ಉದ್ಯೋಗಾಕಾಂಕ್ಷಿಗಳ ಹೋರಾಟ ಸಮಿತಿ ಮತ್ತು ಆಲ್ ಇಂಡಿಯಾ ಡೆಮಾಕ್ರೆಟಿಕ್ ಯೂತ್ ಆರ್ಗನೈಸೇಷನ್ ಜಿಲ್ಲಾ ಘಟಕಗಳು ಪ್ರತಿಭಟನೆ ನಡೆಸಿದವು.

ಸೋಮವಾರ ನಗರದ ಎಸಿ ಕಚೇರಿ ಮುಂಭಾಗ ಉದ್ಯೋಗಾಕಾಂಕ್ಷಿಗಳ ಹೋರಾಟ ಸಮಿತಿ ಮತ್ತು ಆಲ್ ಇಂಡಿಯಾ ಡೆಮಾಕ್ರೆಟಿಕ್ ಯೂತ್ ಆರ್ಗನೈಸೇಷನ್ ಜಿಲ್ಲಾ ಘಟಕಗಳ ಪದಾಧಿಕಾರಿಗಳು ಸರ್ಕಾರದ ವಿರುದ್ಧ ಘೋಷಣೆ ಕೂಗಿ ಬಂಧಿಸಿರುವ ಎಲ್ಲಾ ಉದ್ಯೋಗಾಕಾಂಕ್ಷಿಗಳನ್ನು ಬಿಡುಗಡೆ ಮಾಡುವಂತೆ ಮನವಿ ಸಲ್ಲಿಸಿದರು.

ಈ ವೇಳೆ ಸಮಿತಿ ಮುಖಂಡ ಪರುಶುರಾಮ್ ಮಾತನಾಡಿ, ಕೇಂದ್ರ ಮತ್ತು ರಾಜ್ಯದಲ್ಲಿ ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ಲಕ್ಷಾಂತರ ಹುದ್ದೆಗಳನ್ನು ಕೂಡಲೇ ಭರ್ತಿ ಮಾಡಬೇಕು. ನೇಮಕಾತಿಯಲ್ಲಿ ಅಕ್ರಮ, ಭ್ರಷ್ಟಾಚಾರವನ್ನು ನಿರ್ಮೂಲನೆ ಮಾಡಿ, ಪಾರದರ್ಶಕ ನೇಮಕಾತಿ ಮಾಡಬೇಕು ಹಾಗೂ ಎಲ್ಲಾ ನೇಮಕಾತಿಯಲ್ಲಿ ಐದು ವರ್ಷ ವಯೋಮಿತಿಯನ್ನು ಹೆಚ್ಚಿಸಬೇಕು ಎಂಬ ಇನ್ನಿತರ ಹಲವು ಬೇಡಿಕೆಗಳ ಈಡೇರಿಕೆಗಾಗಿ ಒತ್ತಾಯಿಸಿ ಇಂದು ಧಾರವಾಡದಲ್ಲಿ ಉದ್ಯೋಗಾಕಾಂಕ್ಷಿಗಳ ಹೋರಾಟ ಸಮಿತಿ ಹಾಗೂ ಜನಸಾಮಾನ್ಯರ ವೇದಿಕೆ ನೇತೃತ್ವದಲ್ಲಿ ಬೃಹತ್ ಪ್ರತಿಭಟನಾ ಮೆರವಣಿಯನ್ನು ಹಮ್ಮಿಕೊಳ್ಳಲಾಗಿತ್ತು ಎಂದರು.

ಈ ಸಮಸ್ಯೆಗಳ ಪರಿಹಾರಕ್ಕಾಗಿ ಶಾಂತಿಯುತವಾಗಿ ಪ್ರತಿಭಟನಾ ಮೆರವಣಿಗೆ ನಡೆಸುತ್ತಿದ್ದ ಉದ್ಯೋಗ ಆಕಾಂಕ್ಷಿ ಯುವಜನರ ಮೇಲೆ ಲಾಠಿಚಾರ್ಜ್ ನಡೆಸಿ ಅವರನ್ನು ಬಂಧಿಸಿರುವ ಸರ್ಕಾರದ ಕ್ರಮವನ್ನು ಉದ್ಯೋಗಾಕಾಂಕ್ಷಿಗಳ ಹೋರಾಟ ಸಮಿತಿಯು ಅತ್ಯಂತ ತೀವ್ರವಾಗಿ ಖಂಡಿಸುತ್ತದೆ. ಕೂಡಲೇ ಬಂಧಿಸಿರುವ ಎಲ್ಲರನ್ನೂ ಬಿಡುಗಡೆಗೊಳಿಸಲು ಆಗ್ರಹಿಸುತ್ತದೆ ಎಂದರು.

ಪ್ರತಿಭಟನೆ ನಡೆಸಲು ಅನುಮತಿ ಪಡೆದಿಲ್ಲ ಎನ್ನುವುದನ್ನು ಮುಂದಿಟ್ಟುಕೊಂಡು ಪ್ರತಿಭಟನೆಯನ್ನು ಧಮನಗೊಳಿಸಲು ಪೊಲೀಸರ ಮೂಲಕ ಸರ್ಕಾರ ಪ್ರಯತ್ನಿಸಿದೆ.

ಡಿ.1 ರಂದು ಬೆಳಿಗ್ಗೆ 10ರಿಂದ ಧಾರವಾಡದ ಶ್ರೀನಗರದಿಂದ ಜಿಲ್ಲಾಧಿಕಾರಿಗಳ ಕಚೇರಿಗೆ ಬೃಹತ್ ಮೆರವಣಿಗೆ ಹೊರಟು ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಗುವುದು ಎಂದು ಈ ಮೊದಲೇ ಪೊಲೀಸರಿಗೆ ಮನವಿ ಪತ್ರವನ್ನು ಕೊಟ್ಟಾಗಿಯೂ ಹೋರಾಟವನ್ನು ತಡೆಯಲು ಎಲ್ಲ ರೀತಿಯ ಕ್ರಮಗಳನ್ನು ಅನುಸರಿಸಲಾಗಿದೆ. ಉದ್ಯೋಗ ಆಕಾಂಕ್ಷಿಗಳು ಪ್ರತಿಭಟನೆಗೆ ಬಂದರೆ ಕೇಸ್ ಹಾಕುವ ಬೆದರಿಕೆಯನ್ನು ಹಾಕಲಾಗಿದೆ.

ಈ ಕೂಡಲೇ ಬಂಧಿಸಿರುವ ಉದ್ಯೋಗಾಕಾಂಕ್ಷಿಗಳ ಹೋರಾಟ ಸಮಿತಿಯ ರಾಜ್ಯ ಸಂಚಾಲಕ ಸಿದ್ದಲಿಂಗ ಬಾಗೇವಾಡಿ, ಸಹ ಸಂಚಾಲಕ ಭವಾನಿ ಶಂಕರ್ ಗೌಡ, ಜನಸಾಮಾನ್ಯರ ವೇದಿಕೆಯ ಮುಖಂಡ ಯಲ್ಲಪ್ಪ ಹೆಗಡೆ ಮುಂತಾದ 25ಕ್ಕೂ ಹೆಚ್ಚು ಉದ್ಯೋಗ ಆಕಾಂಕ್ಷಿ ಪ್ರತಿಭಟಕಾರರನ್ನು ಕೂಡಲೇ ಬೇಷರತ್ತಾಗಿ ಬಿಡುಗಡೆ ಮಾಡಬೇಕು ಹಾಗೂ ಎಲ್ಲಾ ಖಾಲಿ ಹುದ್ದೆಗಳನ್ನು ಕೂಡಲೇ ಭರ್ತಿ ಮಾಡಲು ಸರ್ಕಾರ ಕ್ರಮವಹಿಸಬೇಕೆಂದು ಆಗ್ರಹಿಸಿದರು.

## ದತ್ತ ಜಯಂತಿ ಪ್ರಯಾಣಕ್ಕೆ ಲಘು ವಾಹನಗಳಲ್ಲಿ ಸಂಚರಿಸುವಂತೆ ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ ಮನವಿ



**ಚಿಕ್ಕಬಳ್ಳಾಪುರ:** ಡಿಸೆಂಬರ್ 2 ರಿಂದ 4 ರವರೆಗೆ ಚಿಕ್ಕಮಂಗಳೂರು ನಗರ ಹಾಗೂ ಶ್ರೀ ಗುರು ದತ್ತಾತ್ರೇಯ ಬಾಬಾಬುಡನ್ ಸ್ವಾಮಿ ದರ್ಗಾ, ಐ.ಡಿ. ಪೀಠ ಹಾಗೂ ಜಿಲ್ಲೆಯ ಇತರೆ ಭಾಗಗಳಲ್ಲಿ ದತ್ತಜಯಂತಿ ಕಾರ್ಯಕ್ರಮವು ನಡೆಯಲಿರುತ್ತದೆ. ಈ ಕಾರ್ಯಕ್ರಮದಲ್ಲಿ ಸಹಸ್ರಾರು ಸಂಖ್ಯೆಯಲ್ಲಿ ಭಕ್ತಾದಿಗಳು, ಮಠಾಧೀಶರು ಹಾಗೂ ಸಾರ್ವಜನಿಕರು ಸೇರುವ ಸಾಧ್ಯತೆಯಿದ್ದು, ಸದರಿಯವರು ಹೆಚ್ಚಿನ ಸಂಖ್ಯೆಯಲ್ಲಿ ವಾಹನಗಳಲ್ಲಿ ಆಗಮಿಸುವುದಾಗಿ ಮಾಹಿತಿ ಇರುತ್ತದೆ. ಶ್ರೀ ಗುರು ದತ್ತಾತ್ರೇಯ ಬಾಬಾಬುಡನ್ ಸ್ವಾಮಿ ದರ್ಗಾ, ಐ.ಡಿ.ಪೀಠಕ್ಕೆ ಹೋಗುವ ಮಾರ್ಗವು ಹೆಚ್ಚಿನ ತಿರುವುಗಳಿಂದ ಕೂಡಿದ್ದು, ಸದರಿ ಮಾರ್ಗದಲ್ಲಿ ಭಾರೀ ವಾಹನಗಳನ್ನು ಸಂಚರಿಸುವುದು ಕಷ್ಟಸಾಧ್ಯವಾಗಿರುತ್ತದೆ. ಅಲ್ಲದೆ ಹಿಂದಿನ ವರ್ಷಗಳಲ್ಲಿ ವಿವಿಧ ಜಿಲ್ಲೆಗಳಿಂದ ಹಲವಾರು ಭಕ್ತಾದಿಗಳು, ಸಾರ್ವಜನಿಕರು ಈ ಕಾರ್ಯಕ್ರಮಕ್ಕೆ ಭಾರಿ ವಾಹನಗಳಲ್ಲಿ ಆಗಮಿಸಿದ್ದು, ಇದರಿಂದ ವಾಹನಗಳ ದಟ್ಟಣೆ ಉಂಟಾಗಿ ಸುಗಮ ಸಂಚಾರಕ್ಕೆ ಅಡಚಣೆ ಉಂಟಾಗುತ್ತದೆ. ಈ ಹಿನ್ನೆಲೆಯಲ್ಲಿ ಮುಂಜಾಗ್ರತಾ ಕ್ರಮಕೈಗೊಳ್ಳುವುದು ಅಗತ್ಯವಾಗಿರುವುದರಿಂದ ಹಾಗೂ ಭಕ್ತಾದಿಗಳು ಮತ್ತು ಸಾರ್ವಜನಿಕರ ಸುರಕ್ಷತೆಯ ಹಿತದೃಷ್ಠಿಯಿಂದ ತಮ್ಮ ಜಿಲ್ಲೆಯಿಂದ ದತ್ತಜಯಂತಿ ಕಾರ್ಯಕ್ರಮಕ್ಕೆ ಆಗಮಿಸಲಿರುವ ಭಕ್ತಾದಿಗಳು, ಸಂಘಟಕರು ಹಾಗೂ ಸಾರ್ವಜನಿಕರು ಭಾರಿ ವಾಹನಗಳ ಬದಲಿಗೆ 33 ಖಜಚಿಣಜಡಿ ಒಳಗಿರುವ ಲಘು ವಾಹನಗಳಲ್ಲಿ ಆಗಮಿಸುವಂತೆ ಸಲಹೆ, ಸೂಚನೆಗಳನ್ನು ನೀಡುವಂತೆ ಚಿಕ್ಕಮಂಗಳೂರು ಜಿಲ್ಲಾಧಿಕಾರಿಗಳು ಕೋರಿರತ್ತಾರೆ. ಆದ್ದರಿಂದ ಚಿಕ್ಕಬಳ್ಳಾಪುರ ಜಿಲ್ಲೆಯಿಂದ ದತ್ತಜಯಂತಿ ಕಾರ್ಯಕ್ರಮಕ್ಕೆ ಹೋಗುತ್ತಿರುವ ಭಕ್ತಾದಿಗಳು, ಸಂಘಟಕರು ಹಾಗೂ ಸಾರ್ವಜನಿಕರು ಭಾರಿ ವಾಹನಗಳ ಬದಲಿಗೆ 33 ಖಜಚಿಣಜಡಿ ಒಳಗಿರುವ ಲಘು ವಾಹನಗಳಲ್ಲಿ ಸಂಚರಿಸುವಂತೆ ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಏಡ್ಸ್ ಕುರಿತು ಯುವ ಸಮೂಹಕ್ಕೆ ಹೆಚ್ಚಿನ ಜಾಗೃತಿ ಅಗತ್ಯ



**ಹಾವೇರಿ:** ಏಡ್ಸ್ ತಡೆಗಟ್ಟಲು ಅನುಸರಿಸಬೇಕಾದ ಸುರಕ್ಷಿತ ಕ್ರಮಗಳ ಕುರಿತು ಯುವ ಸಮೂಹಕ್ಕೆ ಜಾಗೃತಿ ಮೂಡಿಸುವುದು ಅಗತ್ಯವಾಗಿದೆ. ಪ್ರತಿಯೊಬ್ಬರಿಗೂ ತಮ್ಮ ಆರೋಗ್ಯದ ಬಗ್ಗೆ ಕಾಳಜಿ ಇರಬೇಕು ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಬಿರಾದಾರ ದೇವಿಂದ್ರಪ್ಪಾ ಎನ್. ಅವರು ಹೇಳಿದರು.

ಹಾವೇರಿ ನಗರದ ಜಿಲ್ಲಾ ಆರೋಗ್ಯ ಭವನದಲ್ಲಿ ಸೋಮವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ನ್ಯಾಯಾಂಗ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ನ್ಯಾಯವಾದಿಗಳ ಸಂಘ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಜಿಲ್ಲಾ ಏಡ್ಸ್ ಪ್ರತಿಬಂಧಕ ಮತ್ತು ನಿಯಂತ್ರಣ ಘಟಕ, ಭಾರತೀಯ ರೆಡ್ ಕ್ರಾಸ್ ಸಂಸ್ಥೆ, ಸ್ಪಂದನಾ ಐಟಿ, ಸಂಜೀವಿನಿ ಐಟಿ ಮತ್ತು ರಕ್ಷಿತಾ ನೆಟ್‌ವರ್ಕ್ ಹಾಗೂ ಜಿಲ್ಲೆಯ ಪದವಿ ಮತ್ತು ವೃತ್ತಿಪರ ಕಾಲೇಜುಗಳ ಎನ್.ಎಸ್.ಎಸ್. ರೆಡ್ ರಿಬ್ಬನ್ ಕ್ಲಬ್‌ಗಳು ಮತ್ತು ಜಿಲ್ಲೆಯ ಸರ್ಕಾರಿ ಹಾಗೂ ಸರ್ಕಾರೇತರ ಸಂಘ-ಸಂಸ್ಥೆಗಳ ಸಹಯೋಗದಲ್ಲಿ ಜರುಗಿದ ವಿಶ್ವ ಏಡ್ಸ್ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಏಡ್ಸ್ ರೋಗದ ತಾಯಿಯ ಎದೆಹಾಲಿನಿಂದ, ರಕ್ತ ಹಾಗೂ ಲೈಂಗಿಕ ಸಂಪರ್ಕದಿಂದ ಏಡ್ಸ್ ಹರಡುತ್ತದೆ. ಈಗ ರಕ್ತವನ್ನು ಪರೀಕ್ಷಿಸಿ ನೀಡಲಾಗುತ್ತದೆ, ರಕ್ತದಿಂದ ಬರುವ ಸಾಧ್ಯತೆ ಬಹಳ ಕಡಿಮೆ ಇದೆ. ಹಾಗಾಗಿ ಹೆಚ್ಚಿನ ಜನರೊಂದಿಗೆ ಲೈಂಗಿಕ ಸಂಪರ್ಕ ಇಟ್ಟುಕೊಳ್ಳಬಾರದು. ಈ ವಿಷಯಗಳ ಬಗ್ಗೆ ಹೆಚ್ಚಿನ ಜಾಗೃತಿ ಮೂಡಿಸಬೇಕು. 80ರ ದಶಕದಲ್ಲಿ ಏಡ್ಸ್ ಕಾಣಿಸಿಕೊಂಡಿತು, ಆಗ ಏಡ್ಸ್ ಎಂದರೇನು, ಎಚ್‌ಐವಿ ಎಂದರೇನು ಎಂದು ಅರಿವು ಇರಲಿಲ್ಲ. ಈಗ ಏಡ್ಸ್ ರೋಗದ ಬಗ್ಗೆ ಆರೋಗ್ಯ ಇಲಾಖೆಯಿಂದ ಅರಿವು ಮೂಡಿಸಲಾಗುತ್ತಿದೆ. ಎಚ್‌ಐವಿ ಸೋಂಕಿತರಿಗೆ ಆತ್ಮಸ್ಥೈರ್ಯ ತುಂಬಲು ಇಂತಹ ಕಾರ್ಯಕ್ರಮಗಳು ಸಹಕಾರಿಯಾಗಿದೆ ಎಂದರು.

"ಎಚ್ ಐ ವಿ / ಏಡ್ಸ್ ಹರಡುವಿಕೆಯನ್ನು ನಿಯಂತ್ರಿಸಲು ಇರುವ ಅಡೆತಡೆಗಳನ್ನು ಕೊನೆಗಾಣಿಸೋಣ" ಎಂಬುದು ಈ ವರ್ಷದ ಘೋಷವಾಕ್ಯವಾಗಿದೆ. 2030ರ ವೇಳೆಗೆ "ಏಡ್ಸ್‌ನ್ನು ಕೊನೆಗಾಣಿಸಲು" ವಿಶ್ವ ಆರೋಗ್ಯ ಸಂಸ್ಥೆಯು ಭಾರತ ದೇಶದೊಂದಿಗೆ ಹಲವಾರು ರೂಪರೇಷೆಗಳನ್ನು ತಯಾರಿಸಿಕೊಂಡಿದೆ. ಏಡ್ಸ್ ಪ್ರಕರಣಗಳು ಇಳಿಮುಖವಾದರೂ ಸಹ ಯುವ ಸಮೂಹದಲ್ಲಿ ಏಡ್ಸ್ ರೋಗ ಪತ್ತೆಯಾಗುತ್ತಿರುವುದು ಕಳವಳಕಾರಿ ಸಂಗತಿಯಾಗಿದೆ ಎಂದರು.

**ಸನ್ಮಾನ:** ಇದೇ ಸಂದರ್ಭದಲ್ಲಿ ಜಿಲ್ಲೆಯಲ್ಲಿ ಎಚ್.ಐ.ವಿ/ಏಡ್ಸ್ ತಡೆಗಟ್ಟುವಿಕೆಯಲ್ಲಿ ವಿವಿಧ ವಿಭಾಗಗಳಲ್ಲಿ ಉತ್ತಮ ಸಾಧನೆ ಮಾಡಿದವರನ್ನು ಸನ್ಮಾನಿಸಲಾಯಿತು.

ಜಿಲ್ಲೆಯಲ್ಲಿ ಹೆಚ್ಚು ಪಾಸಿಟಿವ್ ಹೆರಿಗೆ ಮತ್ತು ಮಕ್ಕಳ ಶಸ್ತ್ರಚಿಕಿತ್ಸೆ ಮಾಡಿಸಿದ ಡಾ.ಬಸವರಾಜ ಓಲೇಕಾರ, ರಕ್ತನಿಧಿ ಕೇಂದ್ರದ ಕಿರಣಕುಮಾರ ಲಕ್ಕಣ್ಣನವರ, ಎ,ಆರ್.ಟಿ. ಕೇಂದ್ರದ ಶ್ರೀಮತಿ ವೈಜಶ್ರೀ ಹಿರೇಮಠ, ಉತ್ತಮ ಎಇಸಿ ರಾಮಗೌಡ ರಾಮನಗೌಡ್ರ, ಉತ್ತಮ ಪ್ಲಾಶ್ ಮಾಬ್ಸ್ ಹಿರೇಕೆರೂರು ಬಿ.ಆರ್.ತಂಬಾಕದ ಪದವಿ ಕಾಲೇಜು, ಉತ್ತಮ ಆರ್.ಆರ್.ಸಿ.ಕಾಲೇಜು, ಜಿಲ್ಲಾ ಮಹಿಳಾ ಮತ್ತು ಮಕ್ಕಳ ಆಸ್ಪತ್ರೆ ಉತ್ತಮ ಐಸಿಟಿಸಿ, ಎಚ್.ಐ.ವಿ.ನಿಯಂತ್ರಣದಲ್ಲಿ ಉತ್ತಮ ಸೇವೆ ಸಲ್ಲಿಸಿದ್ದಕ್ಕಾಗಿ ಸ್ಪಂದನಾ ಮಹಿಳಾ ಒಕ್ಕೂಟ, ಸಂಜೀವಿನಿ ಎಂ.ಎಸ್. ಎಂ. ಹಾಗೂ ರಕ್ಷಿತಾ ಪಾಸಿಟಿವ್ ಪೀಪಲ್ ನೆಟ್‌ವರ್ಕ್ ಪ್ರತಿನಿಧಿಗಳನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಸದಸ್ಯ ಕಾರ್ಯದರ್ಶಿಗಳಾದ ಶ್ರೀಮತಿ ಶ್ರೀಶೈಲಜಾ, ಹಾವೇರಿ ವೈದ್ಯಕೀಯ ವಿಜ್ಞಾನ ಸಂಸ್ಥೆಯ ಡಾ.ಆಶಾಕಿರಣ, ತಾಲೂಕಾ ಆರೋಗ್ಯಾಧಿಕಾರಿ ಡಾ.ಪ್ರಭಾಕರ ಕುಂದೂರ, ಡಾ,ಬಸವರಾಜ ಓಲೇಕಾರ, ರಕ್ತ ಸಂಗ್ರಹಣಾ ಕೇಂದ್ರದ ಡಾ.ಬಸವರಾಜ ತಳವಾರ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಉಮೇಶ ಕರಮುಡಿ ಇತರರು ಉಪಸ್ಥಿತರಿದ್ದರು. ಸುಧಾಕರ ದೈವಜ್ಞ ಸ್ವಾಗತಿಸಿದರು.

## ಬ್ಯಾಂಕುಗಳ ಖಾಸಗೀಕರಣ, ರೈತ, ಕಾರ್ಮಿಕರ ಸಾಲ ಮನ್ನಕ್ಕೆ ಆಗ್ರಹ, ಪ್ರತಿಭಟನೆ




**ದಾವಣಗೆರೆ:** ರಾಷ್ಟ್ರೀಯ ಬ್ಯಾಂಕ್‌ಗಳ ಖಾಸಗೀಕರಣ ಮತ್ತು ರೈತ, ಕಾರ್ಮಿಕರ ಸಾಲ ಮನ್ನಾಕ್ಕಾಗಿ ಸಂಯುಕ್ತ ಹೋರಾಟ ಕರ್ನಾಟಕ ಮತ್ತು ಜೆಸಿಟಿಯು ಜಂಟಿಯಾಗಿ ಕರೆ ನೀಡಿರುವ ಬೆಂಗಳೂರು ಚಲೋ ಕಾರ್ಯಕ್ರಮದ ಹಿನ್ನೆಲೆಯಲ್ಲಿ ನಗರದಲ್ಲೂ ಎಸ್‌ಕೆಎಂ ನಗರದ ಮಂಡಿಪೇಟೆಯಲ್ಲಿರುವ ಎಸ್‌ಬಿಐ ಬ್ಯಾಂಕ್ ಮುಂದೆ ಪ್ರತಿಭಟನೆ ನಡೆಸಿತು.

ಈ ವೇಳೆ ಮಾತನಾಡಿದ ಕಾರ್ಮಿಕ ಮುಖಂಡ ಹೆಚ್.ಜಿ.ಉಮೇಶ್ ಆವರಗೆರೆ, ಬ್ಯಾಂಕ್ ಖಾಸಗೀಕರಣವು ದೇಶದ ಹಿತಾಸಕ್ತಿಗೆ ಮಾರಕವಾಗಲಿದೆ. ಆದ್ದರಿಂದ ಈಗಿರುವ ರಾಷ್ಟ್ರೀಕೃತ ಬ್ಯಾಂಕುಗಳನ್ನು ಸಬಲಗೊಳಿಸುವುದರ ಜೊತೆಗೆ ಎಲ್ಲಾ ಖಾಸಗೀ ಬ್ಯಾಂಕುಗಳನ್ನು ರಾಷ್ಟ್ರೀಕರಣಗೊಳಿಸುವ ಮೂಲಕ ಅವುಗಳನ್ನು ಸರಕಾರ ತನ್ನ ಅಧೀನಕ್ಕೆ ತೆಗೆದುಕೊಳ್ಳಬೇಕು. ರಾಷ್ಟ್ರೀಕೃತ ಬ್ಯಾಂಕಿಂಗ್ ವ್ಯವಸ್ಥೆಯ ಮೂಲಕ ಬ್ಯಾಂಕ್ ಸೇವೆಯು ದೇಶದ ಮೂಲೆ ಮೂಲೆಗೆ ತಲುಪಿಸಬೇಕು ಎಂದು ಆಗ್ರಹಿಸಿದರು.

ದೇಶದ ಅರ್ಥ ವ್ಯವಸ್ಥೆಯ ಜೀವ ನಾಡಿಗಳಾದ ಸಾರ್ವಜನಿಕ ಬ್ಯಾಂಕುಗಳು ಸರಕಾರದ ಅಧೀನದಲ್ಲೇ ನಡೆಯಬೇಕೇ ಹೊರತು ಖಾಸಗಿಯವರಿಂದ ಅಲ್ಲ. ಬ್ಯಾಂಕ್ ಖಾಸಗೀಕರಣದಿಂದ ಜನಸಾಮಾನ್ಯರ ಲಕ್ಷಾಂತರ ಕೋಟಿ ರೂಪಾಯಿಗಳ ಠೇವಣಿ ಹಣಕ್ಕೆ ಅಪಾಯ ಆಗಲಿದೆ. ಸಾರ್ವಜನಿಕ ಕ್ಷೇತ್ರದ ಬ್ಯಾಂಕುಗಳ ಲಾಭದ ಹಣ ಜನರ ಅಭ್ಯುದಯಕ್ಕೆ ವಿನಿಯೋಗಿಸಬೇಕೇ ಹೊರತು ಬಂಡವಾಳಶಾಹಿಗಳ ಲೂಟಿಗಾಗಿ ಅಲ್ಲ. ಸಾಲ ವಸೂಲಿ ಸಮರ್ಪಕವಾಗಿ ಆಗುವಂತೆ ನೋಡಿಕೊಳ್ಳಲು ಕಠಿಣ ಕಾನೂನು ರೂಪಿಸಬೇಕು ಎಂದು ಒತ್ತಾಯಿಸಿದರು.

ರೈತ ಮುಖಂಡ ಹೊನ್ನೂರು ಮುನಿಯಪ್ಪ, ಉದ್ದೇಶಪೂರ್ವಕವಾಗಿ ಬ್ಯಾಂಕ್ ಸಾಲವನ್ನು ಮರುಪಾವತಿ ಮಾಡದಿರುವ ಖಾಸಗಿ ಬಂಡವಾಳಶಾಹಿಗಳ ಮೇಲೆ ಕ್ರಿಮಿನಲ್ ಮೊಕದ್ದಮೆಯನ್ನು ದಾಖಲಿಸುವುದ ಜೊತೆಗೆ ಅವರ ಆಸ್ತಿಯನ್ನು ಜಪ್ತಿ, ಹರಾಜು ಮಾಡಿ ಸಾಲಕ್ಕೆ ಜಮಾ ಮಾಡಬೇಕು. ಪ್ರಕೃತಿ ವಿಕೋಪದಂತಹ ಸಂದರ್ಭಗಳು ಎದುರಾದಾಗ ರೈತರ ಸಾಲವನ್ನು ಮನ್ನಾ ಮಾಡಿ ಅದನ್ನು ಸರಕಾರವೇ ಭರಿಸಬೇಕು. ರೈತರಿಗೆ, ಬಡಜನರಿಗೆ, ಮಹಿಳೆಯರಿಗೆ, ಕುಶಲಕರ್ಮಿಗಳಿಗೆ, ಬೀದಿ ವ್ಯಾಪಾರಿಗಳಿಗೆ, ವಿದ್ಯಾರ್ಥಿಗಳ ಶಿಕ್ಷಣಕ್ಕೆ ಕನಿಷ್ಠ ಬಡ್ಡಿದರದಲ್ಲಿ ಗರಿಷ್ಠ ಸಾಲ ಸೌಲಭ್ಯ ಒದಗಿಸಬೇಕು. ಸಾಲ ವಸೂಲಾತಿಯ ನೆಪದಲ್ಲಿ ರೈತರ ಮೇಲೆ ನಡೆಯುವ ದೌರ್ಜನ್ಯಕ್ಕೆ ಅಂಕುಶ ಹಾಕಬೇಕು. ರಾಷ್ಟ್ರೀಕೃತ ಬ್ಯಾಂಕುಗಳು ವಿಧಿಸುವ ಬ್ಯಾಂಕ್ ಶುಲ್ಕವನ್ನು ಕಡಿಮೆ ಮಾಡಬೇಕು ಎಂದು ಮನವಿ ಮಾಡಿದರು.ಪ್ರತಿಭಟನೆಯಲ್ಲಿ

ಪಿ.ಪಿ.ಮರುಳಸಿದ್ದಯ್ಯ, ಮಧು ತೊಗಲೇರಿ, ಐರಣಿ ಚಂದ್ರು, ರಮೇಶ್ ಸಿ.ದಾಸರ್, ವಿ.ಲಕ್ಷ್ಮಣ್, ಆವರಗೆರೆ ಚಂದ್ರು, ಸರೋಜಾ, ಅಣಬೇರು ತಿಪ್ಪೇಸ್ವಾಮಿ, ಶಿವಾಜಿರಾವ್, ಡಾ.ಸುನೀತ್‌ಕುಮಾರ್, ಸುರೇಶ್ ಯರಗುಂಟೆ, ಕೆ.ಹಾಲೇಶಿ ಇತರರು ಇದ್ದರು.

## ಕೃಷಿ ಯಂತ್ರೋಪಕರಣಗಳ ಕುರಿತು ಉಚಿತ ತರಬೇತಿ ಕಾರ್ಯಾಗಾರ

**ಚಿತ್ರದುರ್ಗ:** ಬಬ್ಬೂರಿನ ಜಿಲ್ಲಾ ಕೃಷಿ ತರಬೇತಿ ಕೇಂದ್ರ ಹಾಗೂ ಕೃಷಿ ಯಂತ್ರೋಪಕರಣಗಳ ಪರೀಕ್ಷಾ ಮತ್ತು ತರಬೇತಿ ಕೇಂದ್ರ ಸಹಯೋಗದಲ್ಲಿ ಡಿ.4 ರಿಂದ ಡಿ.6 ವರೆಗೆ ವಿವಿಧ ಕೃಷಿ ಯಂತ್ರೋಪಕರಣಗಳ ಪ್ರಾಮುಖ್ಯತೆ, ಉಪಯೋಗ ಮತ್ತು ನಿರ್ವಹಣೆ ಕುರಿತು 3 ದಿನಗಳ ಕಾರ್ಯಾಗಾರ ಹಮ್ಮಿಕೊಳ್ಳಲಾಗಿದೆ.

ತರಬೇತಿ ಮೊದಲ ದಿನ ಕೃಷಿ ವಿಕಾಸ ಯೋಜನೆ ರಾಷ್ಟೀಯ ಸಹ ಸಂಶೋಧನ ನಿರ್ದೇಶಕ ಡಾ ಶರಣಪ್ಪ ಜಂಗಂಡಿ ಕೃಷಿ ಮತ್ತು ತೋಟಗಾರಿಕೆ ಚಟುವಟಿಕೆ ಕೈಗೊಳ್ಳಲು ಬಳಸುವ ವಿವಿಧ ಕೃಷಿ ಯಂತ್ರೋಪಕರಣಗಳ ಪ್ರಾಮುಖ್ಯತೆ, ಉಪಯೋಗ ಕುರಿತು ರೈತರಿಗೆ ಮಾಹಿತಿ ನೀಡುವರು. ತುಮಕೂರಿನ ಜೈನ್ ಇರಿಗೇಷನ್ ಪ್ರೈಲಿ. ಬೇಸಾಯಶಾಸ್ತ್ರಜ್ಞ ದೇವರಾಜ್ ರೈತರಿಗೆ ಸಮರ್ಪಕ ನೀರಿನ ನಿರ್ವಹಣೆಗೆ ಹನಿ ಮತ್ತು ತುಂತುರು ನೀರಾವರಿ ಘಟಕಗಳ ಬಳಕೆ ಮತ್ತು ನಿರ್ವಹಣೆ ಕುರಿತು ಮಾಹಿತಿ ನೀಡುವರು.

ಎರಡನೇ ಚಿತ್ರದುರ್ಗದ ವರ್ಷಾ ಅಸೋಸಿಯೇಟ್ಸ್ ಮತ್ತು ಹಿರಿಯೂರಿನ ಜನತಾ ಟ್ರೇಡರ್ಸ್ ಸಂಸ್ಥೆ ತಾಂತ್ರಿಕ ಸಿಬ್ಬಂದಿ ಟ್ರಾಕ್ಟರ್ ಚಾಲಿತ ಕೃಷಿ ಉಪಕರಣಗಳು, ತ್ಯಾಜ್ಯ ನಿರ್ವಹಣೆಯ ಉಪಕರಣಗಳು, ಕಳೆ ನಿರ್ವಹಣೆ, ಕಟಾವು ಮತ್ತು ಸಸ್ಯ ಸಂರಕ್ಷಣಾ ಉಪಕರಣ ಹಾಗೂ ಡೀಸಲ್ ಪಂಪ್‌ಸೆಟ್ ಉಪಯೋಗಿಸುವ ವಿಧ ಮತ್ತು ನಿರ್ವಹಣೆ ಕುರಿತು ಮಾಹಿತಿ ನೀಡುವರು. ಇಫ್ಕೋ ಸಂಸ್ಥೆಯ ವ್ಯವಸ್ಥಾಪಕ ಚಿದಂಬರಮೂರ್ತಿ ಕೃಷಿಯಲ್ಲಿ ನ್ಯಾನೋ ಗೊಬ್ಬರ ಮತ್ತು ಡ್ರೋಣ್ ಬಳಕೆ ಕುರಿತು ಉಪನ್ಯಾಸ ಮತ್ತು ಪ್ರಾತ್ಯಕ್ಷಿಕೆನೀಡುವರು. ಸೆಲ್ಕೋ ಸಂಸ್ಥೆಯ ವ್ಯವಸ್ಥಾಪಕ ಮಂಜುನಾಥ ಭಾಗವತ್ ಸೋಲಾರ್ ಚಾಲಿತ ಕೃಷಿ ಸಂಸ್ಕರಣಾ ಘಟಕಗಳು, ಸೋಲಾರ್ ಬೇಲಿ ಕುರಿತು ವಿಷಯ ಮಂಡನೆ ಮಾಡುವರು. ಉತ್ತಮ ಪಂಪ್‌ಸೆಟ್ ಆಯ್ಕೆ ಮತ್ತು ಅವುಗಳ ನಿರ್ವಹಣೆ ಹಾಗೂ ಕೃಷಿಯಲ್ಲಿ ಕಣ್ಗಾವಲಿಗೆ ಸಿಸಿ ಕ್ಯಾಮಾರ ಬಳಕೆ ಕುರಿತು ಸಹ ರೈತರಿಗೆ ಮಾಹಿತಿ ನೀಡಲಾಗುವುದು.

## ವಿಕಲಚೇತನ ದಿನಾಚರಣೆ


**ಶಿವಮೊಗ್ಗ:** ಜಿಲ್ಲಾ ಸಮಗ್ರ ಶಿಕ್ಷಣ ಅಭಿಯಾನ ಯೋಜನೆಯಡಿ 2025-26 ನೇ ಸಾಲಿನಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ ಹಾಗೂ ಕ್ಷೇತ್ರ ಸಂಪನ್ಮೂಲ ಕೇಂದ್ರ ಶಿವಮೊಗ್ಗ ಇವರ ಸಂಯುಕ್ತಾಶ್ರಯದಲ್ಲಿ ಡಿ.03 ರಂದು ಬೆಳಗ್ಗೆ 9.30 ರಿಂದ ನಗರದ ಬಿ.ಹೆಚ್.ರಸ್ತೆಯ (ಮೀನಾಕ್ಷಿ ಭವನ ಹತ್ತಿರ) ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ವಿಶ್ವ ವಿಕಲಚೇತನರ ದಿನಾಚರಣೆಯನ್ನು "ಅನುಕಂಪ ಬೇಡಿ ಅವಕಾಶ ಕೊಡಿ" ಎಂಬ ಘೋಷವಾಕ್ಯದೊಂದಿಗೆ ಹಮ್ಮಿಕೊಳ್ಳಲಾಗಿದೆ.ಈ ಕಾರ್ಯಕ್ರಮದಲ್ಲಿ 1 ರಿಂದ 12ನೇ ತರಗತಿಯಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಸರ್ಕಾರಿ /ಅನುದಾನಿತ/ ಅನುದಾನ ರಹಿತ ಶಾಲೆಗಳ ವಿಕಲಚೇತನ ಮಕ್ಕಳು ಭಾಗವಹಿಸುವಂತೆ ಹಾಗೂ ಈ ಕಾರ್ಯಕ್ರಮದಲ್ಲಿ ಸಿಡಬ್ಲ್ಯೂಎಸ್‌ಎನ್ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಸ್ಪರ್ಧೆ ಏರ್ಪಡಿಸಲಾಗಿದ್ದು, ವಿಜೇತರಿಗೆ ಬಹುಮಾನ ನೀಡಲಾಗುವುದು ಎಂದು ಶಿವಮೊಗ್ಗ ತಾಲೂಕು ಬಿ.ಇ.ಓ ರಮೇಶ್ ಮತ್ತು ಸಮನ್ವಯಾಧಿಕಾರಿ ಶಿವಪ್ಪ ಸಂಗಣ್ಣನವರ್ ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ಆಹಾರಕ್ಕಾಗಿ ಬಂದ ಯುವಕನಿಗೆ ಗುಂಡೇಟು: ಸಾವು

ನವದೆಹಲಿ (ಪಿಟಿಐ): ಆಹ್ವಾನವಿಲ್ಲದಿದ್ದರೂ ಆಹಾರಕ್ಕಾಗಿ ವಿವಾಹ ಸಮಾರಂಭಕ್ಕೆ ಬಂದ 17 ವರ್ಷದ ಕೊಳೆಗೇರಿ ಯುವಕನನ್ನು ದೆಹಲಿಯ ಶಾಹದರಾದಲ್ಲಿ ಕೈಗಾರಿಕಾ ಭದ್ರತಾ ಪಡೆಯ (ಸಿಐಎಸ್‌ಎಫ್) ಹೆಡ್ ಕಾನ್‌ಸ್ಟೆಬಲ್ ಗುಂಡಿಕ್ಕಿ ಕೊಂದಿದ್ದಾರೆ. ಮಾನಸ ಸರೋವರ ಪಾರ್ಕ್ ಡಿಡಿಎ ಮಾರುಕಟ್ಟೆ ಸಮುದಾಯ ಕೇಂದ್ರದ ಬಳಿ ಶನಿವಾರ ಸಂಜೆ ನಡೆದ ವಿವಾಹ ಸಮಾರಂಭದಲ್ಲಿ ಈ ದುರ್ಘಟನೆ ಸಂಭವಿಸಿದೆ ಎಂದು ಪೊಲೀಸರು ಭಾನುವಾರ ತಿಳಿಸಿದ್ದಾರೆ.'ನ್ಯೂ ಮಾಡರ್ನ್ ಶಾಹದರಾ ನಿವಾಸಿಯಾದ ಯುವಕನಿಗೆ ಮದುವೆ ಸಮಾರಂಭದಲ್ಲಿ ಗುಂಡೇಟು ಬಿದ್ದಿದ್ದು, ಚಿಕಿತ್ಸೆಗಾಗಿಆತನನ್ನು ಆಸ್ಪತ್ರೆಗೆ ದಾಖಲಿಸಿದಾಗ. ಯುವಕ ಮೃತಪಟ್ಟಿರುವು-ದಾಗಿ ವೈದ್ಯರು ತಿಳಿಸಿದ್ದಾರೆ' ಎಂದು ಡಿಸಿಪಿ ಪ್ರಶಾಂತ್ ಗೌತಮ್ ಹೇಳಿದ್ದಾರೆ. 'ಆರೋಪಿಯನ್ನು ಉತ್ತರ ಪ್ರದೇಶದ ಕಾನ್ಪುರದ ಸಿಐಎಸ್‌ಎಫ್‌ನ ಹೆಡ್‌ಕಾನ್‌ಸ್ಟೆಬಲ್ ಎಂದು ಗುರುತಿಸಲಾಗಿದ್ದು, ಆತನನ್ನು ಬಂಧಿಸಲಾಗಿದೆ' ಎಂದಿದ್ದಾರೆ.

'ಮದುವೆ ನಡೆಯುತ್ತಿರುವುದನ್ನು ಗಮನಿಸಿದ ಯುವಕ, ಅಹಾರಕ್ಕಾಗಿ ಅಲ್ಲಿಗೆ ಬಂದಿದ್ದಾನೆ ಎಂದು ನಾವು ಭಾವಿಸಿದ್ದೇವೆ. ಆತ ಗೋಡೆ ಹಾರಿ ಬರುತ್ತಿದ್ದಂತೆ ಸ್ಥಳದಲ್ಲಿದ್ದವರು ತಡೆದರು. ಆಗ ಹೆಡ್ ಕಾನ್‌ಸ್ಟೆಬಲ್ ಕೋಪದಿಂದ ಗುಂಡು ಹಾರಿಸಿದ್ದಾರೆ' ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

## ತಿಂಗಳ ಅಂಗಳದಲ್ಲಿ ಸಂಭ್ರಮದ ರಾಜ್ಯೋತ್ಸವ



**ದಾವಣಗೆರೆ:** ತಿಂಗಳ ಅಂಗಳ ಸಾಹಿತ್ಯ - ಸಾಂಸ್ಕೃತಿಕ ಬಳಗ ಹಾಗೂ ದಾವಣಗೆರೆ ವಿ ಒನ್ ಕಾವ್ಯಧಾರೆಯ ಸಂಯುಕ್ತಾಶ್ರಯದಲ್ಲಿ ದಿನಾಂಕ : 30.11.2025 ರ ಭಾನುವಾರ ಬೆಳಿಗ್ಗೆ 11 ಗಂಟೆಗೆ ತಿಂಗಳ ಅಂಗಳ ಬಳಗದ ಕ್ರಿಯಾಶೀಲ ಸದಸ್ಯರು, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಕವಿ ಉಮೇಶ್ ತಾಳಿಕಟ್ಟೆ ಅವರ ದಾವಣಗೆರೆ ಸರಸ್ವತಿ ನಗರದ ಬೀರೇಶ್ವರ ಬಡಾವಣೆಯ " ಪ್ರತೀಕ್ಷ " ನಿಲಯದಲ್ಲಿ ಬಹು ಸಂಭ್ರಮದಿಂದ ಆಚರಿಸಲಾದ 70 ನೇ ಕರ್ನಾಟಕ ರಾಜ್ಯೋತ್ಸವ ಕಾರ್ಯಕ್ರಮವನ್ನು ದಾವಣಗೆರೆ ಜಿಲ್ಲಾ ಪಂಚಾಯತ್ ಡೆಪ್ಯುಟಿ ಸೆಕ್ರೆಟರಿ ಶ್ರೀಮತಿ ಮಮತಾ ಹೆಣಟಿಜಜಜಿಟಿಜಜಸಗೌಡರ್ ಪಾಟೀಲ್ ಸಸಿಗೆ ನೀರು ಎರೆಯುವ ಮೂಲಕ ಕಾರ್ಯಕ್ರಮ ಉದ್ಘಾಟಿಸಿದರು.

ಕೆಜಿಐಡಿ ಅಧಿಕಾರಿ ಕೊಟ್ರೇಶ್, ನಾಗನೂರು ಪ್ರೌಢಶಾಲೆ ಮುಖ್ಯೋಪಾಧ್ಯಾಯ ಸೋಮಶೇಖರಪ್ಪ, ಬನ್ನಿ ಮಹಾಕಾಳಿ ಸೇವಾ ಸಂಘದ ಅಧ್ಯಕ್ಷರಾದ ಶ್ರೀಮತಿ ಮಂಗಳಮ್ಮ, ಕಾರ್ಯಕ್ರಮ ಸಂಚಾಲಕ ಗಂಗಾಧರ ಬಿ ಎಲ್ ನಿಟ್ಟೂರ್, ಕಾವ್ಯಧಾರೆ ನಿರ್ದೇಶಕರು ಮಾಲ್ವಿ ಚಿದಾನಂದ್, ಕನಕ ನೌಕರರ ಬಳಗದ ಜಿಲ್ಲಾಧ್ಯಕ್ಷ ಶಿವಾನಂದ ದಳವಾಯಿ, ಹಾಲೇಕಲ್ ಎಸ್ ಟಿ ಅರವಿಂದ್, ಅಂಚೆ ಇಲಾಖೆ ಅಧಿಕಾರಿ ಮಹೇಶ್, ಶಿಕ್ಷಕ ಮಾಲ್ತೇಶ್ ಬಾ ಬಜ್ಜಿ, ಶಿಕ್ಷಕಿ ಶ್ರೀಮತಿ ನಿಂಗಮ್ಮ , ಎಸ್. ಲಕ್ಷ್ಮಣಪ್ಪ , ಜಿ ಹಳ್ಳಿ, ಶ್ರೀಮತಿ ರಾಧಾ, ಶ್ರೀಮತಿ ಪುಷ್ಪ ಮಜ್ಜಿಗೆ ವೇದಿಕೆಯಲ್ಲಿದ್ದರು.

ಜಿ ಕುಲಕರ್ಣಿ, ಮಲ್ಲಮ್ಮ ನಾಗರಾಜ್, ಸಂಧ್ಯಾ ಸುರೇಶ್, ಅನ್ನಪೂರ್ಣ ಪಾಟೀಲ್, ಸುನೀತಾ ಪ್ರಕಾಶ್, ಉಮಾದೇವಿ ಹಿರೇಮಠ, ರಾಜೇಂದ್ರ ಪ್ರಸಾದ್ ನೀಲಗುಂದ, ಕರಿಬಸಪ್ಪ, ವೀರೇಶ್, ಶಿವಮೂರ್ತಿ, ರೂಪಕಲಾ, ಸಾವಿತ್ರಿ, ವೀರಮ್ಮ, ಬೂದಿಹಾಳ್ ಜಗದೀಶ, ತಿಂಗಳ ಅಂಗಳ ಬಳಗದ ಸದಸ್ಯರು ಹಾಗೂ ಆಹ್ವಾನಿತರಿಂದ ಕನ್ನಡ ನಾಡು - ನುಡಿ - ವೈಭವ - ಕಲೆ - ವಾಸ್ತುಶಿಲ್ಪ - ಪರಂಪರೆ ಇತ್ಯಾದಿ ಸಾರುವ ಕವನ ವಾಚನ, ಕವಿ - ಕಾವ್ಯ ಪರಿಚಯ , ಕನ್ನಡ ಗಾದೆ ಮಾತು, ಒಗಟು, ಒಡಪು, ನುಡಿಗಟ್ಟು , ಗಜಲ್ , ಚುಟುಕು ಅಥವಾ ಹಾಯ್ಕುಗಳು, ಕೀರ್ತನೆ , ತತ್ವಪದ, ಭಾವಗೀತೆ, ಜಾನಪದ, ಲಾವಣಿ, ಗೀಗಿ ಪದ , ವಚನ ಗಾಯನ ನಡೆಯಿತು . ಅಂತೆಯೇ ಕನ್ನಡ ರಸಪ್ರಶ್ನೆ ಕೇಳಿ ಸರಿ ಉತ್ತರ ಹೇಳಿದವರಿಗೆ ಪ್ರೋತ್ಸಾಹದಾಯಕ ಬಹುಮಾನ ನೀಡಲಾಯಿತು .

# ಹೊನ್ನೆಮರದಹಳ್ಳಿಯಲ್ಲಿ ಕಾನೂನು ಅರಿವು ಮತ್ತು ನೆರವು ಶಿಬಿರ

**ದಾವಣಗೆರೆ:** ದಾವಣಗೆರೆ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ತಾಲೂಕು ಕಾನೂನು ಸೇವಾ ಸಮಿತಿ ಚನ್ನಗಿರಿ, ತಾಲೂಕು ಆಡಳಿತ ಚನ್ನಗಿರಿ, ತಾಲೂಕು ವಕೀಲರ ಸಂಘ ಚನ್ನಗಿರಿ ಹಾಗೂ ಹೊನ್ನೆಮರದಹಳ್ಳಿ ಗ್ರಾಮಸ್ಥರ ಸಂಯುಕ್ತಾಶ್ರಯದಲ್ಲಿ ಡಿ.14 ರಂದು ಬೆಳಿಗ್ಗೆ 10 ಗಂಟೆಗೆ ಹೊನ್ನೆಮರದಹಳ್ಳಿಯ ಸರ್ಕಾರಿ ಶಾಲೆಯ ಆವರಣದಲ್ಲಿ ಕಾನೂನು ಅರಿವು ಮತ್ತು ನೆರವು ಶಿಬಿರ ಆಯೋಜಿಸಲಾಗಿದೆ ಎಂದು ಹೊನ್ನೆಮರದಹಳ್ಳಿ ಗ್ರಾಮಸ್ಥರು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಗ್ರಾಮದ ಮುಖ್ಯಸ್ಥ ಬಿ.ಆರ್.ರಘು ಮಾತನಾಡಿ, ಸಾರ್ವಜನಿಕರಿಗೆ ಕಾನೂನು ಜಾಗೃತಿ ವೃದ್ಧಿ, ಹಕ್ಕುಗಳು ಮತ್ತು ಕರ್ತವ್ಯಗಳ ಕುರಿತು ಸ್ಪಷ್ಟತೆ ಒದಗಿಸುವುದು ಈ ಕಾರ್ಯಕ್ರಮ ಪ್ರಮುಖ ಉದ್ದೇಶವಾಗಿದೆ. ನಾಗರಿಕರು ತಮ್ಮ ಪ್ರಶ್ನೆಗಳಿಗೆ ಸಂಬಂಧಪಟ್ಟ ಇಲಾಖೆಯ ತಜ್ಞರಿಂದ ಸ್ಪಷ್ಟ ಮಾಹಿತಿ ಮತ್ತು ಮಾರ್ಗದರ್ಶನ ಪಡೆಯಬಹುದಾಗಿದೆ ಎಂದರು.

ಮಹಿಳೆಯರ ಹಕ್ಕುಗಳು ಮತ್ತು ರಕ್ಷಣಾ ಕಾನೂನು ಫೋಕ್ಸೋ ಕಾಯ್ದೆ ಮತ್ತು ಮಕ್ಕಳ ರಕ್ಷಣಾ ಕ್ರಮಗಳು, ಮಾದಕ ದ್ರವ್ಯಗಳು ಹಾಗೂ ಅವುಗಳ ನಿಯಂತ್ರಣ ಕಾನೂನು, ಇಸ್ಪೀಟ್/ಓಸಿ ಸಂಬಂಧಿತ ಕಾನೂನು ಕ್ರಮಗಳು, ರಾಷ್ಟ್ರೀಯ ಪಕ್ಷಿಗಳ ರಕ್ಷಣಾ ನಿಯಮಗಳು, ಸಾರ್ವಜನಿಕ ಆಸ್ತಿ-ಪಾಸ್ತಿ ರಕ್ಷಣೆ ಮತ್ತು ಜವಾಬ್ದಾರಿಗಳು, ಸಾಮಾನ್ಯ ಕಾನೂನು ಅರಿವು ಮತ್ತು ಸಾರ್ವಜನಿಕರಿಗೆ ಉಪಯುಕ್ತ ಮಾರ್ಗದರ್ಶನ ನೀಡಲಾಗುವುದು ಎಂದರು.

ಕಾರ್ಯಕ್ರಮದಲ್ಲಿ ಭಾಗವಹಿಸಲು ಅಥವಾ ಪ್ರಶ್ನೆಗಳನ್ನು ಕೇಳಲು ಆಸಕ್ತಿ ಇರುವ ನಾಗರಿಕರು ತಮ್ಮ ಹೆಸರು ಮತ್ತು ಸ್ಥಳದ 91138 92628/63624 82764 ಮತ್ತು ನೊಂದಾಯಿಸಿದ ನಾಗರೀಕರಿಗೆ ಮೊದಲ ಆದ್ಯತೆ ನೀಡಲಾಗುವುದು.ಈ ಕಾರ್ಯಕ್ರಮವು ಕೇವಲ ಸಾರ್ವಜನಿಕ ಕಾನೂನು ಅರಿವು ಮೂಡಿಸುವ ವೇದಿಕೆಯಾಗಿದೆ. ಅದಕ್ಕಾಗಿ ಪ್ರಸ್ತುತ ನ್ಯಾಯಾಲಯದಲ್ಲಿ ವಿಚಾರಣೆಯಲ್ಲಿರುವ ದೂರುಗಳು, ಪ್ರಕರಣಗಳು ಅಥವಾ ವೈಯಕ್ತಿಕ ನ್ಯಾಯಾಂಗ ವಿಷಯಗಳ ಕುರಿತು ಚರ್ಚೆಗೆ ಅವಕಾಶ ಇರುವುದಿಲ್ಲ ಎಂದು ತಿಳಿಸಿದರು.

ಈ ಕಾರ್ಯಕ್ರಮಕ್ಕೆ ತರಳಬಾಳು ಜಗದ್ಗುರುಗಳಾದ ಡಾ. ಶ್ರೀ ಶಿವಮೂರ್ತಿ ಶಿವಾಚಾರ್ಯ ಸ್ವಾಮೀಜಿ ಸಿರಿಗೆರೆ, ಡಾ ಶ್ರೀ ಶ್ರೀ ಪಂಡಿತರಾಧ್ಯ ಮಹಾಸ್ವಾಮಿಜಿಗಳು ಸಾಣೆ ಹಳ್ಳಿ ಮತ್ತು ಡಾ. ಶ್ರೀ ಗುರುಬಸವ ಮಹಾಸ್ವಾಮಿಜಿಗಳು ವಿರಕ್ತಮದ ಪಾಂಡುಮಟ್ಟಿ ಹಾಗೂ ಇತರೆ ಗಣ್ಯರು ಹಲವು ಇಲಾಖೆಯ ಅಧಿಕಾರಿಗಳು ಆಗಮಿಸಲಿದ್ದಾರೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಗ್ರಾಮಸ್ಥರಾದ ಎಂ.ಕೆ.ಮಹೇಂದ್ರಪ್ಪ, ಎಲ್.ಎಸ್.ಚಂದ್ರಪ್ಪ, ಹೆಚ್.ಎಸ್.ರವಿ, ಹೆಚ್.ಜಿ.ಉಮಾಪತಿ, ಎಸ್.ಆರ್.ಶಾಂತವೀರಪ್ಪ, ಜಿ.ಎಂ.ಸೋಮಶೇಖರ್ ಇತರರು ಇದ್ದರು.

## ಪ್ರಗತಿ ಪರಿಶೀಲನಾ ಸಭೆ

**ದಾವಣಗೆರೆ :** ಪ್ರಧಾನ ಮಂತ್ರಿಗಳ ಹೊಸ 15 ಅಂಶಗಳ ಕಾರ್ಯಕ್ರಮ ಅನುಷ್ಠಾನದ ಕುರಿತು ಪ್ರಸಕ್ತ ಸಾಲಿನ ಜಿಲ್ಲಾ ಮಟ್ಟದ ಇಲಾಖೆಗಳ ಎರಡನೇ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಯನ್ನು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಡಿಸೆಂಬರ್ 2 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಆಯೋಜಿಸಲಾಗಿದೆ ಎಂದು ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕಾರಿ ತಿಳಿಸಿದ್ದಾರೆ.

## ಎಫ್.ಡಿ.ಐ ಶೇ 18 ರಷ್ಟು ಹೆಚ್ಚಳ

**ನವದೆಹಲಿ (ಪಿಟಿಐ):** ಪ್ರಸಕ್ತ ಆರ್ಥಿಕ ವರ್ಷದ ಏಪ್ರಿಲ್‌ನಿಂದ ಸೆಪ್ಟೆಂಬರ್ ಅವಧಿಯಲ್ಲಿ ದೇಶದಲ್ಲಿನ ವಿದೇಶಿ ನೇರ ಹೂಡಿಕೆ (ಎಫ್‌ಡಿಐ) ಪ್ರಮಾಣ ಶೇ 18ರಷ್ಟು ಹೆಚ್ಚಳವಾಗಿದ್ದು, ರೂ3.15 ಲಕ್ಷ ಕೋಟಿಯಷ್ಟಾಗಿದೆ.ಇದೇ ಅವಧಿಯಲ್ಲಿ ಅಮೆರಿಕದಿಂದ ವಿದೇಶಿ ನೇರ ಹೂಡಿಕೆ ಪ್ರಮಾಣದಲ್ಲಿ ದುಪ್ಪಟ್ಟು ಹೆಚ್ಚಾಗಿದ್ದು, ರೂ 59,283 ಕೋಟಿಯಷ್ಟಾಗಿದೆ.ಕಳೆದ ಆರ್ಥಿಕ ವರ್ಷದ ಇದೇ ಅವಧಿಯಲ್ಲಿ ವಿದೇಶಿ ನೇರ ಹೂಡಿಕೆ ರೂ2.66 ಲಕ್ಷ ಕೋಟಿಯಷ್ಟಾಗಿತ್ತು ಎಂದು ಕೇಂದ್ರ ಸರ್ಕಾರ ಸೋಮವಾರ ತಿಳಿಸಿದೆ.ಸೆಪ್ಟೆಂಬರ್ ತ್ರೈಮಾಸಿಕದಲ್ಲಿ ರೂ 1.48 ಲಕ್ಷ ಕೋಟಿ ಒಳಹರಿವು ಆಗಿದೆ. ಕಳೆದ ಸೆಪ್ಟೆಂಬರ್ ತ್ರೈಮಾಸಿಕಕ್ಕೆ ಹೋಲಿಸಿದರೆ ಇದು ಶೇ 21ರಷ್ಟು ಹೆಚ್ಚಳ ಎಂದು ಹೇಳಿದೆ.


## ಸರಸ್ವತಿ ಕನ್ನಡ ರತ್ನ ಪ್ರಶಸ್ತಿಗೆ ಅರ್ಜಿ ಆಹ್ವಾನ

**ದಾವಣಗೆರೆ:** ದಾವಣಗೆರೆಯ ಕಲಾಕುಂಚ ಸಾಂಸ್ಕೃತಿಕ ಸಂಸ್ಥೆ ಮತ್ತು ಶ್ರೀಮತಿ ಸರಸ್ವತಿ ದಾಸಪ್ಪ ಶೆಣೈ ಪ್ರತಿಷ್ಠಾನದಿಂದ ವಿವಿಧ ಕ್ಷೇತ್ರಗಲ್ಲಿ ಸಾಧನೆ ಮಾಡುತ್ತಿರುವವರಿಗೆ ಸರಸ್ವತಿ ಕನ್ನಡ ರತ್ನ ರಾಜ್ಯ ಪ್ರಶಸ್ತಿ ಪ್ರದಾನಕ್ಕೆ ಅರ್ಹರಿಂದ ಆಹ್ವಾನಿಸಲಾಗಿದೆ. ಕಲೆ, ಸಾಹಿತ್ಯ, ಸಂಗೀತ, ಶಿಕ್ಷಣ, ರಂಗಭೂಮಿ, ಜಾನಪದಕಲೆ, ಸಮಾಜಸೇವೆ, ಸಾಂಸ್ಕೃತಿಕ ಚಟುವಟಿಕೆ ಮುಂತಾದ ಕ್ಷೇತ್ರಗಳಲ್ಲಿ ಸಾಧನೆ ಮಾಡಿದವರು 2026ರ ಜ.31ರೊಳಗೆ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗೆ 9538732777 .

## ನಗರದ ಹೈಸ್ಕೂಲ್ ಮೈದಾನ ಸ್ವಚ್ಛತೆ

**ದಾವಣಗೆರೆ:** ನಗರದ ಕೇಂದ್ರ ಬಿಂದುವಿನಲ್ಲಿರುವ ಹೈಸ್ಕೂಲ್ ಮೈದಾನವನ್ನು ಶನಿವಾರ ಶಾಲಾ ಅಭಿವೃದ್ಧಿ ಸಮಿತಿಯ ಉಪಾಧ್ಯಕ್ಷ ದಿನೇಶ್ ಕೆ.ಶೆಟ್ಟಿ ನೇತೃತ್ವದಲ್ಲಿ ಸ್ವಚ್ಛತೆಗೆ ಚಾಲನೆ ನೀಡಲಾಯಿತು. ಇತ್ತೀಚಿನ ದಿನಗಳಲ್ಲಿ ಸುರಿದ ಮಳೆ ಮತ್ತು ವಿವಿಧ ಕಾರ್ಯಕ್ರಮ ಗಳ ಹಿನ್ನೆಲೆಯಲ್ಲಿ ಮೈದಾನದಲ್ಲಿ ಸಾಕಷ್ಟು ಅನಾನುಕೂಲಗಳು ಆಗಿರುವುದರಿಂದ ಸ್ವಚ್ಛತಾ ಕಾರ್ಯಕ್ರಮ ವನ್ನು ಹಮ್ಮಿಕೊಳ್ಳಲಾಗಿತ್ತು. ಇಲ್ಲಿ ವಾಕಿಂಗ್ ಮಾಡುವವ ರಿಗೂ ಸಹಾ ಬಹಳ ತೊಂದರೆಯಾಗಿರುತ್ತದ್ದ ಹಿನ್ನೆಲೆ ಸ್ವಚ್ಛಗೊಳಿಸಲಾಯಿತು. ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಅಯೂಬ್ ಪೈಲ್ವಾನ್, ಶಾಲೆಯ ಮುಖ್ಯೋಪಾಧ್ಯಾ ಯರು ಮತ್ತಿತರರು ಭಾಗವಹಿಸಿದ್ದರು.

# ಬೇಂದ್ರೆಯವರ ಕಾವ್ಯ ಅತ್ಯಂತ ಸರಳ ಸುಲಭ



**ಚಿಕ್ಕಮಗಳೂರು :** ಬೇಂದ್ರೆಯವರ ಕಾವ್ಯ ಅತ್ಯಂತ ಸರಳ ಸುಲಭದಲ್ಲಿ ಆಡುಮಾತಿನಂತೆ ಸುಲಲಿತ ..ಆದರೆ ಅದನ್ನು ಅರ್ಥೈಸುವಲ್ಲಿ ನಾವು ಹಿಂದೆ ಬಿದ್ದು ಅನೇಕಬಾರಿ ಬೇರೆ ರೀತಿಯಲ್ಲೇ ಅದನ್ನು ಕಬ್ಬಿಣದ ಕಡಲೆ ಎಂದು ಬಿಂಬಿಸಿದ್ದಾರೆ. ಅವರು ಕನ್ನಡತಾಯಿ, ಭರತಮಾತೆ ವಿಶ್ವಮಾತೆ ಭೂಮಾತೆ ಈ ಐದು ಐದೆಯರ ಮಗ ತಾನು ಎಂದು ವಿಶ್ವಮಾತೆಯ ಗರ್ಭಕಮಲಜಾತ ಕವನದಲ್ಲಿ ತಿಳಿಸುತ್ತಾರೆ ಎಂದು ಚಿಂತಕ ಲೇಖಕ ಡಾ ಜಿ ಬಿ ಹರೀಶರು ತಿಳಿಸಿದರು.

ನಾದಚೈತನ್ಯ ಮತ್ತು ಎಲಋ ಚಿಕ್ಕಮಗಳೂರು , ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಕಲಾಮಂದಿರದಲಿ ನಡೆದ ಬೇಂದ್ರೆ ಕಾವ್ಯ ಕುರಿತ ನಾಕುತಂತಿ ಕಾರ್ಯಕ್ರಮದಲ್ಲಿ ಮಾತನಾಡುತ್ತಾ ಬೇಂದ್ರೆಯವರು ಅರವಿಂದರು, ಕಲೀಲ್ ಗಿಬ್ರಾನ್, ಟ್ಯಾಗೋರ್ ಮೊದಲಾದವರಿಂದ ಪ್ರೇರಿತರಾಗಿದ್ದರು .ಅವರ ನರಬಲಿ ಕಾದಂಬರಿ ಕವನದಿಂದ ಬ್ರಿಟೀಷರ ಸಿಟ್ಟಿಗೆ ತುತ್ತಾಗಿದ್ದರು . ಉತ್ತರ ಕರ್ನಾಟಕದ ಭಾಷೆಯಸೊಗಡಿನ ಪರಿಚಯ ಕೊಂಚ ಇದ್ದರೂ ಅವರ ಸಾಹಿತ್ಯ ಅರಿಯುವುದು ಸುಲಭ. ನಾನು ನೀನು ಆನು ಎಂದರೆ ನಾವುಗಳು ತಾನು ವಿಶ್ವದ ಕಲ್ಪನೆ. ಜೊತೆಗೆ ಧರ್ಮ , ಅರ್ಥ ಕಾಮ ಮೋಕ್ಷವನ್ನು ಬಿಂಬಿಸುತ್ತದೆ ಎಂದು ತಿಳಿಸಿದರು .

ಶಾಸಕ ಶ್ರೀ ತಮ್ಮಯ್ಯರವರು ಕಾರ್ಯಕ್ರಮ ಉದ್ಘಾಟಿಸಿ, ಕನ್ನಡ ಕಟ್ಟುವ ಇಂತ ಅನೇಕ ಕಾರ್ಯಕ್ರಮಗಳನ್ನು ನಾದಚೈತನ್ಯ ಚೈತನ್ಯ ಯುತವಾಗಿ ನಿರಂತರ ಮಾಡುತ್ತಿರುವುದನ್ನು ಗಮನಿಸುತ್ತಲೆ ಇದ್ದೇವೆ. ಅವರಿಗೆ ನಿರಂತರ ನಮ್ಮ ಪ್ರೋತ್ಸಾಹ ಇರುತ್ತದೆ ಎಂದು ತಿಳಿಸಿದರು .

ನಂತರ ರೇಖಾ ಪ್ರೇಮಕುಮಾರ್ , ರಾಯ್ ನಾಯಕ್, ಪದ್ಮಾಚಂದ್ರಶೇಖರ್, ಲೀಲಾ ಶ್ರೀನಿವಾಸ್ ಪ್ರೇಮಾ , ಕಮಲಾ,ನಾದಚೈತನ್ಯ ವಿದ್ಯಾರ್ಥಿಗಳು ಬೇಂದ್ರೆಯವರ ಹಾಡುಗಳನ್ನು ಸೊಗಸಾಗಿ ಹಾಡಿದರು . ಅಧ್ಯಕ್ಷತೆ ವಹಿಸಿ ಮಾತನಾಡಿದ ಪ್ರೇಂಕುಮಾರ್ ನಾದಚೈತನ್ಯ ರಾಜ್ಯೋತ್ಸವದ ಸಂದರ್ಭದಲ್ಲಿ ಕನ್ನಡ ಕಟ್ಟುವ ಕೆಲಸ ಮಾಡುತ್ತಿದೆ . ಸಂಗೀತ ಸಂಸ್ಕೃತಿ ಗಳ ಜೊತೆಗೆ ಹಲವು ದಿನಗಳ ಅಂತರದಲ್ಲಿ ಕಾರ್ಯಕ್ರಮ ಆಯೋಜಿಸಿದೆ.ಇದಕ್ಕೆ ನಿಮ್ಮ ಸಹಕಾರ ಇರಲಿ ಎಂದು ವಿನಂತಿಸಿದರು .

ಪವಿತ್ರ ನಿರೂಪಿಸಿ, ಕಾರ್ಯದರ್ಶಿ ವಿಶ್ವನಾಥ್ ಸ್ವಾಗತಿಸಿ, ಎಲಋ ಅಧ್ಯಕ್ಷ ಪ್ರದೀಪ್ ವಂದಿಸಿದರು.

## ಲ್ಯಾಪ್ ಟಾಪ್ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ :** ಗೌರಿಬಿದನೂರು ನಗರಸಭಾ ವ್ಯಾಪ್ತಿಯಲ್ಲಿ ವಾಸವಾಗಿರುವ ಬಡತನ ರೇಖೆಗಿಂತ ಕೆಳಮಟ್ಟದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಲ್ಯಾಪ್ ಟಾಪ್ ವಿತರಣೆ 2019-20 ರಿಂದ 2024-25ನೇ ಸಾಲಿನ ಎಸ್.ಎಫ್.ಸಿ ಯೋಜನೆಯ ಟಿ.ಎಸ್.ಪಿ ಕ್ರಿಯಾ ಯೋಜನೆಯ ಅನುಮೋದನೆಯಂತೆ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಲ್ಯಾಪ್ ಟಾಪ್ ವಿತರಣಾ (ಬಿ.ಇ ಮತ್ತು ಎಂ.ಬಿ.ಬಿ.ಎಸ್ ವಿದ್ಯಾರ್ಥಿಗಳಿಗೆ ) (ಹೆಚ್ಚುವರಿ ಅರ್ಜಿಗಳು ಸ್ವೀಕೃತವಾದರೆ ಮೆರಿಟ್ ಆಧಾರದ ಮೇಲೆ ಪರಿಗಣಿಸಲಾಗುವುದು) ಕಾರ್ಯಕ್ರಮದಡಿ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತಿವುಳ್ಳವರು ಈ ಕಚೇರಿಯಿಂದ ಅರ್ಜಿಗಳನ್ನು ಪಡೆದು ಪೂರ್ಣ ಪ್ರಮಾಣದಲ್ಲಿ ಭರ್ತಿ ಮಾಡಿ ಸಂಬಂಧಪಟ್ಟ ದಾಖಲಾತಿಗಳನ್ನು ಲಗತ್ತಿಸಿ ಡಿಸೆಂಬರ್ 16 ರ ಸಂಜೆ 5 ಗಂಟೆಯೊಳಗೆ ಕಚೇರಿಗೆ ಸಲ್ಲಿಸತಕ್ಕದ್ದು.

ತಡವಾಗಿ ಬಂದ ಅರ್ಜಿಗಳನ್ನು ಹಾಗೂ ಅಪೂರ್ಣವಾದ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ.

ದಾಖಲಾತಿಗಳು: 2019-20 ರಿಂದ 2024-25ನೇ ಸಾಲಿನ ವ್ಯಾಸಂಗ ದೃಢೀಕರಣ ಪತ್ರ (ಮೂಲ). ಚಾಲ್ತಿ ಸಾಲಿನ ಜಾತಿ ಹಾಗೂ ಆದಾಯ ಪ್ರಮಾಣ ಪತ್ರ. ಆಹಾರ ಪಡಿತರ ಚೀಟಿ. ಆಧಾರ್ ಕಾರ್ಡ್. ಚುನಾವಣಾ ಗುರುತಿನ ಚೀಟಿ. ಬ್ಯಾಂಕ್ ಖಾತೆಯ ಜೆರಾಕ್ಸ್ ಪ್ರತಿ. ಪಾಸ್ ಪೋರ್ಟ್ ಅಳತೆಯ ಎರಡು ಭಾವಚಿತ್ರ. ಅಂಕಪಟ್ಟಿಗಳನ್ನು ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಕಚೇರಿಯ ವೇಳೆಯಲ್ಲಿ ಶೇ.24.10, ಶೇ.7.25, ಶೇ.5 ರ ವಿಷಯ ನಿರ್ವಾಹಕರನ್ನು ಸಂಪರ್ಕಿಸಬಹುದೆಂದು ಗೌರಿಬಿದನೂರು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಎಚ್.ಐ.ವಿ ಸೋಂಕು ಹರಡುವಿಕೆ ತಡೆಗಟ್ಟಲು ಜಾಗೃತಿ ಮೂಡಿಸಿ



**ಚಿಕ್ಕಬಳ್ಳಾಪುರ :** ಎಚ್ ಐ ವಿ ಸೋಂಕು ಹಾಗೂ ಏಡ್ಸ್ ಕಾಯಿಲೆಯನ್ನು ತಡೆಗಟ್ಟಲು ಜನಸಾಮಾನ್ಯರಲ್ಲಿ ಹಾಗೂ ಸಮಾಜದಲ್ಲಿ ಜಾಗೃತಿ ಮೂಡಿಸುವುದು ಮುಖ್ಯವಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಅಧ್ಯಕ್ಷ ಟಿ.ಪಿ ಪಿ.ರಾಮಲಿಂಗೇಗೌಡ ಅವರು ತಿಳಿಸಿದರು.

ಅವರು ಸೋಮವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಮತ್ತು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಪೋಲೀಸ್ ಇಲಾಖೆ, ನಂದಿ ವೈದ್ಯಕೀಯ ಮಹಾವಿದ್ಯಾಲಯ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಚಿಕ್ಕಬಳ್ಳಾಪುರ ಜಿಲ್ಲೆ ಹಾಗೂ ಜಿಲ್ಲಾ ಏಡ್ಸ್ ತಡೆಗಟ್ಟುವ ಮತ್ತು ನಿಯಂತ್ರಣ ಘಟಕ, ಜಿಲ್ಲಾ ಕ್ಷಯರೋಗ ನಿರ್ಮೂಲನಾ ಕೇಂದ್ರ, ಭಾರತೀಯ ರೆಡ್ ಕ್ರಾಸ್ ಸಂಸ್ಥೆ, ರೆಡ್ ರಿಬ್ಬನ್ ಕ್ಲಬ್, ಸ್ವಯಂ ಸೇವಾ ಸಂಘ ಸಂಸ್ಥೆಗಳ ಸಂಯುಕ್ತ ಆಶ್ರಯದಲ್ಲಿ ಅಂಬೇಡ್ಕರ್ ಭವನದಲ್ಲಿ ನಡೆದ ವಿಶ್ವ ಏಡ್ಸ್ ದಿನಾಚರಣೆಗೆ ಚಾಲನೆ ನೀಡಿ ಮಾತನಾಡಿದರು.

ಆರೋಗ್ಯವೇ ಭಾಗ್ಯ ಎಂದು ಕರೆಯಲಾಗುತ್ತದೆ,ಏಕೆಂದರೆ ಆರೋಗ್ಯವಿದ್ದರೆ ಏನನ್ನಾದರೂ ಸಾಧಿಸಬಹುದು. ಆರೋಗ್ಯವಿಲ್ಲದಿದ್ದರೆ ಏನೇ ಸಾಧಿಸಿದರು ಪ್ರಯೋಜನವಿಲ್ಲ ಅದ್ದರಿಂದ ಸಮಾಜದಲ್ಲಿ ಪ್ರತಿಯೊಬ್ಬರ ಆರೋಗ್ಯವನ್ನು ಕಾಪಾಡುವುದು ಆಡಳಿತಾಂಗದ ಮುಖ್ಯ ಕಾರ್ಯವಾಗಿರುತ್ತದೆ ಅದ್ದರಿಂದ ವಿಶ್ವ ಏಡ್ಸ್ ದಿನಾಚರಣೆಯ ಅಂಗವಾಗಿ ಜಾಗೃತಿ ಮೂಡಿಸುವ ಕೆಲಸವನ್ನು ಪ್ರತಿ ವರ್ಷ ವಿಶ್ವಾದ್ಯಂತ ಮಾಡಲಾಗುತ್ತದೆ "ಎಚ್.ಐ.ವಿ ಸೋಂಕು ಹಾಗೂ ಏಡ್ಸ್ ಹರಡುವಿಕೆಯನ್ನು ನಿಯಂತ್ರಿಸಲು ಇರುವ ಅಡೆತಡೆಗಳನ್ನು ಕೊನೆಗಾಣಿಸುವುದು" ಈ ವರ್ಷದ ಘೋಷವಾಕ್ಯವಾಗಿದೆ ಅಡೆತಡೆಗಳನ್ನು ನಿಯಂತ್ರಿಸಲು ಜನಸಾಮಾನ್ಯರಲ್ಲಿ ಅರಿವು ಮೂಡಿಸುವುದು ಬಹಳ ಅಗತ್ಯವಾಗಿದೆ. ಒಳ್ಳೆಯ ಆರೋಗ್ಯ ಹೊಂದಿರಬೇಕು ಎಂದರೆ ಕೆಟ್ಟ ಹವ್ಯಾಸಗಳನ್ನು ಬಿಟ್ಟು ಒಳ್ಳೆಯ ದಾರಿಯಲ್ಲಿ ನಡೆಯಬೇಕು ಎಂದು ತಿಳಿಸಿದರು.

. ಅನೇಕ ಅರಿವು ಮೂಡಿಸುವ ಕಾರ್ಯಕ್ರಮಗಳು ಮಾಡುವ ಮೂಲಕ ಕಳೆದ ವರ್ಷಗಳಿಗೆ ಹೋಲಿಸಿದರೆ ಜಿಲ್ಲೆಯಲ್ಲಿ ಎಚ್ ಐವಿ ರೋಗಿಗಳ ಸಂಖ್ಯೆ ವರ್ಷದಿಂದ ವರ್ಷಕ್ಕೆ ಕಡಿಮೆ ಆಗುತ್ತಿದೆ ಎಂದು ತಿಳಿಸಿದರು.

ಏಡ್ಸ್ ರೋಗವು ಬಹುತೇಕ ಅಸುರಕ್ಷಿತ ಲೈಂಗಿಕ ಕ್ರಿಯೆ ಮೂಲಕ ಹೆಚ್ಚಾಗಿ ಹರಡುತ್ತದೆ ಹಾಗೂ ಸೋಂಕಿತ ಗರ್ಭಿಣಿಯರಿಂದ ಶಿಶುಗಳಿಗೂ ಹರಡುತ್ತದೆ.ಅಸುರಕ್ಷಿತ ಲೈಂಗಿಕ ಸಂಪರ್ಕ, ಒಬ್ಬರು ಬಳಸಿದ ಸೂಜಿ, ಕತ್ತರಿಯನ್ನು ಇನ್ನೊಬ್ಬರು ಬಳಸಿದಾಗ, ಸ್ತನ್ಯಪಾನದಿಂದ ಹೀಗೆ ಮುಂತಾದ ಕಾರಣಗಳಿಂದ ಏಡ್ಸ್ ಒಬ್ಬರಿಂದ ಒಬ್ಬರಿಗೆ ಹರಡುವ ಸಾಧ್ಯತೆ ಇರುತ್ತದೆ.. ಏಡ್ಸ್ ಸೋಂಕು ತಡೆಗಟ್ಟಲು ಜನಸಾಮಾನ್ಯರಲ್ಲಿ ಸೂಕ್ತ ಅರಿವು ಮೂಡಿಸಲಾಗುತ್ತಿದೆ ಎಂದರು.

ಈ ವೇಳೆ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಬಿ ಶಿಲ್ಪಾ ಅವರು 2025ರ ವಿಶ್ವ ಏಡ್ಸ್ ದಿನದ ಘೋಷವಾಕ್ಯವಾದ " ಹೆಚ್.ಐ.ವಿ ಏಡ್ಸ್ ಹರಡುವಿಕೆಯನ್ನು ನಿಯಂತ್ರಿಸಲು ಇರುವ ಅಡೆತಡೆಗಳನ್ನು ಕೊನೆಗಾಣಿಸೋಣ" ಎಂಬ ಪ್ರತಿಜ್ಞಾ ವಿಧಿಯನ್ನು ಬೋಧಿಸಿದರು.

ಈ ವೇಳೆ ಏಡ್ಸ್ ನ ವಿರುದ್ಧ ಜಾಗೃತಿ ಮೂಡಿಸುವಲ್ಲಿ ಸಾಧನೆಗೈದ ವ್ಯಕ್ತಿಗಳಿಗೆ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಕ್ಷಯ ರೋಗ ನಿರ್ಮಾಲನಾಧಿಕಾರಿ ಹಾಗೂ ಜಿಲ್ಲಾ ಏಡ್ಸ್ ನಿಯಂತ್ರಣಾಧಿಕಾರಿ ಡಾ.ಡಿ.ಟಿ ಉಮಾ, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಕೆ.ವಿ.ಅಭಿಲಾಷ್ ಹಾಗೂ ಆಶಾ ಕಾರ್ಯಕರ್ತೆಯರು, ಅಂಗನವಾಡಿ ಶಿಕ್ಷಕಿಯರು ವಿದ್ಯಾರ್ಥಿಗಳು, ವಿವಿಧ ಇಲಾಖೆಯ ಅಧಿಕಾರಿಗಳು,ಸಿಬಂದಿ ವರ್ಗದವರು ಉಪಸ್ಥಿತರಿದ್ದರು.

### ಗದಗ- ಹುಬ್ಬಳ್ಳಿ ರಸ್ತೆ ತಡೆದು ಅತಿಥಿ ಉಪನ್ಯಾಸಕರ ಧರಣಿ

# ರಾಷ್ಟ್ರಪತಿಗೆ ದಯಾಮರಣ ಪತ್ರ ಬರೆದ ಅತಿಥಿ ಉಪನ್ಯಾಸಕರು



**ಗದಗ:** ಕಾಲೇಜು ಶಿಕ್ಷಣ ಇಲಾಖೆ ನಡೆಸುತ್ತಿರುವ ಕೌನ್ಸಲಿಂಗ ನಿಲ್ಲಿಸಬೇಕು ಮತ್ತು ಸೇವೆಯಲ್ಲಿ ಇರುವವರನ್ನು ಮುಂದು ವರೆಸಬೇಕು ಮತ್ತು ವಿವಿಧ ಬೇಡಿಕೆ ಇಡೆರಿಸುವಂತೆ ಆಗ್ರಹಿಸಿ ರಾಜ್ಯ ಸರ್ಕಾರಿ ಪ್ರಥಮದರ್ಜೆ ಕಾಲೇಜುಗಳ ಅತಿಥಿ ಉಪನ್ಯಾಸಕರ ಸಂಘದಿಂದ ನಗರದಲ್ಲಿ ನಡೆಯುತ್ತಿರುವ ಅತಿಥಿ ಉಪನ್ಯಾಸಕರ ಧರಣಿ ಸತ್ಯಾಗ್ರಹ ಸೋಮವಾರ 8ನೇ ದಿನಕ್ಕೆ ಕಾಲಿಟ್ಟಿದ್ದು, ಈ ವೇಳೆ ಅರ್ಧ ಗಂಟೆಗೂ ಅಧಿಕ ಸಮಯ ಗದಗ- ಹುಬ್ಬಳ್ಳಿ ರಸ್ತೆ ತಡೆದು ಪ್ರತಿಭಟನೆ ನಡೆಸಲಾಯಿತು.ಮತ್ತು ಪ್ರತಿಭಟನೆ ವೇಳೆ ಅತಿಥಿ ಉಪನ್ಯಾಸಕರಿಗೆ ಸೇವಾ ಭದ್ರತೆ ನೀಡುತ್ತೇವೆ ಎನ್ನುವ ಕಾಂಗ್ರೆಸ್ ಸರಕಾರದ ಪ್ರಣಾಳಿಕೆಯನ್ನು ಪ್ರದರ್ಶಿಸಿದರು ಮತ್ತು ರಾಷ್ಟ್ರಪತಿಯವರೆಗೆ ಸಲ್ಲಿಸುವ ದಯಾಮರಣ ಪತ್ರ ಪ್ರದರ್ಶಿಸಿ ನಮ್ಮ ವಯಸ್ಸಾದ ತಂದೆ ತಾಯಿ ನಮ್ಮ ಮಕ್ಕಳನ್ನು ನೋಡಿಕೊಳ್ಳದಂತಹ ಸ್ಥಿತಿ ಇದ್ದು ಮತ್ತು 10,20 ವರ್ಷಗಳ ಕಾಲ ಸೇವೆ ಸಲ್ಲಿಸಿದವರು ನಾವು ನಮಗೆ ಏನು ಮಾಡಬೇಕು ಎಂದು ತೋಚದಂತಾಗಿದೆ ಸರಕಾರದವರು ಪುಣ್ಯ ಕಟ್ಟಿಕೊಳ್ಳಿ ನಮಗೂ ಮತ್ತು ನಮ್ಮ ಕುಟುಂಬದ ಎಲ್ಲರಿಗೂ ದಯಾಮರಣ ನೀಡಲು ಮುಂದಾಗಲಿ.

ಸತತ 7ದಿನಗಳಿಂದ ತಮ್ಮ ಸಣ್ಣ ಸಣ್ಣ ಮಕ್ಕಳನ್ನು ತೋರೆದು ಪ್ರತಿಭಟನೆಯಲ್ಲಿ ನಿರತವಾಗಿರುವ ಅತಿಥಿ ಉಪನ್ಯಾಸಕಿಯರು ತಮ್ಮ ಮಕ್ಕಳಿಗೆ ವಿಡಿಯೋ ಕರೆ ಮಾಡಿ ಮಕ್ಕಳ ಜೋತೆ ತಾಯಿಯಂದಿರರು ಮಾತನಾಡುವಾಗ ಅಳುವ ದೃಷ್ಯ ಮನಃಕಲುಕುವಂತೆ ಇತ್ತು.

ಪ್ರತಿಭಟನೆಯವೇಳೆ ಗುಲ್ಬುರ್ಗಾದ ಅತಿಥಿ ಉಪನ್ಯಾಸಕ ಚಂದ್ರಕಾಂತೆ ಶಿರೋಳೆ ಹಿರಿಯ ಉಪನ್ಯಾಸಕ ಮಾತನಾಡಿ ಅತಿಥಿ ಉಪನ್ಯಾಸಕರು

10 ವರ್ಷಕ್ಕೂ ಹೆಚ್ಚು ವರ್ಷದವರೆಗೆ ವಿದ್ಯಾರ್ಥಿಗಳಿಗೆ ಜ್ಞಾನದ ಸುಧೆ ಹರಿಸಿದ 6ಸಾವಿರ ಅತಿಥಿ ಉಪನ್ಯಾಸಕರನ್ನು

ಕವನ್ಸಲಿಂಗ್ ನಲ್ಲಿ ಹೋರ ಇಟ್ಟು ಕೌನ್ಸಲಿಂಗ ಮಾಡುತ್ತಿದ್ದು ತಕ್ಷಣವೇ ಕೌನ್ಸಲಿಂಗ ನಿಲ್ಲಿಸಿ ಸೇವೆ ಸಲ್ಲಿಸುತ್ತಿರುವವರನ್ನು ಮುಂದುವರೆಸಬೇಕು ಎಂದು ಹೇಳಿದರು.

ಹೊನ್ನಳಿಯ ಅತಿಥಿ ಉಪನ್ಯಾಸಕ ಹಲದಪ್ಪ ಮಾತನಾಡಿ ಎಲ್ಲವೂ ತಮ್ಮ ಹಕ್ಕಿನ ಮಾನವೀಯ ಬದುಕಿಗಾಗಿ ಶ್ರಮಕ್ಕೆ ಮಾನ್ಯತೆ ಸಿಗಲಿ ಅನಿಶ್ಚಿತತೆ ಕಳಚಲಿ ಎಂಬುದು ಏಕೈಕ ಬೇಡಿಕೆ.ನಾವು ವಿದ್ಯಾರ್ಥಿಗಳ ಭವಿಷ್ಯ ಕಟ್ಟುವವರಾದರೂ ನಮ್ಮದೇ ಬದುಕು ಪ್ರಶ್ನಾರ್ಥಕವಾಗಿ ಬೀದಿಯಲ್ಲಿ ಕುಳಿತುಕೊಳ್ಳುವಂತಹ ಸ್ಥಿತಿ ನಮ್ಮದಾಗಿ ಮುಖ್ಯಮಂತ್ರಿ ಸಿದ್ಧರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ, ಉನ್ನತ ಶಿಕ್ಷಣ ಸಚಿವರಾದ ಸುದಾಕರ ಅವರು ನಮಗೆ ಆಧ್ಯತೆ ನೀಡುತ್ತಾರೆ ಎನ್ನುವ ಆಶಾ ಭಾವನೆಯಿಂದ 7ದಿನಗಳ ಕಾಲ ನೋಡಿದೆವು ನಮತ್ತ ಚಕಾರ ಎತ್ತದೆ ಇರುವ ಕಾರಣ ನಮ್ಮ ಕುಟುಂಬದ ಸಮೇತ ನಮಗೆ ದಯಾಮರಣದ ಪತ್ರವನ್ನು ಸರಕಾರಕ್ಕೆ ಸಲ್ಲಿಸುತ್ತಿದ್ದೇವೆ ಎಂದು ಹೇಳಿದರು.

ಪ್ರತಿಭಟನೆಯಲ್ಲಿ ರಾಜ್ಯಾಧ್ಯಕ್ಷರಾದ ಡಾ. ಹನಮಂತಗೌಡ ಆರ್.ಕಲ್ಮನಿ ಯವರು ಸೇರಿದಂತೆ ಗದಗ, ಬೀದರ, ಗುಲಬುರ್ಗಾ,

ಕಾರವಾರ, ಧಾರವಾಡ, ಬಾಗಲಕೋಟೆ, ವಿಜಯನಗರ, ಬಳ್ಳಾರಿ, ಹಾವೇರಿ, ತುಮಕೂರ,ಕೊಡಗು, ಬೆಳಗಾವ, ಕೋಲಾರ, ಚಿಕ್ಕಮಗಳೂರು, ಉಡಪಿ, ಕಾರ್ಕಾಳ, ಹೊಸಪೇಟ, ಕೊಪ್ಪಳ ಸೇರಿದಂತೆ ವಿವಿಧ ಜಿಲ್ಲೆಗಳಿಂದ ಸಾವಿರಾರು ಅತಿಥಿ ಉಪನ್ಯಾಸಕರು ಮತ್ತು ಸಾವಿರಾರು ಅತಿಥಿ ಮಹಿಳಾ ಉಪನ್ಯಾಸಕಿಯರು ಇದ್ದರು.

## ವಾಣಿಜ್ಯ ಸಿಲಿಂಡರ್ ಬೆಲೆ ಇಳಿಕೆ

**ನವದೆಹಲಿ (ಪಿಟಿಐ):** ವಾಣಿಜ್ಯ ಉದ್ದೇಶಕ್ಕೆ ಬಳಸುವ ಎಲ್‌ಪಿಜಿ ಸಿಲಿಂಡರ್ ಬೆಲೆ ರೂ 10 ಇಳಿಕೆಯಾಗಿದ್ದರೆ, ವಿಮಾನಗಳಲ್ಲಿ ಬಳಸುವ ಇಂಧನ (ಎಟಿಎಫ್) ದರವು ಶೇ 5.4ರಷ್ಟು ಹೆಚ್ಚಳವಾಗಿದೆ.ಪರಿಷ್ಕೃತ ದರವು ಸೋಮವಾರದಿಂದಲೇ ಜಾರಿಗೆ ಬಂದಿದೆ ಎಂದು ಸರ್ಕಾರಿ ಸ್ವಾಮ್ಯದ ತೈಲ ಕಂಪನಿಗಳು ತಿಳಿಸಿವೆ.

ನವದೆಹಲಿಯಲ್ಲಿ 19 ಕೆ.ಜಿ ತೂಕದ ಸಿಲಿಂಡರ್ ಬೆಲರೂ 10 ಕಡಿಮೆಯಾಗಿ, ರೂ 1,580.50ರಂತೆ ಮಾರಾಟವಾಗಿದೆ.ದೆಹಲಿಯಲ್ಲಿ ವಿಮಾನಇಂಧನ ದರವು ಪ್ರತಿ ಕಿಲೋಲೀಟರ್‌ಗೆ (1 ಸಾವಿರ ಲೀಟರ್)ರೂ5,133 ಹೆಚ್ಚಳವಾಗಿ,ರೂ 99,676 ಆಗಿದೆ. ಸ್ಥಳೀಯ ಮಾರಾಟ ತೆರಿಗೆ ಅಥವಾ ವ್ಯಾಟ್‌ಗೆ ಅನುಗುಣವಾಗಿ ರಾಜ್ಯದಿಂದ ರಾಜ್ಯಕ್ಕೆ ಮಾರಾಟ ದರದಲ್ಲಿ ವ್ಯತ್ಯಾಸ ಆಗುತ್ತದೆ.14.2 ಕೆ.ಜಿ ತೂಕದ ಗೃಹ ಬಳಕೆಯ ಅಡುಗೆ ಅನಿಲ ದರ ಯಥಾಸ್ಥಿತಿಯಲ್ಲಿದ್ದು, ರೂ 853 ಇದೆ. ಅಂತರರಾಷ್ಟ್ರೀಯ ಮಾರುಕಟ್ಟೆ ಯಲ್ಲಿ ಇಂಧನ ದರ, ವಿದೇಶಿ ವಿನಿಮಯ ದರಕ್ಕೆ ಅನುಗುಣವಾಗಿ ತೈಲ ಮಾರಾಟ ಕಂಪನಿಗಳು ಪ್ರತಿ ತಿಂಗಳು ಈ ದರ ಪರಿಷ್ಕರಣೆ ಮಾಡುತ್ತವೆ.

## ಬಸ್‌ಗೆ ಬೈಕ್ ಡಿಕ್ಕಿ: ವ್ಯಕ್ತಿ ಸಾವು

**ಶಿಕಾರಿಪುರ:** ಪಟ್ಟಣದ ಹೊರವಲಯದ ಶಿವಮೊಗ್ಗ ರಸ್ತೆಯಲ್ಲಿ ಸೋಮವಾರ ಸಂಜೆ ಬಸ್‌ಗೆ ಬೈಕ್ ಡಿಕ್ಕಿ ಹೊಡೆದು ವ್ಯ-ಕ್ತಿಯೊಬ್ಬರು ಸ್ಥಳದಲ್ಲೇ ಮೃತಪಟ್ಟಿದ್ದಾರೆ.ಇಲ್ಲಿನ ಆಶ್ರಯ ಬಡಾವಣೆ ನಿವಾಸಿ ವಿನಾಯಕ (36) ಮೃತ ವ್ಯಕ್ತಿ. ಖಾಸಗಿ ಶಾಲೆ ಬಸ್‌ಗೆ ಹಿಂದಿನಿಂದ ಬೈಕ್ ಡಿಕ್ಕಿ ಹೊಡೆದಿದೆ. ತೀವ್ರ ಗಾಯಗೊಂಡಿದ್ದ ಬೈಕ್ ಸವಾರ ಸ್ಥಳದಲ್ಲೇ ಮೃತಪಟ್ಟಿದ್ದು, ಹಿ0ಬದಿಯ ಸವಾರ ಮೋಹನ್ ಗಾಯಗೊಂಡಿದ್ದು, ಪಟ್ಟಣದ ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.ಮೃತ ವ್ಯಕ್ತಿಯು ವಿನಾಯಕ ಶಾಹಿ ಗಾರ್ಮೆಂಟ್ಸ್ ಉದ್ಯೋಗಿಯಾಗಿದ್ದ. ಆತನ ಪತ್ನಿ ಗರ್ಭಿಣಿಯಾಗಿದ್ದು, ಕುಟುಂಬದಲ್ಲಿ ಶೋಕ ಮನೆ ಮಾಡಿದೆ. ಪಟ್ಟಣ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಕಾರ್ ಡಿಕ್ಕಿ; ಸಾವು

**ಚನ್ನಗಿರಿ:** ಮಾದಾಪುರ ಗ್ರಾಮದ ಬಳಿ ರಾಷ್ಟ್ರೀಯ ಹೆದ್ದಾರಿ 369ರಲ್ಲಿ ಸೋಮವಾರ ಕಾರೊಂದು ಬೈಕ್‌ಗೆ ಡಿಕ್ಕಿ ಹೊಡೆದ ಪರಿಣಾಮ ಬೈಕ್ ಸವಾರ ಸ್ಥಳದಲ್ಲೇ ಮೃತಪಟ್ಟಿದ್ದಾರೆ.ತಾಲ್ಲೂಕಿನ ಕೊರಟಿಕೆರೆ ಗ್ರಾಮದ ನಿವಾಸಿ ರಾಜಪ್ಪ (65) ಮೃತ ವ್ಯಕ್ತಿ. ಚನ್ನಗಿರಿಯಿಂದ ಕೊರಟಿಕೆರೆ ಗ್ರಾಮಕ್ಕೆ ಬೈಕ್‌ನಲ್ಲಿ ತೆರಳುತ್ತಿರುವ ಸಮಯದಲ್ಲಿ ವೇಗವಾಗಿ ಬಂದ ಕಾರು ಬೈಕ್‌ಗೆ ಮುಖಾಮುಖಿ ಡಿಕ್ಕಿ ಹೊಡೆದ ಪರಿಣಾಮ ಈ ಅವಘಡ ಸಂಭವಿಸಿದೆ. ಚನ್ನಗಿರಿ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ ಎಂದು ಪಿಐ ಕೆ.ಎನ್. ರವೀಶ್ ತಿಳಿಸಿದ್ದಾರೆ

## ರೈತ ಆತ್ಮಹತ್ಯೆ

ಶಿಕಾರಿಪುರ: ಸಾಲದ ಹೊರೆ ತಾಳಲಾರದೆ ತಾಲ್ಲೂಕಿನ ಹಿರೇಕೊರಲಹಳ್ಳಿ ಗ್ರಾಮದ ವೃದ್ಧ ರೈತ ಪೀಕ್ಲಾ ನಾಯ್ಕ (70) ಸೋಮವಾರ ಅಂಜನಾಪುರ ಪೀಕ್ಲಾನಾಯ್ಕ ಜಲಾಶಯ ಹಿನ್ನೀರಿಗೆ ಹಾರಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ.ಸಾಲ ತೀರಿಸುವ ಕುರಿತು ಕುಟುಂಬ ಸದಸ್ಯರ ನಡುವೆ ಅವರ ಮನೆಯಲ್ಲಿ ಮಧ್ಯಾಹ್ನ ನಡೆದ ಗಲಾಟೆಗೆ ಬೇಸತ್ತು, ಜಮೀನಿಗೆ ಹೋದಾಗ ಸಮೀಪದ ಅಂಜನಾಪುರ ಜಲಾಶಯ ಹಿನ್ನೀರಿಗೆ ಹಾರಿದ್ದಾರೆ.ಹಾರೇಗೊಪ್ಪ ಗ್ರಾಮೀಣ ಬ್ಯಾಂಕ್‌ನಲ್ಲಿ* 3 ಲಕ್ಷ, ಫೈನಾನ್ಸ್ ಹಾಗೂ ಕೈಸಾಲವನ್ನು ಮಾಡಿಕೊಂಡಿದ್ದರು ಎಂದು ಕುಟುಂಬದವರು ಪೊಲೀಸರಿಗೆ ದೂರು ನೀಡಿದ್ದಾರೆ. ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಸಮುದಾಯ ಜಾಗೃತವಾದಲ್ಲಿ ಏಡ್ಸ್ ಹರಡುವಿಕೆ ನಿಯಂತ್ರಣ ಸಾಧ್ಯ



**ಗದಗ :** ಏಡ್ಸ್ ರೋಗ ಹರಡುತ್ತಿರುವ ಪ್ರಮಾಣವನ್ನು ಸೊನ್ನೆಗೆ ತಂದಾಗ ಮಾತ್ರ ಈ ದಿನಾಚರಣೆಯ ಉದ್ದೇಶ ಪೂರ್ಣವಾಗುತ್ತದೆ ಎಂದು ಡಾ.ಆರ್.ಎನ್.ಗೋಡಬೋಲೆ ತಿಳಿಸಿದರು.

ಗದಗ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಹಾಗೂ ಜಿಲ್ಲಾ ಏಡ್ಸ್ ತಡೆಗಟ್ಟುವಿಕೆ ಮತ್ತು ನಿಯಂತ್ರಣ ಘಟಕ, ಜಿಲ್ಲಾ ವಾರ್ತಾ & ಪ್ರಸಾರ ಇಲಾಖೆ, ಕೆ.ಹೆಚ್.ಪಿ. ಐಎಮ್.ಎಸ್ ಜಿಲ್ಲಾ ಆಸ್ಪತ್ರೆ, ಬಸವೇಶ್ವರ ಪ್ಯಾರಾ ಮೆಡಿಕಲ್ ಕಾಲೇಜ, ಗಾಂಧೀಜಿ ಪ್ಯಾರಾ ಮೆಡಿಕಲ್ ಕಾಲೇಜ, ಪಾಲನಗಾಲಾ ನರ್ಸಿಂಗ್ ಕಾಲೇಜ, ಜಿಲ್ಲಾ ರೆಡ್ ಕ್ರಾಸ್ ಸಂಸ್ಥೆ, ರಕ್ಷಣೆ ಜಿಲ್ಲಾ ಮಹಿಳಾ ಒಕ್ಕೂಟ, ಸೃಷ್ಠಿ ಸಂಕುಲ ಸಂಸ್ಥೆ, ನವಚೇತನ ಸಂಸ್ಥೆ, ಚೈತನ್ಯ ನಗರ ಮತ್ತು ಗ್ರಾಮೀಣ ಅಭಿವೃದ್ಧಿ ಸಂಸ್ಥೆ, ಕೆ.ಹೆಚ್. ಪಾಟೀಲ ವೈದ್ಯಕೀಯ ಮಹಾವಿದ್ಯಾಲಯ ರೆಡ್ ರಿಬ್ಬನ್ ಕ್ಲಬ್ ಗದಗ ಇವರುಗಳ ಸಂಯುಕ್ತ ಆಶ್ರಯದಲ್ಲಿ ಸೋಮವಾರ ಕೆ.ಎಚ್.ಪಾಟೀಲ ಇನ್ಸ್ ಟಿಟ್ಯೂಟ್ ಆಫ್ ಮೆಡಿಕಲ್ ಸೈನ್ಸ್ ಕಾಲೇಜ್/ಜಿಲ್ಲಾ ಆಸ್ಪತ್ರೆ, ಮಲ್ಲಸಮುದ್ರ ಗದಗದಲ್ಲಿ ಜಿಲ್ಲಾ ಮಟ್ಟದ ವಿಶ್ವ ಏಡ್ಸ್ ಜಾಗೃತಿ ದಿನ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಈ ವರ್ಷದ ಘೋಷಣೆಯಂತೆ "ಹೆಚ್.ಐ.ವಿ ಏಡ್ಸ್ ಹರಡುವಿಕೆಯನ್ನು ನಿಯಂತ್ರಿಸಲು ಇರುವ ಅಡೆತಡೆಗಳನ್ನು ಕೊನೆಗಾನಿಸೋಣ" ಎಂಬ ನುಡಿಯಂತೆ ಸಮುದಾಯ ಜಾಗೃತವಾಗಿ ನಮ್ಮ ಆರೋಗ್ಯವನ್ನು ಪಡೆಯಲು ಸರಿಯಾದ ಮಾರ್ಗದಲ್ಲಿ ಹೆಜ್ಜೆ ಇಡಲು ಮುಂದಾಗುವಂತೆ ಕರೆ ನೀಡಿದರು. ಮುಂದಾಳತ್ವ ವಹಿಸಿ ಜಾಗೃತಿಯನ್ನು ಮೂಡಿಸಿ ಏಡ್ಸ್ ರೋಗ ಹರಡುತ್ತಿರುವ ಪ್ರಮಾಣವನ್ನು ಸೊನ್ನೆಗೆ ತಂದಾಗ ಮಾತ್ರ ಈ ದಿನಾಚರಣೆಯ ಉದ್ದೇಶ ಪೂರ್ಣಗೊಳ್ಳುವುದು ಎಂದು ತಿಳಿಸಿದರು.

ಜಿಲ್ಲಾ ಏಡ್ಸ್ ನಿಯಂತ್ರಣಾಧಿಕಾರಿ ಡಾ. ಅರುಂಧತಿ ಕುಲಕರ್ಣಿ ಪ್ರಾಸ್ತಾವವಿಕವಾಗಿ ಮಾತನಾಡಿ ಹೆಚ್.ಐ.ವಿ. ಸೋಂಕಿನ ಪ್ರಮಾಣ ಕಳೆದ ಹತ್ತು ವರ್ಷಗಳ ಅಂಕಿಅಂಶಗಳನ್ನು ನೋಡಲಾಗಿ ಗಣನೀಯವಾಗಿ ಇಳಿಕೆ ಕಂಡುಬಂದಿದ್ದು, ಇದು ಇಲಾಖೆಯ ಹಲವಾರು ತಿಳುವಳಿಕೆ ಕಾರ್ಯಕ್ರಮಗಳು ಹಾಗೂ ಜಾಗೃತಿ ಜಾಥಾಗಳು ಕಾರಣ ಎಂದು ತಿಳಿಸಿದರು. ಹೆಚ್.ಐ.ವಿ. ಮತ್ತು ಏಡ್ಸ್ಗೆ ಬಹಳಷ್ಟು ಅಂತರವಿದ್ದು, ಹೆಚ್.ಐ.ವಿ ಸೋಂಕಿತರು ಭಯಪಡುವ ಅಗತ್ಯವಿಲ್ಲ. ಆಪ್ತಸಮಾಲೋಚಕರಿಂದ ನೈತಿಕ ಬೆಂಬಲ ಮಾನಸಿಕ ಬೆಂಬಲವನ್ನು ಪಡೆದು ಇತರರಂತೆ ಸಾಮಾನ್ಯ ಜೀವನ ನಡೆಸಬಹುದು ಎಂದು ಹೇಳಿದರು.

ಇದೆ ಸಂದರ್ಬದಲ್ಲಿ ಜಿಲ್ಲೆಯಲ್ಲಿ ಹೆಚ್.ಐ.ವಿ. ನಿಯಂತ್ರಣದಲ್ಲಿ ಉತ್ತಮ ಸೇವೆ ಸಲ್ಲಿಸಿದ ಉತ್ತಮ ರೆಡ್ ರಿಬ್ಬನ್ ಕಾಲೇಜು ಸಿದ್ದೇಶ್ವರ ಸರಕಾರಿ ಪ್ರಥಮ ದರ್ಜೆ ಕಾಲೇಜ ನರಗುಂದ ಬೆನಕಪ್ಪ ಸಿಂಹಾಸನದ ಸರಕಾರಿ ಪ್ರಥಮ ದರ್ಜೆ ಕಾಲೇಜ ಗಜೇಂದ್ರಗಡ, ಉತ್ತಮ ಸೇವೆ ಸಲ್ಲಿಸಿದಕ್ಕಾಗಿ ರಕ್ಷಣೆ ಜಿಲ್ಲಾ ಮಹಿಳಾ ಒಕ್ಕೂಟ, ಉತ್ತಮ ಖಾಸಗಿ ಸಹಭಾಗಿತ್ವ ಆಸ್ಪತ್ರೆಯಾಗಿ ಶಿವಪೂರ ಆಸ್ಪತ್ರೆ, ಹಾಗೂ ಹೆಚ್.ಐ.ವಿ ಸೋಂಕಿತ ಮಹಿಳೆಯರ ಹೆರಿಗೆ ಮಾಡಿಸಿದ್ದಕ್ಕಾಗಿ ಜಿಲ್ಲಾ ಆಸ್ಪತ್ರೆಯ ಸ್ತ್ರೀರೋಗ ತಜ್ಞರಾದ ಡಾ. ಹನುಮಂತ ನಿಪನಾಳ ರವರನ್ನು ಪ್ರಮಾಣ ಪತ್ರ ನೀಡಿ ಸನ್ಮಾನಿಸಲಾಯಿತು.

ಜೈ ಕಿಸಾನ ಕಲಾ ತಂಡದಿಂದ ಹೆಚ್.ಐ.ವಿ ಏಡ್ಸ ಕುರಿತು ಜಾನಪದ ಹಾಡುಗಳಿಂದ ಅರಿವು ಮೂಡಿಸುವ ಕಾರ್ಯ ನಿರ್ವಹಿಸಿದರು. ಬಿ.ಬಿ. ಲಾಲಗಟ್ಟಿರವರು ಕಾರ್ಯಕ್ರಮ ನಿರೂಪಿಸಿದರು, ನೀಲಕಂಠ ಮಡಿವಾಳರ ವಂದಿಸಿದರು.

ಈ ಸಂದರ್ಭದಲ್ಲಿ ಡಾ. ಅನಂತ ಶಿವಪೂರ, ಡಾ. ರಮೇಶ, ತಾಲೂಕಾ ಆರೋಗ್ಯಾಧಿಕಾರಿಗಳು, ಕೆ.ಎಚ್.ಪಿ.ಐ.ಎಂ.ಎಸ್. ಕಾಲೇಜ್ ಸಮುದಾಯ ಆರೋಗ್ಯ ವಿಭಾಗದ ಡಾ.ಅರವಿಂದ ಕರಿನಾಗಣ್ಣವರ, ಪುಷ್ಪಾ ಪಾಟೀಲ, ಸಿದ್ದಪ್ಪ ಲಿಂಗದಾಳ, ರಾಜೇಂದ್ರ ಗಡಾದ, ಮಂಜುನಾಥ ಸಜ್ಜನರ, ಆರೋಗ್ಯ ಇಲಾಖೆಯ ಸಿಬ್ಬಂದಿಗಳು, ಎನ್.ಜಿ.ಓ. ವಿಧ್ಯಾರ್ಥಿಗಳು ಉಪಸ್ಥಿತರಿದ್ದರು.

# ಅಂತರಾಷ್ಟ್ರೀಯ ಪ್ಯಾರಾಸಿಟಿಂಗ್ ಥ್ರೋಬಾಲ್‌ಗೆ ಆಯ್ಕೆಯಾದ ಜಿಲ್ಲೆಯ ಕ್ರೀಡಾಪಟುಗಳಿಗೆ ಸನ್ಮಾನ



**ಗದಗ:** ಡಿಸೆಂಬರ್ 8 ರಿಂದ 10 ರವರೆಗೆ ಶ್ರೀಲಂಕಾದ ರತ್ನಾಪೂರದಲ್ಲಿ ನಡೆಯುವ ಅಂತರಾಷ್ಟ್ರೀಯ ಮಟ್ಟದ ಪ್ಯಾರಾಸಿಟಿಂಗ್ ಥ್ರೋಬಾಲ್ ಚಾಂಪಿಯನ್ ಶಿಪ್ಗೆ ಭಾರತದ ಪ್ರತಿನಿಧಿಗಳಾಗಿ ಗದಗ ಜಿಲ್ಲೆಯ ಮೂವರು ಕ್ರೀಡಾಪಟುಗಳು ಆಯ್ಕೆಯಾಗಿದ್ದು ಅವರಿಗೆ ಜಿಲ್ಲಾಡಳಿತ ಭವನದಲ್ಲಿ ಶುಕ್ರವಾರ ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಅವರು ಸನ್ಮಾನಿಸಿ ಶುಭ ಕೋರಿದರು.

ಜಿಲ್ಲೆಯ ಕ್ರೀಡಾಪಟುಗಳಾದ ಕು. ಮಾಲತಿ ಇನಾಮತಿ, ಬಿ.ಆನಂದ್, ಮಹಾಂತೇಶ ಗೋವಿಂದಪ್ಪ ಬಿ. ಅವರುಗಳು ಅಂತರಾಷ್ಟ್ರೀಯ ಪ್ಯಾರಾಸಿಟಿಂಗ್ ಥ್ರೋಬಾಲ್ ಕ್ರೀಡೆಗೆ ಗದಗ ಜಿಲ್ಲೆಯಿಂದ ಶ್ರೀಲಂಕಾಗೆ ತೆರಳಲಿದ್ದು ಅವರಿಗೆ ಜಿಲ್ಲೆಯಿಂದ ವಿಜಯಶಾಲಿಗಳಾಗಿ ಎಂದು ಶುಭ ಹಾರೈಸಿದರು.ಈ ಸಂದರ್ಭದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷರಾದ ಪ್ರಭು ಬುರಬುರೆ, ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಡಾ.ಶರಣುಗೋಗೇರಿ, ವಾರ್ತಾಧಿಕಾರಿ ವಸಂತ ಮಡ್ಲೂರ, ನಿರ್ಮಿತಿ ಕೇಂದ್ರದ ವ್ಯವಸ್ಥಾಪಕ ನಿರ್ದೇಶಕ ಗಂಗಾಧರ ಶಿರೋಳ, ನಗರಸಭೆ ಪೌರಾಯುಕ್ತ ರಾಜಾರಾಮ ಪವಾರ ಸೇರಿದಂತೆ ಇತರರು ಹಾಜರಿದ್ದರು.

ಹಿನ್ನೆಲೆ : ಗದಗದಲ್ಲಿ 29/6/2025 ರಂದು ನಡೆದ ಕರ್ನಾಟಕ ಸಿಟ್ಟಿಂಗ್ ಥ್ರೋಬಾಲ್ ಚಾಂಪಿಯನ್‌ಲ್ಲಿ ಒಟ್ಟು 8 ಪುರುಷರು ಮತ್ತು 8 ಮಹಿಳೆಯರು ಭಾಗವಹಿಸಿದ್ದರು ಮತ್ತು ಗದಗ ತಂಡವು ಪ್ರಥಮ ಸ್ಥಾನ ಪಡೆಯಿತು. ಮತ್ತು ನಂತರ 4 (ಆನಂದ್, ಮಹಾಂತೇಶ್, ಸೋಮು, ಹುಸೇನ್)ಪುರುಷರ ತಂಡದಿಂದ ಮತ್ತು ಮಾಲತಿ ಇನಾಮತಿ ಮಹಿಳಾ ತಂಡದಿಂದ ಅವರ ಪ್ರದರ್ಶನದ ಆಧಾರದ ಮೇಲೆ 4 ನೇ ರಾಷ್ಟ್ರೀಯ ಸಿಟ್ಟಿಂಗ್ ಥ್ರೋಬಾಲ್ ಚಾಂಪಿಯಶಿಪ್‌ಗೆ ಆಯ್ಕೆಯಾದರು. 4 ನೇ ರಾಷ್ಟ್ರೀಯ ಸಿಟ್ಟಿಂಗ್ ಥ್ರೋಬಾಲ್ ಚಾಂಪಿಯನಿಶಿಪ್ ಗೆ ತಮಿಳುನಾಡು ಕೊಯಮತ್ತೂರಿನಲ್ಲಿ ಆಗಸ್ಟ್ 29 ರಿಂದ 31, 2025 ರವರೆಗೆ ನಡೆಯಿತು.ಭಾರತದಿಂದ ಒಟ್ಟು 24 ತಂಡಗಳು ರಾಷ್ಟ್ರೀಯ ಚಾಂಪಿಯನ್ ಶಿಪ್‌ನಲ್ಲಿ ಭಾಗವಹಿಸಿದ್ದವು.

# ಯುನೈಟೆಡ್ ಕಪ್ ವಾಲಿಬಾಲ್ ನಲ್ಲಿ ಬಾಲಕಿಯರ ಸಾಧನೆ




**ಶಿವಮೊಗ್ಗ:** ಸರ್ದಾರ್ ಜಾಫರ್ ಸ್ಮರಣಾರ್ಥವಾಗಿ ನಾಲ್ಕನೇ ವರ್ಷದ ಜಿಲ್ಲಾ ಮಟ್ಟದ ಪದವಿ ಪೂರ್ವ ಕಾಲೇಜಿನ ಬಾಲಕ,ಬಾಲಕಿಯರಿಗಾಗಿ ಯುನೈಟೆಡ್ ಕಪ್ ವಾಲಿಬಾಲ್ ಕ್ರೀಡಾಕೂಟವನ್ನು ನೆಹರೂ ಕ್ರೀಡಾಂಗಣದಲ್ಲಿ ಯುನೈಟೆಡ್ ಸ್ಪೋರ್ಟ್ಸ್ ಅಂಡ್ ಕಲ್ಚರ್ ಕ್ಲಬ್, ಶಿವಮೊಗ್ಗ. ಹಾಗೂ ಜಿಲ್ಲಾ ವಾಲಿಬಾಲ್ ಸಂಸ್ಥೆ ಶಿವಮೊಗ್ಗ ಇವರ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಲಾಗಿದ್ದ ಹೊನಲು ಬೆಳಕಿನ ವಾಲಿಬಾಲ್ ಪಂದ್ಯಾವಳಿಯಲ್ಲಿ ಶರಾವತಿ ನಗರದ

ಶ್ರೀ ಆದಿಚುಂಚನಗಿರಿ ಸ್ವತಂತ್ರ ಪದವಿ ಪೂರ್ವ ಕಾಲೇಜಿನ ಬಾಲಕ ಮತ್ತು ಬಾಲಕಿಯರು ಭಾಗವಹಿಸಿ,ಉತ್ತಮ ಆಟದ ಪ್ರದರ್ಶನ ನೀಡಿ, ಉತ್ತಮ ದಾಳಿ, ಅಷ್ಟೇ ರಕ್ಷಣಾತ್ಮಕ ಆಟದ ಪ್ರದರ್ಶನ ನೀಡಿ, ಬಾಲಕಿಯರು ಅಂತಿಮ ಪಂದ್ಯದಲ್ಲಿ ಉತ್ತಮ ಜೊತೆ ಆಟದ ಪ್ರದರ್ಶನ ನೀಡಿ, ಪ್ರಥಮ ಬಹುಮಾನವನ್ನು ತಮ್ಮದಾಗಿಸಿಕೊಂಡಿರುತ್ತಾರೆ. ಅತ್ಯಾಕರ್ಷಕ ಟ್ರೋಪಿ ಮತ್ತು 7777 ರೂಗಳ ನಗದು ಬಹುಮಾನಗಳನ್ನು ತಮ್ಮದಾಗಿಸಿಕೊಂಡಿರುತ್ತಾರೆ.

ಬಾಲಕರ ವಿಭಾಗದಲ್ಲಿ ಉತ್ತಮವಾದ ಪ್ರದರ್ಶನ ನೀಡಿ,

ಮೂರನೇ ಸ್ಥಾನವನ್ನು ತಮ್ಮದಾಗಿಸಿಕೊಂಡಿರುತ್ತಾರೆ.ಟ್ರೋಫಿ ಮತ್ತು 3333 ನಗದು ಬಹುಮಾನಗಳನ್ನು ಪಡೆದುಕೊಂಡಿರುತ್ತಾರೆ.

ಬೆಸ್ಟ್ ಆಲ್ ರೌಂಡರ್ ಆಗಿ ಮಾನಸಿ, ಬೆಸ್ಟ್ ಪಾಸರ್ ಯಶಸ್ವಿನಿ ಪಡೆದುಕೊಂಡರೆ, ಬಾಲಕರ ವಿಭಾಗದಲ್ಲಿ ಹರ್ಷ ಕೆ. ಬೆಸ್ಟ್ ಲಿಬ್ರೋ ಆಗಿ ಹೊರಹೊಮ್ಮಿರುತ್ತಾನೆ.

ಕ್ರೀಡಾಪಟುಗಳ ಮುಂದಿನ ಕ್ರೀಡಾ ಜೀವನ ಯಶಸ್ವಿಯಾಗಲಿ ಎಂದು ಶ್ರೀ ಆದಿಚುಂಚನಗಿರಿ ಮಹಾ ಸಂಸ್ಥಾನ ಮಠದ ಪ್ರಧಾನ ಕಾರ್ಯದರ್ಶಿಗಳಾದ ಪೂಜ್ಯ ಶ್ರೀ ಶ್ರೀ ಪ್ರಸನ್ನನಾಥ ಸ್ವಾಮೀಜಿಯವರು, ಶ್ರೀ ಆದಿಚುಂಚನಗಿರಿ ಶಾಖಾ ಮಠದ ಪೂಜ್ಯ ಶ್ರೀ ಶ್ರೀ ನಾದಮಯಾನಂದನಾಥ ಸ್ವಾಮೀಜಿಯವರು, ಆಡಳಿತ ಮಂಡಳಿಯ ಸದಸ್ಯರು, ಪ್ರಾಂಶುಪಾಲ ಎಸ್. ವಿ. ಗುರುರಾಜ್, ಉಪನ್ಯಾಸಕರು ಹಾಗೂ ಸಿಬ್ಬಂದಿ ವರ್ಗದವರು ಶುಭ ಹಾರೈಸಿದ್ದಾರೆ.

# ಸೂಕ್ಷ್ಮ ನೀರಾವರಿ ಘಟಕಗಳಿಗೆ ಸಹಾಯಧನಕ್ಕಾಗಿ ಅರ್ಜಿ ಆಹ್ವಾನ

**ರಾಮನಗರ:** ಕೃಷಿ ಬೆಳೆಗಳಲ್ಲಿ ನೀರಿನ ಸಮರ್ಥ ಬಳಕೆಯನ್ನು ಉತ್ತೇಜಿಸುವ ಸಲುವಾಗಿ 2025–26ನೇ ಸಾಲಿನಲ್ಲಿ ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ–ಪ್ರತಿ ನೀರಿಗೆ ಅಧಿಕ ಬೆಳೆ (ಪಿಎಂ–ಆರ್‌ಕೆವಿವೈ–ಪಿಡಿಎಂಸಿ) ಸೂಕ್ಷ್ಮ ನೀರಾವರಿ ಯೋಜನೆಯನ್ನು ಬೆಂಗಳೂರು ದಕ್ಷಿಣ ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ. ಈ ಯೋಜನೆಯಡಿ ನೀರಾವರಿ ಮೂಲವನ್ನು ಹೊಂದಿರುವ ರೈತರ ಸೂಕ್ಷ್ಮ ನೀರಾವರಿ ಘಟಕಗಳಿಗೆ ಸಹಾಯಧನ ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ.

ತುಂತುರು ನೀರಾವರಿಗೆ ಸಂಬಂಧಿಸಿದಂತೆ ಎಲ್ಲಾ ವರ್ಗದ ರೈತರಿಗೆ 2.0 ಹೆಕ್ಟೇರ್ ಪ್ರದೇಶದವರೆಗೆ ಶೇ. 90ರಷ್ಟು ಸಹಾಯಧನವನ್ನು ನೀಡಲು ಅವಕಾಶವಿರುತ್ತದೆ. ಹನಿ ನೀರಾವರಿಗೆ ಸಂಬಂಧಿಸಿದಂತೆ ಸಣ್ಣ/ಅತಿಸಣ್ಣ/ಪ.ಜಾ/ಪ.ಪಂ ವರ್ಗದ ರೈತರಿಗೆ ಮಾತ್ರ ಶೇ. 90ರಷ್ಟು ಸಹಾಯಧನವನ್ನು ನೀಡಲು ಅವಕಾಶವಿರುತ್ತದೆ.

ಸೂಕ್ಷ್ಮ ನೀರಾವರಿ ಘಟಕಗಳನ್ನು ಸಹಾಯಧನದಡಿ ಪಡೆಯಲು ಎಲ್ಲಾ ವರ್ಗದ ರೈತರಿಗೆ ಪ್ರತಿ 7 ವರ್ಷಕ್ಕೊಮ್ಮೆ ಅವಕಾಶವಿರುತ್ತದೆ. ರೈತರಿಗೆ 3 ಹೆಕ್ಟೇರ್ ಹಿಡುವಳಿ ಇದ್ದಲ್ಲಿ ಈಗಾಗಲೇ 1 ಹೆಕ್ಟೇರ್‌ಗೆ ಸಹಾಯಧನ ಮಂಜೂರು ಮಾಡಿದ್ದಲ್ಲಿ ಅಂತಹ ರೈತರಿಗೆ ಬಾಕಿ 1 ಹೆಕ್ಟೇರ್‌ಗೆ ಶೇ. 90 ರ ಸಹಾಯಧನದಲ್ಲಿ ಹನಿ/ತುಂತುರು ನೀರಾವರಿ ಘಟಕಗಳನ್ನು ವಿತರಿಸಬಹುದಾಗಿರುತ್ತದೆ.

ಸೂಕ್ಷ್ಮ ನೀರಾವರಿ ಸವಲತ್ತನ್ನು ಪಡೆಯಲು ನಿಗಧಿತ ನಮೂನೆಯಲ್ಲಿ ಸಂಬಂಧಿಸಿದ

ದಾಖಲುಗಳೊಂದಿಗೆ ವೈಯಕ್ತಿಕ ವಿವರ, ಮೊಬೈಲ್ ಸಂಖ್ಯೆ, ಪಹಣಿ, ಆಧಾರ್, ಭಾವಚಿತ್ರ, ಬ್ಯಾಂಕ್ ಖಾತೆ ವಿವರಗಳು, ಜಾತಿ ಪ್ರಮಾಣ ಪತ್ರ

(ಪ.ಜಾತಿ/ಪಂಗಡದ ರೈತರಿಗೆ ಮಾತ್ರ) ಹಾಗೂ ನೀರಿನ ಮೂಲದ ಪತ್ರಗಳನ್ನು ಲಗತ್ತಿಸಿ ಹೋಬಳಿಯ ರೈತ ಸಂಪರ್ಕ ಕೇಂದ್ರಗಳಲ್ಲಿ ಅರ್ಜಿಯನ್ನು ಸಲ್ಲಿಸಬಹುದಾಗಿರುತ್ತದೆ.

ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ಸಾಕಷ್ಟು ಪ್ರಮಾಣದಲ್ಲಿ ಅನುದಾನದ ಲಭ್ಯತೆಯಿದ್ದು ಅರ್ಜಿ ಸಲ್ಲಿಸಿ, ರೈತರ ವಂತಿಕೆಯನ್ನು ಪಾವತಿಸಿದ ರೈತರಿಗೆ 24 ಘಂಟೆಯ ಒಳಗಾಗಿ ತುಂತುರು ನೀರಾವರಿ ಘಟಕಗಳ ವಿತರಣೆ ಮಾಡಲಾಗುವುದು. ಸಮಾಜ ಕಲ್ಯಾಣ ಇಲಾಖೆಯ ಗಂಗಾ ಕಲ್ಯಾಣ ಯೋಜನೆಯಡಿ ಕೊಳವೆ ಬಾವಿ ಸೌಲಭ್ಯವನ್ನು ಪಡೆದಿರುವ ಫಲಾನುಭವಿಗಳನ್ನೊಳಗೊಂಡಂತೆ ಎಲ್ಲಾ ವರ್ಗದ ರೈತರು ಶೇ. 90ರ ಸಹಾಯಧನದಲ್ಲಿ ತುಂತುರು ನೀರಾವರಿ ಘಟಕಗಳನ್ನು ಪಡೆಯಬಹುದಾಗಿರುತ್ತದೆ.

ಹೆಚ್ಚಿನ ಮಾಹಿತಿಗೆ ಹತ್ತಿರದ ರೈತ ಸಂಪರ್ಕ ಕೇಂದ್ರದ ಕೃಷಿ ಅಧಿಕಾರಿ ಅಥವಾ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರುಗಳನ್ನು ಸಂಪರ್ಕಿಸುಂತೆ ಬೆಂಗಳೂರು ದಕ್ಷಿಣ ಜಿಲ್ಲೆಯ ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# 24/7 ನೀರು ಪೂರೈಕೆಯಲ್ಲಿ ರಾಜ್ಯಕ್ಕೆ ಮೊದಲು, ದೇಶಕ್ಕೆ ಮಾದರಿ ಜಿಲ್ಲೆ: ಸಿಇಓ ಗಿತ್ತೆ ಮಾಧವ ವಿಠ್ಠಲರಾವ್

**ದಾವಣಗೆರೆ :** ನವದೆಹಲಿಯ ಭಾರತ ಮಂದಿರದಲ್ಲಿ ಕೇಂದ್ರ ಜಲಶಕ್ತಿ ಸಚಿವರ ಅಧ್ಯಕ್ಷತೆಯಲ್ಲಿ ಶುಕ್ರವಾರ ನಡೆದ ಸುಜಲಾಂ ಸಮ್ಮಿತ್ ನಲ್ಲಿ ದಾವಣಗೆರೆ ಜಿಲ್ಲೆಯ ಹಿರೇಮಳಲಿ ಗ್ರಾಮ ಪಂಚಾಯಿತಿಯ ಪಿಡಿಓ ರಶ್ಮಿ ಎನ್ ಹಾಗೂ ವಿಡಬ್ಲ್ಯೂಎಸ್‌ಸಿ ಅಧ್ಯಕ್ಷ ವಿಜಯನಾಯಕ್ ಭಾಗವಹಿಸಿ ಯಶಸ್ವಿ ಅನುಷ್ಠಾನದ ಕುರಿತು ಪ್ರಸ್ತುತಪಡಿಸಿದರು.

ದಾವಣಗೆರೆ ಜಿಲ್ಲೆಯಲ್ಲಿ 45 ಕಂದಾಯ ಗ್ರಾಮ, 12 ಜನ ವಸತಿ ಕೇಂದ್ರ ಒಟ್ಟು 57 ಗ್ರಾಮಗಳಲ್ಲಿ 24 4*7 ನೀರು ಸರಬರಾಜು ಮಾದರಿಯನ್ನು ರಾಷ್ಟ್ರೀಯ ವೇದಿಕೆಯಲ್ಲಿ ಯಶಸ್ವಿಯಾಗಿ ಪ್ರಸ್ತುತಪಡಿಸಿದ್ದಾರೆ. ರಾಜ್ಯದಲ್ಲಿ ಮೊದಲ ಜಿಲ್ಲೆ ದಾವಣಗೆರೆ ಮಾತ್ರ ಈ ಗೌರವಕ್ಕೆ ಆಯ್ಕೆಯಾದುದು. ನಮ್ಮ ತಂಡದ ಶ್ರಮ ಮತ್ತು ನವೀನತೆಗೆ ದೊರೆತ ಸನ್ಮಾನ. ಮುಂದಿನ ಕೆಲವೇ ತಿಂಗಳಲ್ಲಿ ನೂರು ಗ್ರಾಮಗಳಲ್ಲಿ ಸುಸ್ಥಿರ ಕುಡಿಯುವ ನೀರು ಪೂರೈಕೆ ಮಾಡುವ ಮೂಲಕ ಯಶಸ್ವಿ ಅನುಷ್ಠಾನ ಜಿಲ್ಲೆ ಎಂದು ದೇಶದಲ್ಲಿ ಗುರುತಿಸುವ ಕಾರ್ಯದ ಗುರಿ ಹೊಂದಲಾಗಿದೆ ಎಂದು ಜಿಲ್ಲಾ ಪಂಚಾಯತ್, ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಗಿತ್ತೆ ಮಾಧವ ವಿಠ್ಠಲರಾವ್ ಸಂತಸ ವ್ಯಕ್ತಪಡಿಸಿದ್ದಾರೆ.

# ಕಾರ್ ಡಿಕ್ಕಿ; ಸಾವು

**ಚನ್ನಗಿರಿ:** ಮಾದಾಪುರ ಗ್ರಾಮದ ಬಳಿ ರಾಷ್ಟ್ರೀಯ ಹೆದ್ದಾರಿ 369ರಲ್ಲಿ ಸೋಮವಾರ ಕಾರೊಂದು ಬೈಕ್‌ಗೆ ಡಿಕ್ಕಿ ಹೊಡೆದ ಪರಿಣಾಮ ಬೈಕ್ ಸವಾರ ಸ್ಥಳದಲ್ಲೇ ಮೃತಪಟ್ಟಿದ್ದಾರೆ.ತಾಲ್ಲೂಕಿನ ಕೊರಟಿಕೆರೆ ಗ್ರಾಮದ ನಿವಾಸಿ ರಾಜಪ್ಪ (65) ಮೃತ ವ್ಯಕ್ತಿ. ಚನ್ನಗಿರಿಯಿಂದ ಕೊರಟಿಕೆರೆ ಗ್ರಾಮಕ್ಕೆ ಬೈಕ್‌ನಲ್ಲಿ ತೆರಳುತ್ತಿರುವ ಸಮಯದಲ್ಲಿ ವೇಗವಾಗಿ ಬಂದ ಕಾರು ಬೈಕ್‌ಗೆ ಮುಖಾಮುಖಿ ಡಿಕ್ಕಿ ಹೊಡೆದ ಪರಿಣಾಮ ಈ ಅವಘಡ ಸಂಭವಿಸಿದೆ. ಚನ್ನಗಿರಿ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ ಎಂದು ಪಿಐ ಕೆ.ಎನ್. ರವೀಶ್ ತಿಳಿಸಿದ್ದಾರೆ

# ಅಂಗವಿಕಲರಿಗಾಗಿ ಉದ್ಯೋಗ ಮೇಳ ಯಶಸ್ವಿ




**ದಾವಣಗೆರೆ:** ಅಂತಾರಾಷ್ಟ್ರೀಯ ಅಂಗವಿಕಲರ ದಿನಾಚರಣೆ ಅಂಗವಾಗಿ ವಡ್ಡಿನಹಳ್ಳಿಯಲ್ಲಿರುವ ಅಂಗವಿಕಲರ ಕೌಶಲ್ಯಾಭಿವೃದ್ಧಿ,ಪುನರ್ ವಸತಿ ಮತ್ತು ಸಬಲೀಕರಣದ ಗುರಿ ಹೊತ್ತ ಸಂಯುಕ್ತ ಪ್ರಾದೇಶಿಕ ಕೇಂದ್ರದಲ್ಲಿ( ಅಖಿಅ) ದಿವ್ಯಾಂಗರಿಗಾಗಿ ಉದ್ಯೋಗ ಮೇಳವು ನಿರ್ದೇಶಕ ಶ್ರೀ. ಕೆ.ಮಾರುತಿ ಕೃಷ್ಣ ಗೌಡರ ನೇತೃತ್ವದಲ್ಲಿ ಯಶಸ್ವಿಯಾಗಿ ನೆರವೇರಿತು.

ಮೇಳದಲ್ಲಿ ಸ್ಥಳೀಯ ದಿಗ್ಗಜರಾದ ಬಿ.ಎಸ್. ಚನ್ನಬಸಪ್ಪ & ಸನ್ಸ್, ಶಿ ಸೋಪ್ಸ್,ಆರ್‌ಜಿಎಸ್ ಗ್ರೂಪ್ ಆಫ್ ಇನ್‌ಸ್ಟಿಟ್ಯೂಷನ್ಸ್,ವಿಶಾಲ್ ಮಾರ್ಟ್ ಭಾಗವಹಿಸಿ ಜೊತೆಗೆ, ಬೆಂಗಳೂರಿನಿಂದ ಇ–ವಿಂದ್ಯ ಇನ್ಫೋಮೀಡಿಯಾ, ಎನೇಬಲ್–ಇಂಡಿಯಾ, ಅಸಿಸ್ಟೆಕ್ ಫೌಂಡೇಶನ್, ಡಾ. ರೆಡ್ಡಿ ಫೌಂಡೇಶನ್ ಸೂಕ್ತ ದಿವ್ಯಾಂಗರನ್ನು ಆಯ್ಕೆ ಮಾಡಿದರು.ಮೇಳದಲ್ಲಿ 85 ದಿವ್ಯಾಂಗರೂ ಸೇರಿದಂತೆ 169 ಜನ ಭಾಗವಹಿಸಿದ್ದರು.

ನಿರ್ದೇಶಕ ಶ್ರೀ. ಕೆ. ಮಾರುತಿ ಕೃಷ್ಣ ಗೌಡರವರು ಸ್ವಾಗತ ಭಾಷಣ ಮಾಡಿ, ಉದ್ಯೋಗದಾತರನ್ನು, ಅಂಗವಿಕಲ ಉದ್ಯೋಗಾಕಾಂಕ್ಷಿಗಳು ಮತ್ತು ಪೋಷಕರನ್ನು ಅವರ ಕಾಳಜಿ, ಪರಿಶ್ರಮಕ್ಕಾಗಿ ಹೊಗಳಿದರು. ಕೇಂದ್ರದ ಗುರಿ, ಪುನರ್ವಸತಿ ಸೇವೆಗಳು, ಉಚಿತ ಸಹಾಯಕ ಸಾಧನಗಳ ವಿತರಣೆ, ದೀರ್ಘಾವಧಿಯ ಕೋರ್ಸ್‌ಗಳು, ತರಬೇತಿ ಕಾರ್ಯಕ್ರಮಗಳಂತಹ ಸೇವಾ ಚಟುವಟಿಕೆಗಳ ಕುರಿತು ಉಪನ್ಯಾಸಕ ಶ್ರೀ. ಜನಾರ್ದನ ಪಾತ್ರ ವಿವರಿಸಿದರು.

ದಾವಣಗೆರೆಯ ಜಿಲ್ಲಾ ಅಂಗವಿಕಲರ ಕಲ್ಯಾಣ ಅಧಿಕಾರಿ ಡಾ. ಕೆ. ಕೆ ಪ್ರಕಾಶ್ ಕೇಂದ್ರದ ಸಿಬ್ಬಂದಿಯ ಶ್ರಮ ಮತ್ತು ಕಾರ್ಯತತ್ಪರತೆಯನ್ನು ಮುಕ್ತಕಂಠದಿಂದ ಹೊಗಳಿದರು. ದಾ.ವಿ.ವಿ. ಸಮಾಜ ಕಾರ್ಯವಿಭಾಗದ ಸಹಾಯಕ ಪ್ರೊಫೆಸರ್ ಡಾ. ತಿಪ್ಪೇಸ್ವಾಮಿ, ದಿವ್ಯಾಂಗರಿಗೆ ಲಭ್ಯವಿರುವ ಅವಕಾಶಗಳ ಕುರಿತು, ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯ ಶ್ರೀಮತಿ ಗ್ಲೋರಿಯಾ ಇಂಥ ಶಿಬಿರಗಳ ಸಾರ್ಥಕತೆ ಕುರಿತು ಮಾತನಾಡಿದರು. ಅಸಿಸ್ಟೆಕ್ ಫೌಂಡೇಶನ್‌ನ ಸಹಾಯಕ ನಿರ್ದೇಶಕರಾದ ಶ್ರೀ ಕಾರ್ತಿಕ್ ಅವರು ಉದ್ಯೋಗಾಕಾಂಕ್ಷಿ ಅಂಗವಿಕಲರಿಗೆ ಸಂದರ್ಶನ ತಯಾರಿ ಕುರಿತು ಸಲಹೆಗಳನ್ನು ನೀಡಿದರು.

ಪಿಎಂಡಿಕೆ–ಸಿಆರ್‌ಸಿ ವತಿಯಿಂದ 15 ಅಂಗವಿಕಲರಿಗೆ ಸ್ಮಾರ್ಟ್ ಫೋನ್‌ಗಳು, ಸುಗಮ್ಯ ಕೋಲುಗಳು ಮತ್ತು ಶ್ರವಣ ಸಾಧನಗಳಂತಹ 30 ಸಹಾಯಕ ಸಾಧನಗಳನ್ನು ನೀಡಲಾಯಿತು.ಕಾರ್ಯಕ್ರಮದ ಯಶಸ್ಸಿಗೆ ಶ್ರೀ ಜನಾರ್ದನ ಪಾತ್ರ, ಶ್ರೀ ಕನಕಸಬಾಪತಿ, ಸುರೇಶ್ ಚಂದ್ರ ಕೇಶ್ರಿ ಮತ್ತು ಸಿಆರ್‌ಸಿ ಅಧ್ಯಾಪಕ, ಅಧ್ಯಾಪಕೇತರರು ಶ್ರಮಿಸಿದರು. ನಾಳೆ ದಿ. 3 ರಂದು ಬೆ.8.30 ರಿಂದ ಜಾಗೃತಿ ಜಾಥಾ ಆಯೋಜಿಸಲಾಗಿದ್ದು, 11.00 ಗಂಟೆಗೆ ಕೇಂದ್ರದಲ್ಲಿ ಸಮಾರೋಪ ಜರುಗಲಿದೆ.

# ಶ್ರೀ ಸೀತಾ ಕಲ್ಯಾಣ ಶತಮಾನೋತ್ಸವ



**ಶಿವಮೊಗ್ಗ:** ನಗರದ ಕೋಟೇ ಶ್ರೀ ಸೀತಾ ರಾಮಾಂಜನೇಯ ಸ್ವಾಮಿ ದೇವಾಲಯದ ಶ್ರೀ ಸೀತಾ ಕಲ್ಯಾಣ ಶತಮಾನೋತ್ಸವ ಸಮಿತಿ ಆಶ್ರಯದಲ್ಲಿ ಡಿ.07ರ ಭಾನುವಾರದಿಂದ ಜ.05ರ ಸೋಮವಾರದ ವರೆಗೆ ಶ್ರೀ ಸೀತಾ ಕಲ್ಯಾಣ ಶತಮಾನೋತ್ಸವ ಹಾಗೂ ಕೋಟಿತ್ರಯ ರಾಮನಾಮಾರ್ಚನ ಮಹೋತ್ಸವವನ್ನು ಆಯೋಜಿಸಲಾಗಿದೆ.

ಇದರ ಅಂಗವಾಗಿ ಒಂದು ತಿಂಗಳ ಪರ್ಯಂತ ವಿವಿಧ ಧಾರ್ಮಿಕ ಹಾಗೂ ಸಾಂಸ್ಕೃತಿಕ, ಆಧ್ಯಾತ್ಮಿಕ ಕಾರ್ಯಕ್ರಮಗಳು ನಡೆಯಲಿದ್ದು, 07ರ ಬೆಳಿಗ್ಗೆ ಮಹಾ ಸಂಕಲ್ಪ ಹಾಗೂ ನವಗ್ರಹ ಪೂಜೆಯ ಮೂಲಕ ಚಾಲನೆ ನೀಡಲಾಗುತ್ತಿದೆ.


ಡಿ. 08ರಿಂದ 17ರವರೆಗೆ ಶ್ರೀ ಭಾಗವತ ಮಹಾ ಪುರಾಣ ಹೋಮ ನಡೆಯಲಿದ್ದು, ಇದೇ ಸಂದರ್ಭದಲ್ಲಿ ಬೆಂಗಳೂರಿನ ಹೆಚ್. ಆರ್. ಶ್ರೀಧರ್‌ರವರಿಂದ ಪ್ರತಿನಿತ್ಯ ಸಂಜೆ 06.30ಕ್ಕೆ ಭಾಗವತ ಸಪ್ತಾಹ ಉಪನ್ಯಾಸ ನಡೆಯಲಿದೆ. ಡಿ.15ರಿಂದ 17ರವರೆಗೆ ಕಲ್ಲಾಪುರದ ಪವಮಾನ ಆಚಾರ್‌ರವರಿಂದ ವಿಷ್ಣುವಿನ ದಶಾವತಾರ ಕುರಿತು ಉಪನ್ಯಾಸ ಹಾಗೂ ದಶಾವತಾರ ಉತ್ಸವ ನಡೆಯಲಿದೆ.

ಡಿ. 18ರಂದು ಸಪ್ತ ಚಿರಂಜೀವಿಗಳ ಪೂಜೆ ಹೋಮ ನಡೆಯಲಿದ್ದು, ಸಂಜೆ ಮತ್ತೂರು ಸನತ್‌ಕುಮಾರ್, ಅಚ್ಯುತ ಅವಧಾನಿಯವರಿಂದ ಸೀತಾ ಕಲ್ಯಾಣ ಗಮಕ ವಾಚನ ವ್ಯಾಖ್ಯಾನ, ಡಿ. 19ರಂದು ಎಳ್ಳು ಅಮಾವಾಸ್ಯೆ ಭಾಗವಾಗಿ ಶಕ್ತಿದೇವತೆಗಳ ಸಮಾವೇಶ, 20ರಂದು ಮಾರುತಿ ಹೋಮ, ಸಂಜೆ ಉಸ್ತಾದ್ ಹುಮಾಯೂನ್ ಹರ್ಲಾಪುರ, ನೌಷಾದ್ ಹರ್ಲಾಪುರ, ನಿಷದ್ ಹರ್ಲಾಪುರರವರಿಂದ ಹಿಂದೂಸ್ಥಾನೀ ಸಂಗೀತ, ದಾಸವಾಣಿ ಕಾಯಕ್ರಮ ನಡೆಯಲಿದೆ.

ಡಿ. 21ರಂದು ಶ್ರೀ ಗಾಯತ್ರಿ ಹೋಮ, ಸಂಜೆ ಅರುಣ್ ಕುಮಾರ್ ಮತ್ತು ಸಂಗಡಿಗರಿಂದ ಭಕ್ತಿ ಸಂಕೀರ್ತನೆ, 22ರಂದು ವಿಷ್ಣು ಸಹಸ್ರನಾಮ ಹೋಮ, ಮೈಸೂರಿನ ಎಂ.ಜಿ. ಶ್ರೀಧರ್ ಸಂಗಡಿಗರಿಂದ ನಾಗಸ್ವರ, 23ರಂದು ಲಲಿತಾ ಸಹಸ್ರನಾಮ ಹೋಮ, ಸಂಜೆ ನೃತ್ಯಗುರು ಸೌಮ್ಯ ರಂಗಸ್ವಾಮಿಯವರ ನವಭಾವ್ ಸ್ಕೂಲ್ ಆ- ಆರ್ಟ್‌ನ ವಿದ್ಯಾರ್ಥಿಗಳಿಂದ ನೃತ್ಯ ವೈಭವ, 24ರಂದು ಶ್ರೀಲಕ್ಷ್ಮೀ ನರಸಿಂಹ ಹೋಮ, ಸಂಜೆ ಶೃಂಗೇರಿ ಹೆಚ್. ಎಸ್. ನಾಗರಾಜ್‌ರವರಿಂದ ಕರ್ನಾಟಕ ಶಾಸ್ತ್ರೀಯ ಸಂಗೀತ, 25ರಂದು ಶ್ರೀ ಲಕ್ಷ್ಮೀ ಹಯಗ್ರೀವ ಹೋಮ ಸಂಜೆ ಸಹನಾ ಚೇತನ್ ತಂಡದವರಿಂದ ಭರತ ನಾಟ್ಯ, 26ರಂದು ಶ್ರೀ ಸೂಕ್ತ ಹೋಮ, ಸಂಜೆ ಬೆಂಗಳೂರಿನ ಸೂಕ್ತ ಪಟ್ಟಾಭಿರಾಮನ್, ವಾಸುಕಿ ವೈಭವ್ ತಂಡದವರಿಂದ ಸಂಗೀತ ಸಂಜೆ, 27ರಂದು ಶ್ರೀ ವೈನತೇಯ ಮಂತ್ರ ಹೋಮ ಸಂಜೆ ವಿದುಷಿ ಸಂಭ್ರಮ ಹೆಚ್. ಎಸ್. ತಂಡದವರಿಂದ ಕರ್ನಾಟಕ ಶಾಸ್ತ್ರೀಯ ಸಂಗೀತ, 28ರಂದು ವರಾಹಸ್ವಾಮಿ ಮಂತ್ರ ಹೋಮ, ಸಂಜೆ ಗಜೇಂದ್ರ ಮೋಕ್ಷ, 29ರಂದು ಉತ್ಸವ ರಾಮರಿಗೆ ಅಭಿಷೇಕ, ಸಂಜೆ ವೈಭವದ ಸೀತಾ ಕಲ್ಯಾಣ ಮಹೋತ್ಸವ, 30ರಂದು ವೈಕುಂಠ ಏಕಾದಶೀ, ಆನೆ ಉತ್ಸವ ಸಂಜೆ ಕುಮಾರ ಸ್ವಾಮಿ ಸಂಗಡಿಗರಿಂದ ನಾದ ವೈಭವ–ಸ್ಯಾಕ್ಸೋಫೋನ್ ವಾದನ, 31ರಂದು ತೀರ್ಥ ಸ್ನಾನ, ಬೆಳ್ಳಿ ಮಂಟಪದಲ್ಲಿ ರಾಜಬೀದಿ ಉತ್ಸವ, ಜ.01ರಂದು ಸುದರ್ಶನ ಹೋಮ, ಉರುಟಣೆ, 108 ಸತ್ಯನಾರಾಯಣ ವ್ರತ, 02ರಂದು ಪಲ್ಲಕ್ಕಿ ಉತ್ಸವ ಶ್ರೀವತ್ಸ ಸಂಗಡಿಗರಿಂದ ವೇಣುವಾದನ,ಶಯನೋತ್ಸವ, 03ರಂದು ಶ್ರೀ ಧನ್ವಂತರಿ ಹೋಮ, ಸಂಜೆ ತುಂಗಾ ತೀರದಲ್ಲಿ ತೆಪ್ಪೋತ್ಸವ, 04ರಂದು ಮಹಾಭಿಷೇಕ, ಮೋಹಿನಿ ಅಲಂಕಾರ, ಕೋಟಿ ತ್ರಯ ನಾಮಾರ್ಚನೆ ಸಮಾರೋಪ ಮತ್ತು 05ರಂದು ರಾಮತಾರಕ ಮಂತ್ರ ಹೋಮ, ಮಹಾಭಿಷೇಕ, ಕಿರೀಟ ಸಮರ್ಪಣೆ ಹಾಗೂ ಸಂಜೆ ಪ್ರಾಕಾರೋತ್ಸವ ನಡೆಯಲಿದೆ.

ಭಕ್ತಾದಿಗಳು ಈ ಎಲ್ಲಾ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳುವಂತೆ ಶ್ರೀ ಸೀತಾ ಕಲ್ಯಾಣ ಶತಮಾನೋತ್ಸವ ಸಮಿತಿ ವಿನಂತಿಸಿದೆ.

# ದಿಢೀರನೆ ಬದಲಾದ ಹವಾಮಾನ, ಗಗನಕ್ಕೇರಿದ ತರಕಾರಿ ಬೆಲೆ



**ಬೆಂಗಳೂರು:** ರಾಜ್ಯದಲ್ಲಿ ದಿಢೀರನೇ ಬದಲಾದ ಹವಾಮಾನ ಹಾಗೂ ದ್ವಿತ್ವ ಚಂಡಮಾರುತದ ಪ್ರಭಾವ ತರಕಾರಿಗಳ ಮೇಲೆ ಬೀರಿದ್ದು ನುಗ್ಗೆಕಾಯಿಯು ಚಿಕನ್ ಮಟನ್‌ಗಿಂತ ದುಬಾರಿಯಾಗಿದೆ. ತರಕಾರಿಗಳಲ್ಲಿ ಪ್ರಮುಖ ಪಾತ್ರ ವಹಿಸಿರುವ ಹಾಗೂ ತರಕಾರಿ ಸಾಂಬರಿನ ರುಚಿ ಹೆಚ್ಚಿಸುವ ನುಗ್ಗೆಕಾಯಿ ಬೆಲೆ ಕೇಳಿದರೆ ಒಂದು ಕ್ಷಣ ಬಾಯಿ ಮೇಲೆ ಬೆರಳಿಟ್ಟುಕೊಳ್ಳುವಂತಾಗಿದೆ.

ಬರೋಬ್ಬರಿ ಕೆಜಿಗೆ 500 ರೂ. ಗಳಿಂದ 600 ರೂ.ಗಳಿಗೆ ಮಾರುಕಟ್ಟೆಗಳಲ್ಲಿ ಮಾರಾಟವಾಗುತ್ತಿದೆ. ಒಂದಕ್ಕೆ 50 ರೂ. ಗಳಿಂದ 60 ರೂ.ಗಳಂತೆ ಚಿಲ್ಲರೆಯಾಗಿ ಮಾರಾಟವಾಗುತ್ತಿದೆ. ಒಂದು ಕೆಜಿಗೆ 8 ರಿಂದ 10 ತೂಗುತ್ತವೆ. ಮಾರುಕಟ್ಟೆಯಲ್ಲಿ ಕೆಜಿ ಲೆಕ್ಕದಲ್ಲಿ ತಂದು ಕೆಲ ಚಿಲ್ಲರೆ ವ್ಯಾಪಾರಿಗಳು ಲಾಭದ ದೃಷ್ಟಿಯಿಂದ ಬಿಡಿಯಾಗಿ ಮಾರಾಟ ಮಾಡುತ್ತಿದ್ದಾರೆ.

ಮಾರುಕಟ್ಟೆಗಳಲ್ಲಿ ತರಕಾರಿ ಕೊಳ್ಳಲು ಬರುವ ಗ್ರಾಹಕರು ನುಗ್ಗೆಕಾಯಿ ಬೆಲೆ ಕೇಳುತ್ತಿದ್ದಂತೆ ಇದರ ಸಹವಾಸವೇ ಬೇಡ ಎಂದು ದೂರವಾಗುತ್ತಿದ್ದಾರೆ.ಸಾಮಾನ್ಯವಾಗಿ ನವೆಂಬರ್ ಹಾಗೂ ಡಿಸೆಂಬರ್ ತಿಂಗಳಲ್ಲಿ ನುಗ್ಗೆಕಾಯಿ ಬೆಳೆ ಇಳುವರಿ ಕಡಿಮೆ ಇರುತ್ತದೆ. ಜೊತೆಗೆ ಹವಾಮಾನ ವೈಪರೀತ್ಯದಿಂದಲೂ ಸಹ ಬೆಳೆಯ ಮೇಲೆ ವ್ಯಾಪಕ ಪರಿಣಾಮ ಬೀರಿದ್ದು, ಇಳುವರಿ ಕುಂಠಿತವಾಗಿದೆ. ನೆರೆಯ ತಮಿಳಿನಾಡಿನಿಂದ ಅಪಾರ ಪ್ರಮಾಣದಲ್ಲಿ ಬೆಂಗಳೂರಿಗೆ ಬರುತ್ತಿದ್ದ ನುಗ್ಗೆ ಗಣನೀಯವಾಗಿ ಇಳಿಮುಖವಾಗಿದ್ದು, ಮಾರುಕಟ್ಟೆಯೆಲ್ಲಾ ಹುಡುಕಾಡಿದರೂ ನುಗ್ಗೆ ಕಾಣದಂತಾಗಿದೆ.

ಇದರ ಜೊತೆಗೆ ಇತರೆ ತರಕಾರಿಗಳ ಬೆಲೆಯೂ ಸಹ ದುಬಾರಿಯಾಗಿದ್ದು, ಕಳೆದ ಒಂದು ತಿಂಗಳಿನಿಂದಲೂ ಎಲ್ಲಾ ತರಕಾರಿಗಳ ಬೆಲೆ ಸ್ಥಿರತೆ ಕಾಯ್ದುಕೊಂಡಿದ್ದು, ಎಲ್ಲಾ ತರಕಾರಿಗಳ ಬೆಲೆ 50 ರೂ. ಮೇಲೆಯೇ ಇವೆ.

ಅವರೆಕಾಯಿ ಕೆಜಿಗೆ 60 ರೂ., ಹುರಳಿಕಾಯಿ 80 ರೂ., ಕ್ಯಾರೆಟ್ 80 ರೂ., ಬೀಟರೂಟ್ 60 ರೂ., ಬೆಂಡೆಕಾಯಿ 80 ರೂ., ಟೊಮ್ಯಾಟೊ 50 ರೂ., ಮೆಣಸಿನಕಾಯಿ 80 ರೂ., ಬದನೆಕಾಯಿ 70 ರೂ., ಗಳಿಗೆ ಮಾರಾಟವಾಗುತ್ತಿದ್ದರೆ, ಈರುಳ್ಳಿ 100 ರೂ. ಗಳಿಗೆ 4 ರಿಂದ 5 ಕೆಜಿಗೆ ಚಿಲ್ಲರೆಯಾಗಿ ಮಾರಾಟ ಮಾಡಲಾಗುತ್ತಿದೆ.

# ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ಪದಾಧಿಕಾರಿ ಸದಸ್ಯರ ನೇಮಕ

**ದಾವಣಗೆರೆ :** ರೆಡ್ ಕ್ರಾಸ್ ಜಿಲ್ಲಾ ಶಾಖೆಯ ವಿಶೇಷ ಸಭೆಯು ಸಂಸ್ಥೆಯ ಅಧ್ಯಕ್ಷರು ಹಾಗೂ ಜಿಲ್ಲಾಧಿಕಾರಿಗಳಾದ ಗಂಗಾಧರ ಸ್ವಾಮಿ.ಜಿ.ಎಂ ಅವರ ಅಧ್ಯಕ್ಷತೆಯಲ್ಲಿ ನವಂಬರ್ 13 ರಂದು ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ಸಭೆ ನಡೆಸಲಾಯಿತು.

ಸಭೆಯಲ್ಲಿ 21 ಸದಸ್ಯರ ಆಡಳಿತ ಮಂಡಳಿಯನ್ನು ಅನುಮೋದಿಸಲಾಯಿತು. ನೂತನ ಆಡಳಿತ ಮಂಡಳಿ ಸದಸ್ಯರಾದ ಕಿರಣ್ ಎಂ ಜೈನ್, ಶಿವಕುಮಾರ್ ಬೆಳ್ಳೂಡಿ, ಯುವರಾಜ್ ಎಂ ಬಿ., ಬಿ ಜಿ ಭಾರತ್, ಆರ್ ಬಿ ದತ್ತರಾಜು, ಸಂತೋಷ್ ಎಂ ಹಳ್ಳಿಕೇರಿ, ವಿಶ್ವಾಸ್ ಹೆಚ್ ಪಿ. ಆನಂದಪ್ಪ ಸಂಗಪ್ಪ ಜಿರಲಿ, ಹೆಚ್ ಎಸ್ ಯೋಗೇಶ್, ಧನಂಜಯಮೂರ್ತಿ, ವರುಣ್ ಬೆಣ್ಣೆಹಳ್ಳಿ, ಡಾ: ಜಿ

ಯ.ಡಿ.ರಾಘವನ್, ಡಾ। ಕೆ.ಕೆ ಪ್ರಕಾಶ್. ಶ್ರೀ ಮಂಜುನಾಥ್ ಗಡಿಗುಡಾಳ್, ವೀರೇಶ್ ಪಟೇಲ್, ರಾಜೇಂದ್ರಕುಮಾರ್ (ರಾಜು ಭಂಢಾರಿ), ಉಮೇಶ್ ಶೆಟ್ಟಿ, ಶ್ರೀಕಾಂತ್ ಬಂಗೇರಾ, ಅನಿಲ್ ಬಾರೆಂಗಲ್, ಪ್ರಕಾಶ್ ಪಾಟೀಲ್, ರತನ್ ಎಸ್.

ಇದೇ ಸಭೆಯಲ್ಲಿ ಜಿಲ್ಲಾ ಶಾಖೆಯ ಪಾದಾಧಿಕಾರಿಗಳನ್ನು ಆಯ್ಕೆ ಮಾಡಲಾಗಿದ್ದು ಸಭಾಪತಿ ಸ್ಥಾನಕ್ಕೆ ಸಿಎ ಉಮೇಶ್ ಶೆಟ್ಟಿ, ಪ್ರಕಾಶ್ ಪಾಟೀಲ್, ಕಾರ್ಯದರ್ಶಿಯಾಗಿ ಡಾ.ಧನಂಜಯ ಮೂರ್ತಿ ಮತ್ತು ಖಜಾಂಚಿಯಾಗಿ ರಾಜೇಂದ್ರ ಕುಮಾರ್' (ರಾಜು ಭಂಡಾರಿ) ಅವರನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು. ಜಿಲ್ಲಾಧಿಕಾರಿಗಳ ನಿರ್ದೇಶನದಂತೆ ನೂತನ ಪದಾಧಿಕಾರಿಗಳಿಗೆ ಆಡ್ ಹಾಕ್ ಸಮಿತಿ ಮುಖ್ಯಸ್ಥರಾದ ಡಾ। ಜಿ.ಡಿ ರಾಘವನ್ ಅವರು ಜಿಲ್ಲಾ ಶಾಖೆಯ ಆಡಳಿತ ಪ್ರಭಾರವನ್ನು ಹಸ್ತಾಂತರಿಸಿದರು ಎಂದು ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ಕಾರ್ಯದರ್ಶಿ ತಿಳಿಸಿದ್ದಾರೆ.

# ಕಾನೂನು ಪದವೀಧರರಿಂದ ಅರ್ಜಿ ಆಹ್ವಾನ

**ಹಾವೇರಿ:** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ತರಬೇತಿಗೆ ಹಿಂದುಳಿದ ವರ್ಗಗಳ ಕಾನೂನು ಪದವಿಧರರಿಂದ ಅರ್ಜಿ ಆಹ್ವಾನಿಸಲಾಗಿದೆ.

ಅಭ್ಯರ್ಥಿಯು ಹಾವೇರಿ ಜಿಲ್ಲೆಯವರಾಗಿರಬೇಕು, ಪ್ರವರ್ಗ–1ರ ಅಭ್ಯರ್ಥಿಗಳ ವಯಸ್ಸು ಅರ್ಜಿ ಸಲ್ಲಿಸುವ ಕೊನೆಯ ದಿನಾಂಕಕ್ಕೆ 31 ವರ್ಷ ಹಾಗೂ ಇತರೆ ಪ್ರವರ್ಗಗಳ ಅಭ್ಯರ್ಥಿಗಳ ವಯಸ್ಸು 30 ವರ್ಷದೊಳಗಿರಬೇಕು. ಪ್ರವರ್ಗ–1ರ ಅಭ್ಯರ್ಥಿಗಳ ವಾರ್ಷಿಕ ಆದಾಯ ರೂ.3.50 ಲಕ್ಷದೊಳಗಿರಬೇಕು ಜಾತಿ ಪ್ರವರ್ಗ–2ಎ, 3ಎ, 3ಬಿ ಅಭ್ಯರ್ಥಿಗಳ ವಾರ್ಷಿಕ ಆದಾಯ ರೂ.2.50 ಲಕ್ಷದೊಳಗಿರಬೇಕು.

ತರಬೇತಿ ಅವಧಿ ನಾಲ್ಕು ವರ್ಷಗಳಾಗಿದ್ದು, ತರಬೇತಿ ಅವಧಿಯಲ್ಲಿ ಮಾಹೆಯಾನ ರೂ.4,000 ತರಬೇತಿ ಭತ್ಯೆ ನೀಡಲಾಗುವುದು. ಆಯ್ಕೆಯಾದ ಅಭ್ಯರ್ಥಿಗಳನ್ನು ಜಿಲ್ಲಾ ಪಬ್ಲಿಕ್ ಪ್ರಾಸಿಕ್ಯೂಟರ್, ಸರ್ಕಾರಿ ವಕೀಲರು ಅಥವಾ ಕನಿಷ್ಠ 20 ವರ್ಷಗಳ ವಕೀಲ ವೃತ್ತಿಯಲ್ಲಿ ಅನುಭವವುಳ್ಳ ಯಾವುದೇ ವಕೀಲರ ಅಧೀನದಲ್ಲಿ ತರಬೇತಿಗೆ ನಿಯೋಜಿಸಲಾಗುವುದು.

ಎಸ್.ಎಸ್.ಎಲ್.ಸಿ.ಅಂಕಪಟ್ಟಿ, ಕಾನೂನು ಪದವಿದಯಲ್ಲಿ ಪಡೆದ ಅಂಕಪಟ್ಟಿಗಳು, ಪಾಸಿಂಗ್ ಸರ್ಟಿಫಿಲೇಟ್ ಜಾತಿ ಮತ್ತು ಆದಾಯ ಪ್ರಮಾಣಪತ್ರ,

ಬಾರ್ ಅಸೋಷಿಯೇನ್ ನೊಂದಾಯಿತ ಪ್ರಮಾಣಪತ್ರ ಸೇರಿದಂತೆ ಅಗತ್ಯ ದಾಖಲೆಗಳೊಂದಿಗೆ ಭರ್ತಿಮಾಡಿದ ಅರ್ಜಿಯನ್ನು ದಿನಾಂಕ 20–12–2025 ರೊಳಗಾಗಿ ಜಿಲ್ಲಾ ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಜಿಲ್ಲಾಡಳಿತ ಭವನ ಬಿ.ಬ್ಲಾಕ್, ರೂ.ನಂ.26 ಹಾವೇರಿ ಈ ವಿಳಾಸಕ್ಕೆ ಸಲ್ಲಿಸಬೇಕು. ಅವಧಿ ಮೀರಿಬಂದ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಕಚೇರಿ ದೂ.08375–249008 ಸಂಪರ್ಕಿಸಬಹುದೆಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಾಮನಿರ್ದೇಶನಗಳಿಗೆ ಅರ್ಜಿ ಆಹ್ವಾನ

**ಚಿತ್ರದುರ್ಗ:** ರಾಷ್ಟ್ರೀಯ ನೇರಳೆ ಉತ್ಸವ–ಕರ್ನಾಟಕ 2025ರ ನೇರಳೆ ಉತ್ಸವ ರಾಯಭಾರಿಗಳ ಆಯ್ಕೆ ನಾಮನಿರ್ದೇಶನಗಳಿಗೆ ಅರ್ಜಿ ಆಹ್ವಾನಿಸಲಾಗಿದೆ.

ವಿಕಲಚೇತನ ವ್ಯಕ್ತಿಗಳನ್ನು ಸಮಾಜದಲ್ಲಿ ಒಳಗೊಳ್ಳುವಂತೆ ಮಾಡುವುದು, ಅವರ ಘನತೆ ಮತ್ತು ಸಬಲೀಕರಣವನ್ನು ಸಾಬೀತು ಪಡಿಸುವುದರ ಮೂಲಕ ಅವರನ್ನು ಸಮಾಜದ ಮುಖ್ಯವಾಹಿನಿಗೆ ತರುವ ನಿಟ್ಟಿನಲ್ಲಿ ರಾಜ್ಯ ಆಯುಕ್ತರು, ಅಂಗವಿಕಲ ವ್ಯಕ್ತಿಗಳ ಹಕ್ಕುಗಳ ಅಧಿನಿಯಮ ಬೆಂಗಳೂರು ಕಛೇರಿಯಿಂದ ದಿನಾಂಕ:05–12–2025 ರಿಂದ ದಿ:07–12–2025ರ ವರೆಗೆ ಬೆಂಗಳೂರಿನ ಕಂಠೀರವ ಕ್ರೀಡಾಂಗಣದಲ್ಲಿ ರಾಷ್ಟ್ರೀಯ ನೇರಳೆ ಉತ್ಸವ ಕಾರ್ಯಕ್ರಮವನ್ನು ಆಚರಿಸಲಾಗುತ್ತಿದೆ.

ನೇರಳೆ ಬಣ್ಣವು ವಿಕಲಚೇತನರ ಹಕ್ಕುಗಳ ಚಳುವಳಿಯ ಮನೋಭಾವನೆಯನ್ನು ಪ್ರತಿನಿಧಿಸುತ್ತದೆ. ಇದು ನಮ್ಮ ರಾಷ್ಟ್ರಕ್ಕೆ ದಿವ್ಯಾಂಗ ಜನರ ಸೃಜನಶೀಲತೆ ಮತ್ತು ಕೊಡುಗೆಗಳ ಆಚರಣೆಯಾಗಿದೆ.

ಈ ಹಿನ್ನೆಲೆಯಲ್ಲಿ ವಿಕಲಚೇತನ ವ್ಯಕ್ತಿಗಳಿಗೆ ಸಮಾನ ಅವಕಾಶ ಕಲ್ಪಿಸುವ ಮೂಲಕ ಅವರನ್ನು ಮುಖ್ಯವಾಹಿನಿಗೆ ತರುವ ನಿಟ್ಟಿನಲ್ಲಿ ಜಿಲ್ಲೆಗಳಲ್ಲಿ ಶ್ರಮಿಸುತ್ತಿರುವ ವಿಕಲಚೇತನ ವ್ಯಕ್ತಿಗಳು ಅಥವಾ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿರುವ ವಿಕಲಚೇತನ ವ್ಯಕ್ತಿಗಳನ್ನು ಈ ಕಾರ್ಯಕ್ರಮದ ರಾಯಭಾರಿಗಳನ್ನಾಗಿ ಆಯ್ಕೆ ಮಾಡುವ ನಿಟ್ಟಿನಲ್ಲಿ ರಾಯಭಾರಿಗಳ ನಾಮ ನಿರ್ದೇಶನಕ್ಕೆ ಅರ್ಜಿ ಆಹ್ವಾನಿಸಲಾಗಿದೆ.

## ಕಾಂಗ್ರೆಸ್ ಮಾಜಿ ಶಾಸಕ ಆರ್.ವಿ.ದೇವರಾಜ್ ಇನ್ನಿಲ್ಲ



**ಬೆಂಗಳೂರು:** ಚಿಕ್ಕಪೇಟೆ ವಿಧಾನಸಭೆ ಕ್ಷೇತ್ರದ ಕಾಂಗ್ರೆಸ್ ಮಾಜಿ ಶಾಸಕ ಆರ್ ವಿ. ದೇವರಾಜ್ ಹೃದಯಾಘಾತದಿಂದ ನಿಧನ ಹೊಂದಿದ್ದಾರೆ. ಹೃದಯಾಘಾತ ಸಂಭವಿಸಿದ್ದು, ಕೂಡಲೇ ಮೈಸೂರಿನಲ್ಲಿರುವ ಅಪೋಲೋ ಆಸ್ಪತ್ರೆಗೆ ದಾಖಲಿಸಲಾಗಿದೆ. ಬಳಿಕ ಹೆಚ್ಚಿನ ಚಿಕಿತ್ಸೆಗಾಗಿ ಜಯದೇವ ಆಸ್ಪತ್ರೆಗೆ ಕರೆದೊಯ್ಯುವಾಗ ಕೊನೆಯುಸಿರೆಳೆದಿದ್ದಾರೆ. ಸದ್ಯ ವೈದ್ಯರು ಮೃತದೇಹವನ್ನು ಕುಟುಂಬದವರಿಗೆ ಹಸ್ತಾಂತರಿಸಿದ್ದಾರೆ. 1957ರ ಡಿಸೆಂಬರ್ 3ರಂದು ಆರ್.ವಿ.ದೇವರಾಜ್ ಜನಿಸಿದ್ದರು. ಶಿಕ್ಷಣದ ಬಳಿಕ 1989–99ರಲ್ಲಿ ಚಾಮರಾಜಪೇಟೆ ಶಾಸಕರಾಗಿದ್ದರು. 2000ರಿಂದ ಅಕ್ಟೋಬರ್ 2007ರವರೆಗೆ ಕೆಎಸ್‌ಆರ್‌ಟಿಸಿ ಅಧ್ಯಕ್ಷ, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಮತ್ತು ಎಐಸಿಸಿ ಸದಸ್ಯರಾಗಿದ್ದರು. 2008ರಲ್ಲಿ ಕ್ಷೇತ್ರ ಮರುವಿಂಗಡನೆಯಾದಾಗ ಎಸ್.ಎಂ ಕೃಷ್ಣಗೆ ಬೆಂಗಳೂರಲ್ಲಿ ಸ್ಪರ್ಧಿಸಲು ಕ್ಷೇತ್ರ ಬಿಟ್ಟು–ಕೊಡುತ್ತಾರೆ. ಚಾಮರಾಜಪೇಟೆ ಕ್ಷೇತ್ರ ಆ ಸಮಯದಲ್ಲಿ ಕಾಂಗ್ರೆಸ್‌ಗೆ ಪೂರಕವಾಗಿತ್ತು. ಎಸ್.ಕೃಷ್ಣ ಸಿಎಂ ಆಗಿದ್ದಾಗ ಆರ್.ವಿ ದೇವರಾಜ್ ಆಪ್ತರಾಗಿದ್ದರು. ಬಳಿಕ ಚಿಕ್ಕಪೇಟೆ ಕ್ಷೇತ್ರ ಚುನಾವಣೆ ಸ್ಪರ್ಧಿಸಿದ್ದರು.ಚಾಮರಾಜಪೇಟೆ ಕ್ಷೇತ್ರದ ಶಾಸಕರಾಗಿ ಸೇವೆ ಸಲ್ಲಿಸಿದ್ದರು. ಚಾಮರಾಜಪೇಟೆ ಕ್ಷೇತ್ರದ ಕ್ಷೇತ್ರ ಪುನರ್ವಿಂಗಡಣೆ ನಂತರ ಚಿಕ್ಕಪೇಟೆಯ ಕಾಂಗ್ರೆಸ್ ಅಭ್ಯರ್ಥಿಯಾಗಿದ್ದರು. ಬಳಿಕ 2016ರಲ್ಲಿ ಕೊಳಚೆ ಪ್ರದೇಶ ಅಭಿವೃದ್ಧಿ ಮಂಡಳಿಯ ಅಧ್ಯಕ್ಷರಾಗಿದ್ದರು. ಮಾಜಿ ಶಾಸಕ ಆರ್‌ವಿ. ದೇವರಾಜ್ ಅವರ ಅಗಲಿಕೆ ರಾಜಕೀಯ ನಾಯಕರು ಕಂಬನಿ ಮಿಡಿದಿದ್ದಾರೆ. ಈ ಕುರಿತಾಗಿ ಡಿಸಿಎಂ ಡಿಕೆ ಶಿವಕುಮಾರ್ ಟ್ವೀಟ್ ಮಾಡಿದ್ದು, ಚಿಕ್ಕಪೇಟೆ ಮಾಜಿ ಶಾಸಕ ಮತ್ತು ಹಿರಿಯ ಕಾಂಗ್ರೆಸ್ ನಾಯಕ ಶ್ರೀ ಆರ್.ವಿ.ದೇವರಾಜ್ ಅವರ ನಿಧನದ ಸುದ್ದಿ ತೀವ್ರ ದುಃಖ ತಂದಿದೆ.

# ರಾಜಕೀಯ ದ್ವೇಷಕ್ಕೆ ಕಿರುಕುಳ; ಜೈಲಿಗೆ ಹಾಕಿದರೂ ರಾಹುಲ್ ಗಾಂಧಿ ಹಿಂಜರಿಯಲ್ಲ : ಡಿ.ಕೆ.ಶಿವಕುಮಾರ್

**ಬೆಂಗಳೂರು:** ರಾಜಕೀಯ ದ್ವೇಷಕ್ಕಾಗಿ ಕೇಂದ್ರ ಸರ್ಕಾರ ತನಿಖಾ ಸಂಸ್ಥೆಗಳನ್ನು ದುರ್ಬಳಕೆ ಮಾಡಿಕೊಂಡು ರಾಹುಲ್ ಗಾಂಧಿ ಅವರಿಗೆ ಕಿರುಕುಳ ನೀಡುತ್ತಿದೆ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು. ರಾಹುಲ್ ಗಾಂಧಿ ಅವರ ಮೇಲೆ ನ್ಯಾಷನಲ್ ಹೆರಾಲ್ಡ್ ಪ್ರಕರಣದಲ್ಲಿ ಎಫ್‌ಐಆರ್ ದಾಖಲಿಸಿರುವ ಬಗ್ಗೆ ವಿಧಾನಸೌಧದಲ್ಲಿ ಮಾಧ್ಯಮಗಳ ಪ್ರಶ್ನೆಗಳಿಗೆ ಶಿವಕುಮಾರ್ ಅವರು ಸೋಮವಾರ ಪ್ರತಿಕ್ರಿಯೆ ನೀಡಿದರು.

ಇದು ಅನ್ಯಾಯ. ಯಾರಿಗೆ ಆಗಲಿ ಕಿರುಕುಳ ನೀಡುವುದಕ್ಕೆ ಒಂದು ಮಿತಿ ಇದೆ. ಈ ಪ್ರಕರಣದಲ್ಲಿ ಕಿರುಕುಳ ನೀಡುವ ಅಗತ್ಯವಿಲ್ಲ. ನ್ಯಾಷನಲ್ ಹೆರಾಲ್ಡ್ ಸೋನಿಯಾ ಗಾಂಧಿ ಅಥವಾ ರಾಹುಲ್ ಗಾಂಧಿ ಅವರ ಆಸ್ತಿಯಲ್ಲ. ಪಕ್ಷದ ಅಧ್ಯಕ್ಷ ಸ್ಥಾನದಲ್ಲಿದ್ದ ಕಾರಣಕ್ಕೆ ಅವರು ಈ ಸಂಸ್ಥೆಯ ಷೇರುಗಳ ಪಾಲಕರಾಗಿದ್ದರು. ನಾನು ಹಾಗೂ ಸಿಎಂ ಅವರೂ ಕೂಡ ವಿವಿಧ ನಿಗಮ, ಮಂಡಳಿಗಳ ಅಧ್ಯಕ್ಷರಾಗಿದ್ದೇವೆ. ಅಧ್ಯಕ್ಷರಾದ ಹಿನ್ನೆಲೆಯಲ್ಲಿ ಅವರ ಹೆಸರಿನಲ್ಲಿ ಕನಿಷ್ಠ 1–2 ಷೇರುಗಳು ಇರುತ್ತವೆ. ನಮ್ಮ ಅಧಿಕಾರ ಮುಗಿದ ನಂತರ ಈ ಷೇರುಗಳು ವರ್ಗಾವಣೆಯಾಗುತ್ತದೆ. ಅದೇ ರೀತಿ ನಮ್ಮ ನಾಯಕರು ಕಾಂಗ್ರೆಸ್ ಪಕ್ಷದ ಅಧ್ಯಕ್ಷರಾಗಿದ್ದ ಕಾರಣ, ಜವಹಾರ್ ಲಾಲ್ ನೆಹರೂ ಅವರ ಕಾಲದಿಂದ ನಡೆದುಕೊಂಡು ಬಂದಿರುವ ಪ್ರತೀತಿಯಂತೆ ನ್ಯಾಷನಲ್ ಹೆರಾಲ್ಡ್ ಸಂಸ್ಥೆಯ ಜವಾಬ್ದಾರಿ ಹೊತ್ತಿರುತ್ತಾರೆ? ಎಂದು ವಿವರಿಸಿದರು.

ಯಂಗ್ ಇಂಡಿಯಾ ಅಗಲಿ, ನ್ಯಾಷನಲ್ ಹೆರಾಲ್ಡ್ ಆಗಲಿ ನಮ್ಮ ವೈಯಕ್ತಿಕ ಆಸ್ತಿಯಲ್ಲ ಎಂದು ಅವರು ಈಗಾಗಲೇ ಘೋಷಿಸಿದ್ದಾರೆ. ಇದು ಕಾಂಗ್ರೆಸ್ ಪಕ್ಷದ ಆಸ್ತಿ. ಕಾಂಗ್ರೆಸ್ ಪಕ್ಷದ ಪಾಲಕರು ಅವರಾಗಿದ್ದಾರೆ. ಇಲ್ಲಿ ಅನೇಕ ಸದಸ್ಯರುಗಳು ಇದ್ದಾರೆ. ಮೊರಾರ್ಜಿ ಅವರು, ಅಹ್ಮದ್ ಪಟೇಲ್ ಅವರ ಕಾಲದಲ್ಲಿ ಕಾಂಗ್ರೆಸ್ ಪಕ್ಷದ ಹಿತಕ್ಕಾಗಿ ಕೆಲವು ನಿರ್ಧಾರ



ಕೈಗೊಳ್ಳಲಾಗಿತ್ತು. ಕೇಸರಿ ಅವರ ಕಾಲದಲ್ಲಿ ಪಕ್ಷ ಸಂಕಷ್ಟದ ಸಮಯದಲ್ಲಿದ್ದಾಗ, ಕಾಂಗ್ರೆಸ್ ಪಕ್ಷದ ನಾಯಕರಾದ ನಾವುಗಳು ಸೋನಿಯಾ ಗಾಂಧಿ ಅವರ ಮುಂದೆ ಹೋಗಿ ಪಕ್ಷದ ಜವಾಬ್ದಾರಿ ವಹಿಸಿಕೊಳ್ಳುವಂತೆ ಬೇಡಿಕೊಂಡೆವು. ಅವರು ನೇತೃತ್ವ ವಹಿಸಿದ ನಂತರ ನಮ್ಮ ಪಕ್ಷ ದೇಶದ ಅತ್ಯುತ್ತಮ ಆರ್ಥಿಕ ತಜ್ಞರ ಮುಂದಾಳತ್ವದಲ್ಲಿ 10 ವರ್ಷ ಆಡಳಿತ ನಡೆಸಿದೆ. ಈಗ ರಾಜಕೀಯವಾಗಿ ಕಿರುಕುಳ ನೀಡಲು ಈ ರೀತಿ ಮಾಡಲಾಗುತ್ತಿದೆ.

ಇತಿಹಾಸ ಮರುಕಳಿಸಲಿದೆ. ಅವರು ರಾಹುಲ್ ಗಾಂಧಿ ಅವರನ್ನು ಜೈಲಿಗೆ ಹಾಕಿದರೂ ಅವರು ಯಾವುದಕ್ಕೂ ತಲೆಕೆಡಿಸಿಕೊಳ್ಳುವುದಿಲ್ಲ. ಕೇಂದ್ರ ಸರ್ಕಾರದ ಈ ದ್ವೇಷ ರಾಜಕಾರಣ ಸರಿಯಲ್ಲ. ಇದರಿಂದ ಅವರಿಗೆ ಯಾವುದೇ ಪ್ರಯೋಜನ ಆಗುವುದಿಲ್ಲ ಎಂದು ಕೇಂದ್ರಕ್ಕೆ ಹೇಳಲು ಬಯಸುತ್ತೇನೆ. ಇದು ಕೇಂದ್ರ ಸರ್ಕಾರದ ನೈತಿಕತೆಯನ್ನಷ್ಟೇ ಕುಗ್ಗಿಸಲಿದೆ. ರಾಜಕೀಯವನ್ನು ನೇರಾನೇರವಾಗಿ ಜನರ ಮಧ್ಯೆ ಮಾಡೋಣ. ಚುನಾವಣೆಯಲ್ಲಿ ಹೋರಾಡೋಣ. ಆದರೆ ತನಿಖಾ ಸಂಸ್ಥೆಗಳ ದುರ್ಬಳಕೆ ಮಾಡಿಕೊಂಡು ಈ ರೀತಿ ಕಿರುಕುಳ ನೀಡುವುದು ಸರಿಯಲ್ಲ ಎಂದು ತಿಳಿಸಿದರು.

ನಾಳೆ ಸಿಎಂ ಅವರನ್ನು ಉಪಹಾರಕೂಟಕ್ಕೆ ಆಹ್ವಾನಿಸಿದ್ದೀರಾ ಎಂದು ಕೇಳಿದಾಗ, ಇದು ನನಗೆ ಹಾಗೂ ಮುಖ್ಯಮಂತ್ರಿಗಳಿಗೆ ಸಂಬಂಧಿಸಿದ ವಿಚಾರ. ನಾವಿಬ್ಬರು ಸಹೋದರರಂತೆ ಕೆಲಸ ಮಾಡಿಕೊಂಡು ಹೋಗುತ್ತಿದ್ದೇವೆ. ನೀವುಗಳು ಸದಾ ಗುಂಪು, ಗುಂಪು ಎಂದು ಬಿಂಬಿಸುತ್ತಿದ್ದೀರಿ. ನಮ್ಮಲ್ಲಿ ಯಾವುದೇ ಗುಂಪಿಲ್ಲ. ನಮ್ಮ ಜೊತೆ 140 ಶಾಸಕರಿದ್ದಾರೆ. ನಾವು ಹುಟ್ಟುವಾಗಲೂ ಒಬ್ಬರೇ, ಸಾಯುವಾಗಲೂ ಒಬ್ಬರೆ. ಪಕ್ಷದ ವಿಚಾರ ಬಂದಾಗ ಎಲ್ಲರನ್ನು ಒಟ್ಟಾಗಿ ತೆಗೆದುಕೊಂಡು ಹೋಗುತ್ತೇವೆ. ಈ ಬಗ್ಗೆ ಚಿಂತೆ ಬೇಡ ಎಂದು ತಿಳಿಸಿದರು.

ಈ ವಾರ ದೆಹಲಿಯಲ್ಲಿ ಸರ್ವಪಕ್ಷ ಸಭೆ ನಡೆಯಲಿದೆಯೇ ಎಂದು ಕೇಳಿದಾಗ, ?ನಾನು ಸರ್ವಪಕ್ಷ ಸಭೆ ಬಗ್ಗೆ ಸಿಎಂ ಜೊತೆ ಚರ್ಚೆ ಮಾಡುತ್ತಿದ್ದೇನೆ. ಸಂಸತ್ ಅಧಿವೇಶನ ಆರಂಭವಾಗಿದ್ದು, ರಾಜ್ಯದ ಹಿತರಕ್ಷಣೆ ವಿಚಾರವಾಗಿ ಸಂಸದರಿಗೆ ಕೆಲವು ಜವಾಬ್ದಾರಿಗಳ ಬಗ್ಗೆ ಹೇಳಬೇಕಿದೆ? ಎಂದು ತಿಳಿಸಿದರು. ಉತ್ತರ ಪ್ರದೇಶ ಸಂಸದ ರಾಜೀವ್ ರಾಯ್ ಎಂಬುವವರು ನಿನ್ನೆ ಬೆಂಗಳೂರಿನಲ್ಲಿ ಟ್ರಾಫಿಕ್ ಜಾಮ್ ನಲ್ಲಿ ಸಿಲುಕಿ ಎಕ್ಸ್ ಖಾತೆಯಲ್ಲಿ ಸಿಎಂ ಅವರನ್ನು ಟ್ಯಾಗ್ ಮಾಡಿ ಇದು ಅತ್ಯಂತ ಕೆಟ್ಟ ಟ್ರಾಫಿಕ್ ಜಾಮ್ ಎಂದು ಬರೆದಿರುವ ಬಗ್ಗೆ ಕೇಳಿದಾಗ, ಅವರಿಗೆ ನನ್ನನ್ನು ದೆಹಲಿಯಲ್ಲಿ ಭೇಟಿ ಮಾಡಲು ಹೇಳಿ. ದೆಹಲಿಯಲ್ಲಿರುವ ಟ್ರಾಫಿಕ್ ಸಮಸ್ಯೆ ಏನು ಎಂದು ಅವರಿಗೆ ತೋರಿಸುತ್ತೇನೆ ಎಂದು ತಿಳಿಸಿದರು.

ಕೆಂಗಲ್ ಹನುಮಂತಯ್ಯ ಅವರ ಪುಣ್ಯಸ್ಮರಣೆ ಹಿನ್ನೆಲೆಯಲ್ಲಿ ವಿಧಾನಸೌಧದ ಆವರಣದಲ್ಲಿ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಮಾತನಾಡಿದ ಅವರು, ಇಂದು ನಾವೆಲ್ಲರೂ ಮಾಜಿ ಮುಖ್ಯಮಂತ್ರಿ ಕೆಂಗಲ್ ಹನುಮಂತಯ್ಯ ಅವರನ್ನು ಸ್ಮರಿಸುತ್ತಿದ್ದೇವೆ. ವಿಧಾನ ಸೌಧ ಕಟ್ಟಿದವರು ಕೆಂಗಲ್ ಹನುಮಂತಯ್ಯ ಅವರು, ವಿಕಾಸ ಸೌಧ ಕಟ್ಟಿದವರು ಎಸ್.ಎಂ ಕೃಷ್ಣ ಅವರು, ಬೆಂಗಳೂರನ್ನು ಕಟ್ಟಿದ್ದು ಕೆಂಪೇಗೌಡರು. ಇವೆಲ್ಲವೂ ಈ ನಾಯಕರು ಬಿಟ್ಟು ಹೋಗಿರುವ ಸಾಕ್ಷಿಗುಡ್ಡೆ ಎಂದರು.

## ಗಗನಕ್ಕೇರಿದ ತರಕಾರಿ ಬೆಲೆ, ರಸಂ ಮಾಡ್ತೀವಿ ಸಾಕು ಅಂತಿರೋ ಗ್ರಾಹಕರು!



**ಬೆಂಗಳೂರು:** ರಾಜ್ಯದಲ್ಲಿ ಚಳಿಗಾಲ ಹಾಗೂ ದಿತ್ವಾ ಚಂಡಮಾರುತದ ಪ್ರಭಾವದಿಂದ ಚಳಿ ಹೆಚ್ಚಾಗಿದೆ. ಪರಿಣಾಮ ತರಕಾರಿಗಳ ಮೇಲೆಯೂ ಆಗಿದೆ. ಇದರಿಂದ ಇಳುವರಿ ಕಡಿಮೆಯಾಗಿದ್ದು, ತರಕಾರಿಗಳ ಬೆಲೆ ಗಗನಕ್ಕೇರಿದೆ. ಎಲ್ಲರಿಗೂ ಬೇಕಾದ ಟೊಮೆಟೊ ಬೆಲೆ ನೂರರ ಹತ್ತಿರದಲ್ಲಿದ್ದರೆ, ನುಗ್ಗೇಕಾಯಿ ಬೆಲೆಯಂತೂ ಐನೂರರ ಗಡಿ ದಾಟಿದೆ. ಗ್ರಾಹಕರು ಸದ್ಯ ನಮಗೆ ರಸಂ ಸಾಕು ಎಂದುಕೊಂಡು ಸುಮ್ಮನಾಗುತ್ತಿದ್ದಾರೆ.

ಬಹುತೇಕ ತರಕಾರಿಗಳ ಬೆಲೆ ಏರಿಕೆಯಾಗಿದೆ. ಕೆಲ ತರಕಾರಿಗಳ ಬೆಲೆ ಶತಕದ ಗಡಿ ದಾಟಿದರೆ, ನುಗ್ಗೇಕಾಯಿ ಬೆಲೆ ಐದುನೂರರ ಗಡಿ ದಾಟಿದೆ. ಕಳೆದ ಒಂದು ವಾರದಿಂದ ಚಳಿ ರಾಜಧಾನಿ ಜನರನ್ನು ಫ್ರಿಜ್‌ನಲ್ಲಿ ಇಟ್ಟಂತೆ ತಂಪಾಗಿಸಿದೆ. ಆದರೆ ಅಡುಗೆಗೆ ಬೇಕಾದ ತರಕಾರಿಗಳ ದರ ಜನರ ಜೇಬು ಸುಡುತ್ತಿದೆ.

ಬೆಂಗಳೂರಿಗೆ ಈ ಹಿಂದೆ ಪ್ರತಿದಿನ 100 ಟನ್ ನುಗ್ಗೇಕಾಯಿ ಸಪ್ಲೈ ಆಗುತ್ತಿತ್ತು. ಆದರೆ ಇದೀಗ ವಾತಾವರಣ ಬದಲಾವಣೆಯಿಂದ ನುಗ್ಗೇಕಾಯಿ ಬೆಳೆ ಸರಿಯಾಗಿ ಬಂದಿಲ್ಲ. ಇದರಿಂದ ಪ್ರತಿದಿನ ನಗರಕ್ಕೆ 30ರಿಂದ 40 ಟನ್ ಮಾತ್ರ ನುಗ್ಗೇಕಾಯಿ ಸಪ್ಲೈ ಆಗ್ತಿದೆ. ಕೊರತೆಯ ಪರಿಣಾಮ ನುಗ್ಗೇಕಾಯಿ ಹಾಪ್‌ಕಾಮ್ಸ್‌ನಲ್ಲಿ ಒಂದು ಕೆಜಿ 510 ರೂ.ಗೆ ಮಾರಾಟವಾಗ್ತಿದೆ. ಮಾರ್ಕೆಟ್‌ಗಳಲ್ಲಿ ಒಂದು ನುಗ್ಗೇಕಾಯಿ 50 ರೂ., ಜೋಡಿ ನುಗ್ಗೇಕಾಯಿ 100 ರೂ. ಆಗಿದೆ.

ಇದರಿಂದ ಸಿಲಿಕಾನ್ ಸಿಟಿ ಜನರು ನುಗ್ಗೇಕಾಯಿ ಸಹವಾಸ ಬೇಡ ಅಂತಿದ್ದಾರೆ. ಈಗಾಗಲೇ ಟೊಮೆಟೋ ಬೆಲೆ ಅರ್ಧ ಶತಕ ಬಾರಿಸಿ ಮೇಲೇರಿದ್ದು, ಉಳಿದ ತರಕಾರಿಗಳು ನಿಧಾನವಾಗಿ ಶತಕ ಬಾರಿಸುತ್ತಿದೆ. ಎಲ್ಲಾ ತರಕಾರಿಗಳ ಬೆಲೆಯೂ ಏರಿಕೆಯಾಗಿದೆ ಎಂದು ಗೃಹಿಣಿಯರು ಬೇಸರ ವ್ಯಕ್ತಪಡಿಸುತ್ತಿದ್ದಾರೆ.

## ಕುರ್ಕಿ ಗ್ರಾಮ ಪಂಚಾಯತ್‌ಗೆ ಗಾಂಧಿ ಗ್ರಾಮ ಪುರಸ್ಕಾರ

**ದಾವಣಗೆರೆ:** 2023–2024ನೇ ಸಾಲಿನ ಗಾಂಧಿ ಗ್ರಾಮ ಪುರಸ್ಕಾರಕ್ಕೆ ದಾವಣಗೆರೆ ತಾಲೂಕು ಕುರ್ಕಿ ಗ್ರಾಮ ಪಂಚಾಯಿತಿ ಆಯ್ಕೆಯಾಗಿದ್ದು ಮುಖ್ಯಮಂತ್ರಿಗಳು ಹಾಗೂ ಉಪಮುಖ್ಯಮಂತ್ರಿಗಳು ಪ್ರಶಸ್ತಿ ವಿತರಿಸಿದರು.

ಈ ಸಂದರ್ಭದಲ್ಲಿ ಸಿಎಂ ಸಿದ್ದರಾಮಯ್ಯ ಮಾತನಾಡಿ, ನಮ್ಮದು ಹಳ್ಳಿಗಳ ದೇಶ. ಗ್ರಾಮ ಭಾರತ ಅಭಿವೃದ್ಧಿ ಆಗದೆ ದೇಶ ಅಭಿವೃದ್ಧಿ ಸಾಧ್ಯವಿಲ್ಲ. ಹಳ್ಳಿಗಳ ಅಭಿವೃದ್ಧಿಯಲ್ಲಿ ಗ್ರಾಮಸ್ಥರ ಪಾಲ್ಗೊಳ್ಳುವಿಕೆ ಬಹಳ ಮುಖ್ಯ, ಪುರಸ್ಕೃತಗೊಂಡ ದಾವಣಗೆರೆ ತಾಲೂಕು ಕುರ್ಕಿ ಗ್ರಾಮ ಪಂಚಾಯಿತಿ ಬೇರೆ ಗ್ರಾಮ ಪಂಚಾಯತ್‌ಗಳಿಗೆ ಮಾದರಿಯಾಗಲಿ ಎಂದು ಆಶಿಸಿದರು.

ಕುರ್ಕಿ ಗ್ರಾಮ ಪಂಚಾಯಿತಿ ಗಾಂಧಿ ಗ್ರಾಮ ಪುರಸ್ಕಾರಕ್ಕೆ ಆಯ್ಕೆಯಾಗಿರುವುದಕ್ಕೆ ಗ್ರಾ. ಪಂ.ಅಧ್ಯಕ್ಷರಾದ ಕೆ.ಜಿ ನಾಗಮ್ಮ, ಪಿಡಿಒ ಐ.ಬಿ ಸುರೇಖಾ, ಗ್ರಾಪಂ ಸದಸ್ಯರುಗಳಿಗೆ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್. ಎಸ್ ಮಲ್ಲಿಕಾರ್ಜುನ್, ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್, ಮಾಯಕೊಂಡ ಶಾಸಕ ಕೆ. ಎಸ್. ಬಸವಂತಪ್ಪ ಅಭಿನಂದಿಸಿದ್ದಾರೆ.

# ಪಂಚ ಗ್ಯಾರಂಟಿ ಬಡವರ ಪಾಲಿನ ಅಕ್ಷಯ ಪಾತ್ರೆ : ಹೆಚ್.ಎಂ.ಮಧು

**ಶಿವಮೊಗ್ಗ :** ಸರ್ಕಾರದ ಜನಪರ ಯೋಜನೆಗಳು ಯಶಸ್ವಿಯಾಗಿ ನಡೆಯುತ್ತಿದ್ದು, ಸರ್ಕಾರ ನೀಡುವ ಪಂಚ ಗ್ಯಾರಂಟಿಗಳು ಬಡವರ ಮತ್ತು ಮಧ್ಯಮ ವರ್ಗದವರ ಪಾಲಿಗೆ ಅಕ್ಷಯ ಪಾತ್ರೆಯಾಗಿದೆ ಎಂದು ತಾಲ್ಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಟಾನ ಪ್ರಾಧಿಕಾರದ ಅಧ್ಯಕ್ಷ ಹೆಚ್.ಎಂ ಮಧು ಹೇಳಿದರು.

ಶನಿವಾರ ನಗರದ ತಾಲ್ಲೂಕು ಪಂಚಾಯತ್‌ನಲ್ಲಿ ಏರ್ಪಡಿಸಿದ್ದ ತಾಲ್ಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬಡವರು, ಮಧ್ಯಮ ವರ್ಗದವರು ಹಾಗೂ ಮಹಿಳೆಯರು ಇನ್ನೂ ದೇಶದಲ್ಲಿ ಆರ್ಥಿಕವಾಗಿ, ಸಾಮಾಜಿವಾಗಿ ಹಿಂದುಳಿದಿದ್ದಾರೆ. ಅವೆಲ್ಲರನ್ನೂ ಸಬಲರನ್ನಾಗಿ ಮಾಡಿ ಸಮಾಜದ ಮುಖ್ಯಭೂಮಿಕೆ ತರುವ ಉದ್ದೇಶದಿಂದ ರಾಜ್ಯ ಸರ್ಕಾರದ ಅನೇಕ ಯೋಜನೆಗಳನ್ನು ಅನುಷ್ಟಾನ ಮಾಡುತ್ತಿದೆ. ಅದರಲ್ಲಿ ಮುಖ್ಯವಾಗಿ ಪಂಚ ಗ್ಯಾರಂಟಿ ಯೋಜನೆಗಳು ಸಮರ್ಪಕವಾಗಿ ಜಾರಿ ಆಗಿದ್ದು, ಇದರಿಂದ ರಾಜ್ಯದಲ್ಲಿ ಅದೆಷ್ಟೋ ಬಡವರು, ಮಧ್ಯಮ ವರ್ಗದವರು ಹಾಗೂ ಮಹಿಳೆಯರಿಗೆ ಫಲವನ್ನು



ಪಡೆದು ನೆಮ್ಮದಿಯಿಂದಿದ್ದಾರೆ. ಇದರಂತೆ ಜಿಲ್ಲೆಯ ತಾಲ್ಲೂಕಿನಲ್ಲೂ ಕೂಡ ತಾಲ್ಲೂಕು ಮಟ್ಟದ ಪ್ರಾಧಿಕಾರದಿಂದ ಇದನ್ನು ಸಮರ್ಪಕವಾಗಿ ಜನರಿಗೆ ತಲುಪಿಸುವ ಕೆಲಸ ಮಾಡುತ್ತಿದೆ ಎಂದರು.

ಸರ್ಕಾರದ ಜನಪರ ಕಾಳಜಿಯಿಂದ ಹಾಗೂ ಅಭಿವೃದ್ಧಿ ಉದ್ದೇಶದಿಂದ ಈಡೇರಿಸಲು ಅಧಿಕಾರಿಗಳ ಒಳಗೊಂಡಂತೆ ತಾಲ್ಲೂಕು ಮಟ್ಟದ ಪ್ರಾಧಿಕಾರದ ಸದಸ್ಯರುಗಳು ಕಾರ್ಯಕ್ಷಮತೆಯಿಂದ ಕೆಲಸ ಮಾಡಬೇಕು. ಗ್ಯಾರಂಟಿ ಯೋಜನೆಗಳು ಎಲ್ಲ ವರ್ಗದವರೆಗೂ ಮೀಸಲಾಗಿದೆ. ಜನರಿಗೆ ಆದಷ್ಟು ಸರ್ಕಾರದ ಯೋಜನೆಗಳನ್ನು ತಲುಪಿಸುವ ಪ್ರಯತ್ನದಲ್ಲಿ ನಾವೆಲ್ಲರೂ ಕೆಲಸ ಮಾಡಬೇಕಿದೆ. ಆಗ ಮಾತ್ರ ಉತ್ತಮವಾದ ಸಮಾಜವನ್ನು ನಿರ್ಮಾಣ ಮಾಡಲು ಸಾಧ್ಯವಾಗುತ್ತದೆ ಎಂದರು

ಅಗಸ್ಟ್–2025 ರ ಮಾಹೆಯಲ್ಲಿ ಜಿಲ್ಲೆಯ 1,07,655 ಫಲಾನುಭವಿಗಳ ಖಾತೆಗೆ ಗೃಹಲಕ್ಷ್ಮಿ ಹಣ ಜಮಾ ಮಾಡಲಾಗಿದೆ. ಇನ್ನೂ 2044 ಖಾತೆಗಳು ಐಟಿ/ಜಿಎಸ್‌ಟಿ ಫಲಾನುಭವಿಗಳಿದ್ದು, ಇದರಲ್ಲಿ 304 ಅರ್ಜಿಗಳನ್ನು ಕಚೇರಿ ಸ್ವೀಕರಿಸಲಾಗಿದೆ. ಹಾಗೂ ಎನ್‌ಪಿಸಿಐ ಯಲ್ಲಿ 300 ಫಲಾನುಭವಿಗಳು ಬಾಕಿ ಇದೆ.

ಅನ್ನಭಾಗ್ಯ ಯೋಜನೆಗೆ ಸಂಬಂಧಿಸಿದಂತೆ ಸರ್ಕಾರವು ಸಚಿವ ಸಂಪುಟದಲ್ಲಿ ಮಹತ್ವ ನಿರ್ಧಾರವನ್ನು ತೆಗೆದುಕೊಂಡಿದ್ದು, ಇನ್ನೂ ಮುಂದೆ 5 ಕೆಜಿ ಅಕ್ಕಿ ಹಾಗೂ ಇನ್ನೂ 5 ಕೆಜಿ ಅಕ್ಕಿ ಬದಲಾಗಿ ಆಹಾರಧಾನ್ಯಗಳ ಕಿಟ್ ನೀಡಲಿದೆ. ಈ ಯೋಜನೆ ಜನವರಿ–2026 ರಿಂದ ಜಾರಿಯಾಗಲಿದೆ.

ಈಗಾಗಲೇ ಸರ್ಕಾರದ ಆದೇಶದಂತೆ ಐಟಿ ಹೊಂದಿರುವ ಬಿಪಿಎಲ್ ಕಾರ್ಡ್ಗಳನ್ನು ರದ್ದುಗೊಳಿಸಬೇಕೆಂದು ಆದೇಶ ಮಾಡಲಾಗಿದ್ದು, ಅದರಂತೆ 1.20 ಲಕ್ಷ ಆದಾಯ ಹೊಂದಿರುವ 1,562 ಬಿಪಿಎಲ್ ಕಾರ್ಡ್ ಅನ್ನು ಎಪಿಎಲ್ ಕಾರ್ಡ್ಗಳಾಗಿ ಮಾರ್ಪಾಡು ಮಾಡಲಾಗುತ್ತದೆ. ಇನ್ನೂ 7,716 ಕಾರ್ಡ್ಗಳು ಬಾಕಿ ಉಳಿದಿವೆ. ಹಾಗೂ ಹೊಸ ಪಡಿತರ ಚೀಟಿಗೆ 208 ಅರ್ಜಿಗಳು ಬಂದಿದ್ದು, ಅದನ್ನು ಪರಿಶೀಲಿಸಿ ಅನುಮೋದಿಸಲಾಗುತ್ತದೆ.

ಅನ್ನ ಸುವಿಧ ಯೋಜನೆಯಡಿ ಸರ್ಕಾರ 75 ವರ್ಷ ದಾಟಿದ ವ್ಯಕ್ತಿಗಳಿಗೆ ಮನೆಯ ಬಾಗಿಲಿಗೆ ಅಕ್ಕಿಯನ್ನು ನೀಡುವ ಕಾರ್ಯಕ್ರಮವನ್ನು ಆಯೋಜಿಸಿದ್ದು, ಅದನ್ನು ಜಿಲ್ಲೆಯಲ್ಲಿ ಅನುಷ್ಠಾನ ಮಾಡಲಾಗಿದೆ. ಪ್ರತಿ ತಿಂಗಳು 6 ರಿಂದ 15 ತಾರೀಖು ಒಳಗೆ ಅಕ್ಕಿಯನ್ನು ವಿತರಣೆ ಮಾಡಲಾಗುತ್ತಿದೆ ಎಂದು ಮಾಹಿತಿ ನೀಡಿದರು.

ಗೃಹಜ್ಯೋತಿ ಯೋಜನೆಯಡಿ ತಾಲ್ಲೂಕು ಮಟ್ಟದಲ್ಲಿ 7.51 ಕೋಟಿ ವಿದ್ಯುತ್ ಬಳಕೆ ಮಾಡಲಾಗಿದ್ದು, ಸರ್ಕಾರದಿಂದ 6.34ಕೋಟಿ ಸಬ್ಸಿಡಿ ಹಣವನ್ನು ಬಿಡುಗಡೆ ಮಾಡಲಾಗಿದೆ. ಯುವ ನಿಧಿ ಯೋಜನೆ ಅಡಿಯಲ್ಲಿ ಜುಲೈ–2025 ಮಾಹೆಯವರೆಗೂ 2,95,03,500 ಕೋಟಿ ಹಣವನ್ನು ವಿದ್ಯಾರ್ಹತೆಯನುಸಾರವಾಗಿ ಫಲಾನುಭವಿಗಳ ಖಾತೆಗೆ ನೇರ ನಗದು ವರ್ಗಾವಣೆ ಮಾಡಲಾಗಿದೆ.

ಶಕ್ತಿ ಯೋಜನೆಯಡಿ ಜಿಲ್ಲೆಯಲ್ಲಿ 7 ಕೋಟಿ ಮಹಿಳಾ ಫಲಾನುಭವಿಗಳು ಪ್ರಯಾಣ ಮಾಡಿದ್ದು, ಇದರಿಂದ 276 ಕೋಟಿ ಆದಾಯ ಸರ್ಕಾರ ಖಜಾನೆ ಬಂದಿದೆ ಎಂದು ತಿಳಿಸಿದರು.

ಸಭೆಯಲ್ಲಿ ತಾಲ್ಲೂಕು ಸಿಓ ಪರಮೇಶ್, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಸದಸ್ಯ ಶಿವಾನಂದ, ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಟಾನ ಸಮಿತಿ ಸದಸ್ಯ ಟಿ.ಸಿ ಜಯಪ್ಪ, ತಾಲ್ಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಸದಸ್ಯರುಗಳು ಹಾಗೂ ವಿವಿಧ ಇಲಾಖೆಯ ಅಧಿಕಾರಿ, ಸಿಬ್ಬಂದಿಗಳು ಪಾಲ್ಗೊಂಡಿದ್ದರು.

# 43 ಲಕ್ಷ ಮತದಾರರ ಡಿಲಿಟ್‌ಗೆ ಚುನಾವಣಾ ಆಯೋಗ ತಯಾರಿ

**ನವದೆಹಲಿ/ಕೋಲ್ಕತ್ತ:** ಪಶ್ಚಿಮ ಬಂಗಾಳದಲ್ಲಿ ನಡೆಯುತ್ತಿರುವ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಯೋಜನೆಯ ಭಾಗವಾಗಿ ಭಾರತ ಚುನಾವಣಾ ಆಯೋಗ (ಇಸಿಐ) ರಾಜ್ಯದಿಂದ ಸುಮಾರು 43.30 ಲಕ್ಷ ಮತದಾರರ ಹೆಸರುಗಳನ್ನು ತೆಗೆದುಹಾಕಲು ತೀರ್ಮಾನಿಸಿದೆ. ಡಿಸೆಂಬರ್ 16ರಂದು ಮತದಾರರ ಪಟ್ಟಿಯ ಮಸೂದೆ ಪ್ರಕಟವಾಗಲಿದೆ.

ಮತದಾರರ ಪಟ್ಟಿಯ ಅಂಕೀಕರಣದ ಪೂರ್ವಾವಲೋಕನದ ಆಧಾರದ ಮೇಲೆ ಈ ಅಂದಾಜು ಮಾಡಲಾಗಿದೆ. ಅಂಕೀಕರಣದ ಕೆಲಸ ಪೂರ್ಣಗೊಂಡಂತೆ ಈ ಸಂಖ್ಯೆ ಇನ್ನೂ ಹೆಚ್ಚುವ ಸಾಧ್ಯತೆಯಿದೆ.ಮುಖ್ಯ ಚುನಾವಣಾ ಅಧಿಕಾರಿ (ಸಿಇಒ) ಕಚೇರಿಯ ಸೂತ್ರಗಳು




ತಿಳಿಸುವ ಪ್ರಕಾರ, ಇದರಲ್ಲಿ ಬಹುಪಾಲು ಹೆಸರುಗಳು ಸಹಜ ಕಾರಣಗಳಿಂದ ತೆಗೆಯಲ್ಪಡುತ್ತಿವೆ. ಸುಮಾರು 21.45 ಲಕ್ಷ ಹೆಸರುಗಳು ಸತ್ತ ಮತದಾರರವು. ಸುಮಾರು 15.10 ಲಕ್ಷ ಮತದಾರರು ಇತರ ಪ್ರದೇಶಗಳಿಗೆ ಸ್ಥಳಾಂತರಗೊಂಡಿದ್ದಾರೆ. ಸುಮಾರು 5.5 ಲಕ್ಷ ಮತದಾರರು ಹುಡುಕಲಾಗದವರು ಎಂದು ಪರಿಗಣಿತರಾಗಿದ್ದಾರೆ. ಒಂದು ಲಕ್ಷಕ್ಕಿಂತ ಕಡಿಮೆ ನಮೂದುಗಳು ನಕಲಿ ಅಥವಾ ಫಸ್ಟು ಎಂದು ಗುರುತಿಸಲ್ಪಟ್ಟಿವೆ. ಹುಡುಕಲಾಗದ ಮತದಾರರಲ್ಲಿ ಕೆಲವರು ನಂತರ ಗುರುತಿಸಲ್ಪಡಬಹುದು ಎಂದು ಅಧಿಕಾರಿಗಳು ಸೂಚಿಸಿದ್ದಾರೆ.

ರಾಜ್ಯದಾದ್ಯಂತ 2,208 ಮತದಾನ ಕೇಂದ್ರಗಳಲ್ಲಿ ಸತ್ತ, ನಕಲಿ ಅಥವಾ ಸ್ಥಳಾಂತರಿತ ಮತದಾರರ ಹೆಸರುಗಳು ಸಿಗಲಿಲ್ಲ ಎಂಬ ಅಂಶ ವಿರೋಧ ಪಕ್ಷಗಳಲ್ಲಿ ಪ್ರಶ್ನೆಗಳನ್ನು ಎಬ್ಬಿಸಿದೆ. ಬಿಜೆಪಿ, ಹೇಗೆ ಈಷ್ಟೊಂದು ಕೇಂದ್ರಗಳಲ್ಲಿ ಯಾವುದೇ ಅನಿಯಮಿತತೆ ಇರಲಿಲ್ಲ ಎಂದು ಪ್ರಶ್ನಿಸಿದೆ ಮತ್ತು ಅನುಗುಣವಾದ ಗಣನಾ ಫಾರ್ಮ್ಗಳ ಸೂಕ್ಷ್ಮ ಪರಿಶೀಲನೆ ಕೋರಿದೆ. ಪಶ್ಚಿಮ ಬಂಗಾಳ ವಿಧಾನಸಭೆಯ ವಿರೋಧ ಪಕ್ಷದ ನಾಯಕ ಸುವೇಂದು ಅಧಿಕಾರಿ ನವೆಂಬರ್ 26, 27 ಮತ್ತು 28 ರಂದು ಸಲ್ಲಿಸಲಾದ (ಒಟ್ಟು 1.25 ಕೋಟಿ ಫಾರ್ಮ್ಗಳು) ಎಲ್ಲಾ ಗಣನಾ ನಮೂದುಗಳ ಸಮಗ್ರ ತಪಾಸಣೆ ನಡೆಸಲು ಇಸಿಐಗೆ ಲಿಖಿತವಾಗಿ ವಿನಂತಿಸಿದ್ದಾರೆ.

ಪಶ್ಚಿಮ ಬಂಗಾಳದ ಒಟ್ಟು ಮತದಾರರ ಸಂಖ್ಯೆ 7,66,37,529 ಇದೆ. ಚುನಾವಣಾ ಪಟ್ಟಿಯ ಶುದ್ಧತೆ ಮತ್ತು ನಿಖರತೆಗಾಗಿ ನಡೆಯುವ ಈ ದೊಡ್ಡ ಮಟ್ಟದ ಪರಿಷ್ಕರಣೆ, ರಾಜಕೀಯ ಸೂಕ್ಷ್ಮತೆಗಳ ಹಿನ್ನೆಲೆಯಲ್ಲಿ, ರಾಜ್ಯದ ಚುನಾವಣಾ ಭೂದೃಶ್ಯವನ್ನು ಮಾರ್ಪಡಿಸಲಿದೆ.

# ರಾಜ್ಯಸಭೆಯಲ್ಲಿ ಉಪರಾಷ್ಟ್ರಪತಿಗೆ ಆತ್ಮೀಯ ಸ್ವಾಗತ

**ನವದೆಹಲಿ:** ಕೆಲ ತಿಂಗಳ ಹಿಂದೆಯಷ್ಟೇ ಉಪರಾಷ್ಟ್ರಪತಿಯಾಗಿ ಆಯ್ಕೆಯಾಗಿರುವ ಸಿಪಿ ರಾಧಾಕೃಷ್ಣನ್ ಅವರಿಗೆ ಸಂಸತ್ತಿನ ಚಳಿಗಾಲದ ಅಧಿವೇಶನ ಮೊದಲ ಅಧಿವೇಶನವಾಗಿದೆ, ರಾಜ್ಯಸಭೆಯ ಸಭಾಪತಿಯೂ ಆಗಿರುವ ಸಿಪಿ ರಾಧಾಕೃಷ್ಣನ್ ಅವರಿಗೆ ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ಇಡೀ ಸದನ ಆತ್ಮೀಯವಾಗಿ ಸ್ವಾಗತಿಸಿದೆ.

ಇಂದಿನಿಂದ ಆರಂಭವಾಗಿವ ಸಂಸತ್ತಿನ ಅಧಿವೇಶನದಲ್ಲಿ ಪ್ರತಿಪಕ್ಷಗಳು ಮತದಾರರ ಪಟ್ಟಿ ಪರಿಷ್ಕರಣೆ ಸೇರಿದಂತೆ ವಿವಿಧ ವಿಷಯಗಳನ್ನು ಮುಂದಿಟ್ಟುಕೊಂಡು ಚರ್ಚೆಗೆ ಅವಕಾಶ ಮಾಡಿಕೊಡಬೇಕೆಂದು ಬಿಗಿ ಪಟ್ಟು ಹಿಡಿದ ಸಂದರ್ಭದಲ್ಲಿ ರಾಜ್ಯಸಭೆಯ ಸಭಾಪತಿಯಾಗಿ



ಮೊದಲ ಬಾರಿಗೆ ರಾಜ್ಯಸಭೆಯ ಕಲಾಪದಲ್ಲಿ ರಾಧಾಕೃಷ್ಣನ್ ಅವರು ಭಾಗಿಯಾದರು. ಈ ವೇಳೆ ಪ್ರಧಾನಿ ನರೇಂದ್ರ ಮೋದಿ, ರಾಜ್ಯಸಭೆ ಸಭಾನಾಯಕ ಜೆಪಿ ನಡ್ಡಾ ,ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು, ಪ್ರತಿಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಸೇರಿದಂತೆ ಇಡೀ ಸದನ ರಾಜ್ಯಸಭೆಯ ಸಭಾಪತಿಗಳನ್ನು ಸದನಕ್ಕೆ ಆತ್ಮೀಯವಾಗಿ ಬರಮಾಡಿಕೊಂಡಿತು.

ಈ ವೇಳೆ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ ಅವರು ರಾಜ್ಯಸಭೆಯ ಸಭಾಪತಿಯಾಗಿ ಕರ್ತವ್ಯ ನಿರ್ವಹಿಸುತ್ತಿರುವ ಸಭಾಪತಿ ಸಿಪಿ ರಾಧಾಕೃಷ್ಣನ್ ಅವರಿಗೆ ಮೊದಲ ಕರ್ತವ್ಯದ ದಿನ, ಇಡೀ ಸದನದ ಪರವಾಗಿ ನಿಮ್ಮನ್ನು ಸ್ವಾಗಿಸುತ್ತೇನೆ.ಜೊತೆಗೆ ಅಭಿನಂಧಿಸುವುದಾಗಿ ತಿಳಿಸಿದ್ದಾರೆ. ಸಾಮಾನ್ಯ ರೈತ ರೈತ ಕುಟುಂಬದಿಂದ ಬಂದ ಉಪ ರಾಷ್ಟ್ರಪತಿ ಅವರು ತಮ್ಮ ಇಡೀ ಜೀವನವನ್ನು ಸಮಾಜ ಸೇವೆಗೆ ಮೀಸಲಿಟ್ಟಿದ್ದಾರೆ. ನಿಮ್ಮ ಅಧಿಕಾರವಧಿಯಲ್ಲಿ ಅರ್ಥಪೂರ್ಣ ಚರ್ಚೆಗೆ ವೇದಿಕೆಯಾಗಲಿ ಎಂದು ಹಾರೈಸಿದ್ದಾರೆ.

ಈ ಸದನದಲ್ಲಿ ಕುಳಿತಿರುವ ಎಲ್ಲಾ ಸದಸ್ಯರು ಮೇಲ್ಮನೆಯ ಘನತೆ ಕಾಪಾಡುತ್ತಾರೆ.

# ಲೋಕಸಭೆಯಲ್ಲಿ ಗುಟ್ಕಾ, ಪಾನ್ ಮಸಾಲಾ ಉದ್ಯಮಕ್ಕೆ ಅಂಕುಶ: ಮಸೂದೆ ಮಂಡನೆ

**ನವದೆಹಲಿ:** ಲೋಕಸಭೆಯಲ್ಲಿ ಗದ್ದಲ ಕೋಲಾಹಲದ ನಡುವೆ ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಇಂದು ತಂಬಾಕು ಉತ್ಪನ್ನಗಳಿಗೆ ಸುಂಕ ವಿಧಿಸುವ ಹಾಗೂ ಪಾನ್ ಮಸಾಲಾ ಉತ್ಪನ್ನಗಳ ಮೇಲೆ ಹೊಸ ತೆರಿಗೆ ಮಸೂದೆಯನ್ನು ಮಂಡಿಸಿದರು. ಇದೇ ವೇಳೆ ಆರೋಗ್ಯ ಭದ್ರತೆಗೆ ರಾಷ್ಟ್ರೀಯ ಭದ್ರತಾ ಸೆಸ್ ಮಸೂದೆಯನ್ನು ಮಂಡಿಸಲಾಗಿದೆ.

ದೇಶದಲ್ಲಿ ಗುಟ್ಕಾ ಮತ್ತು ಪಾನ್ ಮಸಾಲಾ ಉದ್ಯಮ ಗುರಿಯಾಗಿಸಿ ಹೊಸ ಕಠಿಣ ಕಾನೂನು ಪರಿಚಯಿಸಲು ಕೇಂದ್ರ ಸರ್ಕಾರ ಸಿದ್ಧತೆ ಮಾಡಿಕೊಂಡಿದ್ದು ಕಾನೂನು ಉಲ್ಲಂಘಿಸುವರ ವಿರುದ್ಧ ಕನಿಷ್ಠ 5 ವರ್ಷ ಶಿಕ್ಷೆ ಮತ್ತು ದಂಡ ವಿಧಿಸುವ ಸಾಧ್ಯತೆ ಇದೆ




ಎನ್ನಲಾಗಿದೆ.

ಮಸೂದೆಯ ಅನ್ವಯ ಗುಟ್ಕಾ, ಪಾನ್ ಮಸಾಲಾ ಹಾಗೂ ಇತರ ತಂಬಾಕು ಆಧಾರಿತ ಔಷಧಗಳು ಮತ್ತು ಯಂತ್ರೋಪಕರಣಗಳು ಬಳಸುವ ಯಂತ್ರೋಪಕರಣಗಳು ಮತ್ತು ಉತ್ಪಾದನಾ ಘಟಕಗಳ ಮೇಲೆ ವಿಶೇಷ ಸೆಸ್ ವಿಧಿಸಿಲ್ಲ. ಹೊಸ ಮಸೂದೆಯ ಅನ್ವಯ, ಕಾರ್ಖಾನೆ ಎಷ್ಟು ಉಪಯೋಗಕ್ಕೆ ಬರುತ್ತದೆ ಅಲ್ಲ, ಕಾರ್ಖಾನೆ ಯಂತ್ರಗಳ ಉತ್ಪಾದನೆ ಸಾಮರ್ಥ್ಯದ ಮೇಲೆ ಸೆಸ್ ಲೆಕ್ಕಾಚಾರ ಮಾಡಿದೆ. ಈ ಕೈಯಿಂದಲೇ ತಯಾರಿಸುವ ಉತ್ಪನ್ನಗಳಿಗೆ ಸ್ಥಿರ ಮಾಸಿಕ ಸೆಸ್ ವಿಧಿಸಲು ಅವಕಾಶವಿದೆ. ಕೇಂದ್ರ ಸರ್ಕಾರ ಮತ್ತು ರಾಷ್ಟ್ರೀಯ ಭದ್ರತೆಗಾಗಿ ಹೊಸ ಆದಾಯ ಸಂಗ್ರಹಿಸುವ ಉದ್ದೇಶದಿಂದ ಈ ಮದೂದೆಗಳನ್ನು ಪರಿಚಯಿಸಲಾಗಿದೆ ಎಂದು ಸಚಿವರು ತಿಳಿಸಿದರು. ಕೈಯಿಂದ ತಯಾರಿಸಿದ ಪಾನ್ ಮಸಾಲ ಮತ್ತು ಗುಟ್ಕಾ ಉತ್ಪನ್ನಗಳ ಮೇಲೆ ನಿಗದಿತ ಮಾಸಿಕ ಸೆಸ್ ಕಡ್ಡಾಯ. ಹೊಸ ಮಸೂದೆಯು ಕಾನೂನಾಗಿ ರೂಪುಗೊಂಡ ನಂತರ, ಗುಟ್ಕಾ ಅಥವಾ ತಂಬಾಕು ಉತ್ಪನ್ನ ತಯಾರಕರು ತಮ್ಮ ಉತ್ಪಾದನೆಯಲ್ಲಿನ ಲಾಭ–ನಷ್ಟಗಳನ್ನು ಲೆಕ್ಕಿಸದೇ ಪ್ರತಿ ತಿಂಗಳು ಸೆಸ್ ಠೇವಣಿ ಆರಂಭ. ಒಂದು ವೇಳೆ ಯಂತ್ರ ಅಥವಾ ಘಟಕವು 15 ದಿನಗಳಿಗಿಂತ ಹೆಚ್ಚು ಕಾಲ ಮುಚ್ಚಿದ್ರೆ ಆ ಒಂದು ಅವಧಿಗೆ ಮಾತ್ರ ವಿನಾಯತಿ ಅಗತ್ಯ. ಹೊಸ ಕಾನೂನು ಅಡಿಯಲ್ಲಿ, ಎಲ್ಲಾ ತಯಾರಕರು ನೋಂದಣಿ ಮಾಡಿಕೊಳ್ಳುವುದು ಕಡ್ಡಾಯವಾಗಿರುತ್ತೆ. ಜೊತೆಗೆ ಸಂಪೂರ್ಣ ಉತ್ಪಾದನೆ, ಸೆಸ್ ವಿವರಗಳೊಂದಿಗೆ ಮಾಸಿಕ ರಿಟರ್ನ್ಸ್ ಕೂಡ ಸಲ್ಲಿಸಿ. ಜೊತೆಗೆ ಸರ್ಕಾರಿ ಅಧಿಕಾರಿಗಳು ಯಾರೂ ಇಲ್ಲ ಸಮಯದಲ್ಲೂ ಕಾರ್ಖಾನೆಗಳ ಮೇಲೆ ದಾಳಿ ಮಾಡಲು ಅಥವಾ ಲೆಕ್ಕಪರಿಶೋಧಿಸಲು ಅವಕಾಶ ಕಲ್ಪಿಸಲಾಗಿದೆ.

# ಪರೋಪಕಾರದ ಸಾರ್ಥಕತೆ ಪಡೆದವರು ಪತ್ರಕರ್ತ ಸೋಮಣ್ಣ : ವೈಎಸ್‌ವಿ ದತ್ತ

**ಬೀರೂರು:** 'ಸಂಘ ಜೀವಿಯಾಗಿರುವ ಮನುಷ್ಯನ ಬದುಕು ಪರೋಪಕಾರದ ಮೂಲಕವೇ ಸಾರ್ಥಕತೆ ಪಡೆದುಕೊಳ್ಳಬೇಕಿದ್ದು, ಹಿರಿಯ ಪತ್ರಕರ್ತ ಕೆ.ಎಸ್.ಸೋಮಶೇಖರ್ ನುಡಿದಂತೆ ಬದುಕಿದವರು' ಎಂದು ಚಿಂತಕ ವೈಎಸ್‌ವಿ.ದತ್ತ ಅಭಿಪ್ರಾಯಪಟ್ಟರು.

ಪಟ್ಟಣದ ಶ್ರೀ ಪಟ್ಟಾಭಿರಾಮ ಚಂದ್ರಮೌಳೇಶ್ವರ ದೇವಾಲಯದ ಆವರಣದಲ್ಲಿ ಹಿರಿಯ ಪತ್ರಕರ್ತ ಕೆ.ಎಸ್.ಸೋಮಶೇಖರ್ ಅವರ ಶ್ರದ್ಧಾಂಜಲಿ ಸಭೆಯಲ್ಲಿ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಅವರು ಮಾತನಾಡಿದರು.

ಪತ್ರಕರ್ತನಿಗೆ ಸಮಾಜಮುಖಿ ಚಿಂತನೆಯೇ ಜೀವಾಳ, ಪತ್ರಕರ್ತರ ಸಂಘಟನೆ ಹುಟ್ಟುಹಾಕಿದ ಡಿ.ವಿ. ಗುಂಡಪ್ಪನವರು ತಮ್ಮ ಸಂಪರ್ಕಗಳನ್ನು ಬಳಸಿಕೊಂಡಿದ್ದರೆ ಜೀವನದಲ್ಲಿ ಪರದಾಡುವಂತಹ ಪ್ರಸಂಗವೇ ಎದುರಾಗುತ್ತಿರಲಿಲ್ಲ. ಅವರ ಮಾರ್ಗವನ್ನು ಅನುಸರಿಸಿ ಬದುಕುವ ಹಂಬಲವಿಟ್ಟುಕೊಂಡು, ತಮ್ಮ ಸಂಪರ್ಕವನ್ನು ಸ್ವಾರ್ಥ–ಕ್ಕೆ ಬಳಸಿಕೊಳ್ಳದೆ ಇನ್ನೊಬ್ಬರಿಗೆ ಕಿಂಚಿತ್ತಾದರೂ ನೆರವಾಗಬೇಕು ಎನ್ನುವ, ಎಲ್ಲಾ ಜಾತಿ ಮತ್ತು ಧರ್ಮಕ್ಕೂ ಮೀರಿ ಸಾಮಾಜಿಕ ಚಟುವಟಿಕೆಗಳಲ್ಲಿ ಕಳಕಳಿಯಿಂದ ಕ್ರಿಯಾಶೀಲ ಬದುಕು ರೂಪಿಸಿಕೊಂಡವರು ಬೀರೂರು ಸೋಮಣ್ಣ ಎಂದು ಬಣ್ಣಿಸಿದರು.

ಶ್ರೀ ಪಟ್ಟಾಭಿರಾಮ ಚಂದ್ರಮೌಳೇಶ್ವರ ದೇವಸ್ಥಾನದ ಕಾರ್ಯದರ್ಶಿಯಾಗಿದ್ದ ಅವರಿಗೆ 'ಶ್ರೀರಾಮ ಕುಟೀರ' ಎಂಬ ಸಮುದಾಯ ಭವನ ನಿರ್ಮಿಸುವ ಕನಸಿತ್ತು. ಅವರ ಆಶಯದಂತೆ ಸಮುದಾಯ ಭವನ ನಿರ್ಮಾಣಕ್ಕೆ ಎಲ್ಲರ ಮನವೊಲಿಸಿ ನನ್ನಿಂದಾದ ಸಹಕಾರ ನೀಡುತ್ತೇನೆ ಎಂದು ಭರವಸೆ ನೀಡಿದರು.

ಮಾಲು ಸ್ಲೀಪರ್ಸ್ ವ್ಯವಸ್ಥಾಪಕ ವೆಂಕಟೇಶ ಜಿ.ಒಡೆಯರ್, 'ಸೋಮಣ್ಣ ಕೇವಲ ಪತ್ರಕರ್ತರಾಗಿ ಮಾತ್ರವಲ್ಲದೆ ಸಮಾಜಮುಖಿ ಚಟುವಟಿಕೆಗಳಿಗಾಗಿ ಜೇಸಿಐ, ಕನ್ನಡ ಸಾಹಿತ್ಯ ಪರಿಷತ್, ವಿಪ್ರ ಸೌಹಾರ್ದ ಸಹಕಾರ ಬ್ಯಾಂಕ್, ಶ್ರೀರಾಮ ಸೇವಾ ಸಂಘ, ವಿವಿಧ ಶಾಲೆ–ಕಾಲೇಜುಗಳ ಹಿರಿಯ ವಿದ್ಯಾರ್ಥಿಗಳ ಸಂಘ ಸೇರಿದಂತೆ ಹಲವಾರು ಸಂಘಟನೆಗಳಲ್ಲಿ ಗುರುತಿಸಿಕೊಳ್ಳುವ ಜತೆಗೆ ಅಭಿವೃದ್ಧಿಪರ ಚಿಂತನೆಗಳಿಗೆ ಸದಾ ತುಡಿಯುತ್ತಿದ್ದರು' ಎಂದರು.

ಕನ್ನಡ ಸಂಘದ ಅಧ್ಯಕ್ಷ ಎಚ್.ಸಿ. ವಿಶ್ವನಾಥ್‌ಗೌಡ, ಪುರಸಭೆ ಮಾಜಿ

## ಮದ್ಯ ಮಾರಾಟ ನಿಷೇಧ

**ಚಿಕ್ಕಮಗಳೂರು, ಡಿ.2:** ಡಿಸೆಂಬರ್ 3 ರಂದು ಬೆಳಿಗ್ಗೆ 6 ಗಂಟೆಯಿಂದ ಮಧ್ಯರಾತ್ರಿ 12 ಗಂಟೆಯವರೆಗೆ ಹಾಗೂ ಚಿಕ್ಕಮಗಳೂರು ತಾಲ್ಲೂಕಿನಲ್ಲಿ ಹಾಗೂ ಚಿಕ್ಕಮಗಳೂರು, ಮೂಡಿಗೆರೆ, ಕೊಪ್ಪ, ಶೃಂಗೇರಿ ಮತ್ತು ನರಸಿಂಹರಾಜಪುರ ತಾಲ್ಲೂಕುಗಳ ವ್ಯಾಪ್ತಿಯಲ್ಲಿ ಡಿಸೆಂಬರ್ 4 ರಂದು ಬೆಳಿಗ್ಗೆ 6 ಗಂಟೆಯಿಂದ ಮಧ್ಯರಾತ್ರಿ 12 ಗಂಟೆಯವರೆಗೆ ಎಲ್ಲಾ ನಮೂನೆಯ ಮದ್ಯದಂಗಡಿಗಳನ್ನು (ಕೆ.ಎಸ್.ಬಿ.ಸಿ.ಎಲ್. ಹೊರತುಪಡಿಸಿ) ಮುಚ್ಚುವಂತೆಯೂ ಹಾಗೂ ಮದ್ಯ, ಬಿಯರ್ ಇತ್ಯಾದಿ ಅಬಕಾರಿ ಪದಾರ್ಥಗಳ ಸಾಗಾಣಿಕೆ, ಶೇಖರಣೆ, ತಯಾರಿಕೆ, ಸರಬರಾಜು ಮತ್ತು ಮಾರಾಟ ಮಾಡುವುದನ್ನು ನಿಷೇಧಿಸಿ ಜಿಲ್ಲಾ ದಂಡಾಧಿಕಾರಿಗಳು ಹಾಗೂ ಜಿಲ್ಲಾಧಿಕಾರಿಗಳು ಆದ ಸಿ. ಎನ್.ಮೀನಾ ನಾಗರಾಜ್ ಅವರು ಆದೇಶ ಹೊರಡಿಸಿದ್ದಾರೆ.

## ನಗರದಲ್ಲಿ ವಿದ್ಯುತ್ ವ್ಯತ್ಯಯ

ಚಿಕ್ಕಮಗಳೂರು, ಡಿ.2: ನಗರದ ಗ್ರಾಮೀಣ ವ್ಯಾಪ್ತಿಯಲ್ಲಿ ಹೊಸದಾದ 11 ಕೆ.ವಿ ಇಂಡಸ್ಟ್ರೀಯಲ್ ಫೀಡರ್ ಮಾರ್ಗವನ್ನು ನಿರ್ಮಿಸುವ ಕಾಮಗಾರಿ ಹಮ್ಮಿಕೊಂಡಿರುವುದರಿಂದ ಈ ಕೇಂದ್ರದಿಂದ ಹೊರಹೊಮ್ಮುವ 66/11 ಕೆ.ವಿ.ವಿ ಕೇಂದ್ರ ಹಿರೇಮಗಳೂರು, 11 ಕೆ.ವಿ ಇಂಡಸ್ಟ್ರೀಯಲ್ ಫೀಡರ್, 11 ಕೆ.ವಿ ಕೆ.ಆರ್ ಪೇಟೆ ಫೀಡರ್, 11 ಕೆ.ವಿ ವಸ್ತಾರೆ ಫೀಡರ್‌ಗಳ ವ್ಯಾಪ್ತಿಗೆ ಬರುವ ಅಂಬಳೆ ಇಂಡಸ್ಟ್ರೀಯಲ್ ಏರಿಯಾ, ಸಿರ್ಗಾಪುರ, ಮಳಲೂರು, ಗಂಜಲಗೂಡು, ಬಾಣಾವರ, ವಸ್ತಾರೆ, ಬಾಚಿಗನಹಳ್ಳಿ, ಕೂದುವಳ್ಳಿ, ಕೋಡುವಳ್ಳಿ, ಹಲಸುಮನೆ, ಹಚಡಮನೆ, ಕಲ್ಲುಗುಡ್ಡೆ, ಅಂಬಳೆ, ಗೌಡನಹಳ್ಳಿ, ಹಾಗೂ ಸುತ್ತ ಮತ್ತಲಿನ ಪ್ರದೇಶಗಳಿಗೆ ಡಿಸೆಂಬರ್ 4 ಮತ್ತು 7 ರಂದು ಬೆಳಿಗ್ಗೆ 10 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ವಿದ್ಯುತ್ ನಿಲುಗಡೆಯಾಗಲಿದೆ.

# ವಕೀಲರ ಮಾನಸಿಕ ಒತ್ತಡ ನಿವಾರಣೆಗೆ ಕ್ರೀಡಾಕೂಟ ಸಹಕಾರಿ : ನ್ಯಾ. ರಾಜೇಶ್ವರಿ

**ಚಿಕ್ಕಮಗಳೂರು:** ಸದಾಕಾಲ ನ್ಯಾಯಾಲಯದ ಕಚೇರಿಯಲ್ಲಿ ವಾದ–ಪ್ರತಿವಾದ ನಿರತರಾಗುವ ವಕೀಲರಿಗೆ ಕ್ರೀಡಾಕೂಟ ಏರ್ಪಡಿಸಿ ಮಾನಸಿಕ ಒತ್ತಡವನ್ನು ಹತೋಟಿಗೆ ತರಲು ಮುಂದಾಗಿರುವುದು ಆರೋಗ್ಯಾಧಿಕಾರಿ ಬೆಳವಣಿಗೆ ಎಂದು ಪ್ರಧಾನ ಜಿಲ್ಲಾ ಹಾಗೂ ಸೆಷನ್ಸ್ ನ್ಯಾಯಾಧೀಶೆ ರಾಜೇಶ್ವರಿ ಹೇಳಿದರು.

ನಗರದ ಜಿಲ್ಲಾ ಸುಭಾಶ್‌ಚಂದ್ರ ಆಟದ ಮೈದಾನದಲ್ಲಿ ಇಂದು ಚಿಕ್ಕಮಗಳೂರು ವಕೀಲರ ಸಂಘದಿಂದ ವಕೀಲರ ದಿನಾಚರಣೆ ಪ್ರಯುಕ್ತ ಆಯೋಜಿಸಿದ್ಧ ಕ್ರೀಡಾಕೂಟ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕ್ರೀಡಾಕೂಟ ಚಟುವಟಿಕೆ ಮನುಷ್ಯನಲ್ಲಿ ಪ್ರತಿದಿನವು ಇರಬೇಕು. ನ್ಯಾಯಾಲಯದ ಪ್ರಕರಣಗಳಲ್ಲಿ ನಿರತರಾಗುವ ವಕೀಲರಿಗೆ ಬಹುಮುಖ್ಯವಾಗಿದೆ. ಆ ನಿಟ್ಟಿನಲ್ಲಿ ಕನಿಷ್ಠ



ಆರು ತಿಂಗಳಿಗೊಮ್ಮೆ ಈ ರೀತಿಯ ಕ್ರೀಡಾಕೂಟ ನಡೆಸಿದರೆ ಮಾನಸಿಕ, ದೈಹಿಕ ಸದೃಢವಾಗುವ ಜೊತೆಗೆ ಮೆದುಳು ಚುರುಕುತನದಿಂದ ಕೂಡಿರಲಿದೆ ಎಂದು ತಿಳಿಸಿದರು.

ವಕೀಲ ಮಿತ್ರರು ಕೆಲದಿನ ವೃತ್ತಿಯ ಒತ್ತಡವನ್ನು ಬದಿಗಿರಿಸಿ, ಒಂದಾಗಿ ಉತ್ಸಾಹದಿಂದ ಕ್ರೀಡಾಕೂಟ ಚಟುವಟಿಕೆಗಳಲ್ಲಿ ಭಾಗಿಯಾಗಬೇಕು. ಕ್ರೀಡೆಯಿಂದ ಶಾರೀರಿಕ ಸಾಮರ್ಥ್ಯ ಹೆಚ್ಚಿಸಿಕೊಳ್ಳಬಹುದು ಎಂದ ಅವರು, ಗೆಲುವು–ಸೋಲಿನ ಬಗ್ಗೆ ಚಿಂತೆಗೆ ಒಳಗಾಗದೇ ಭಾಗವಹಿಸುವಿಕೆಯೇ ದೊಡ್ಡ ಗೆಲುವೆಂದು ಪರಿಗಣಿಸಬೇಕು ಎಂದು ಹೇಳಿದರು.

ವಕೀಲರ ಸಂಘದ ಅಧ್ಯಕ್ಷ ಡಿ.ಬಿ.ಸುಜೇಂದ್ರ ಮಾತನಾಡಿ, ಸ್ಪರ್ಧೆಗಳಲ್ಲಿ ವಕೀಲರು ಕ್ರೀಡಾ ಮನೋಭಾವದಿಂದ ಭಾಗವಹಿಸಬೇಕು. ಅಂಪೈರ್ ಅಂತಿಮ ತೀರ್ಮಾನಕ್ಕೆ ಎಲ್ಲರೂ ಆಟಗಾರರು ಮರುಮಾತನಾಡದೆ ಒಮ್ಮತ ಸೂಚಿಸಬೇಕು ಎಂದು ತಿಳಿಸಿದರು.

ಆರೋಗ್ಯಪೂರ್ಣ ಶರೀರಕ್ಕೆ ವ್ಯಾಯಾಮವು ಅತ್ಯಗತ್ಯ. ದಿನದ ಕೆಲವು ಗಂಟೆಗಳಲ್ಲಿ ಆಸಕ್ತಿ ಹೊಂದಿರುವ ಕ್ರೀಡಾ ಚಟುವಟಿಕೆಗಳಲ್ಲಿ ಖುದ್ದು ಭಾಗಿಯಾಗಬೇಕು. ಆ ನಿಟ್ಟಿನಲ್ಲಿ ವಕೀಲರಿಗೆ ಎರಡು ದಿನಗಳ ಕಾಲ ವಿವಿಧ ಸ್ಪರ್ಧೆಗಳನ್ನು ಏರ್ಪಡಿಸಿದ್ದು, ವಿಶೇಷವಾಗಿ ನ್ಯಾಯಾಧೀಶರ ತಂಡಕ್ಕೆ ಸ್ಪರ್ಧೆಗಳಲ್ಲಿ ಭಾಗವಹಿಸುತ್ತಿರುವುದು ಹುರುಪು ತಂದಿದೆ ಎಂದರು.

ಕಾರ್ಯಕ್ರಮದಲ್ಲಿ ವಕೀಲರ ಸಂಘದ ಕಾರ್ಯದರ್ಶಿ ಅನಿಲ್‌ಕುಮಾರ್, ಖಜಾಂಚಿ ದೀಪಕ್, ಸಹಕಾರ್ಯದರ್ಶಿ ಪ್ರಿಯದರ್ಶಿನಿ, ಒಂದನೇ ಜಿಲ್ಲಾ ಹೆಚ್ಚುವರಿ ನ್ಯಾಯಾಧೀಶೆ ಭಾನುಮತಿ, ಎಫ್.ಟಿ.ಎಸ್.ಸಿ. ನ್ಯಾಯಾಧೀಶ ರಾಘವೇಂದ್ರ ಕುಲಕರ್ಣಿ, ಪ್ರಧಾನ ಮತ್ತು ಹಿರಿಯ ಸಿವಿಲ್ ನ್ಯಾಯಾಧಿಶೆ ಕು.ಸುಜಾತ, ಒಂದನೇ ಹೆಚ್ಚುವರಿ ಸಿವಿಲ್ ಹಿರಿಯ ನ್ಯಾಯಾಧೀಶ ದ್ಯಾವಪ್ಪ, ಎರಡನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶೆ ಲತಾ, ಒಂದನೇ ಹೆಚ್ಚುವರಿ ನ್ಯಾಯಾಧೀಶ ಶರತ್, ಕೌಟುಂಬಿಕ ನ್ಯಾಯಾಲಯದ ನ್ಯಾಯಾಧೀಶ ಪ್ರಕಾಶ್ ಮತ್ತು ವಕೀಲರು ಉಪಸ್ಥಿತರಿದ್ದರು.

Published and Owned by : **PRATHIBHA M.S.**, Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**